VOLUME: 16 | 21 M 26 | ಶುಕ್ರವಾರ | RS: 2 | PAGE: 06 ISSUE: 54 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ರಶ್ಮಿಕಾ ಮಂದಣ್ಣ ಅವರು ಅನೇಕ ವಿಷಯಗಳಿಗೆ ಟ್ರೋಲ್ ಆದ ಉದಾಹರಣೆ ಇದೆ. ಈಗ ಅವರು ಟ್ರೋಲ್ ಮಾಡುವ ಎಲ್ಲರಿಗೂ ತಮ್ಮ ಕೆಲಸದ ಮೂಲಕ ಉತ್ತರ ನೀಡಿದ್ದಾರೆ.ತೆಲಂಗಾಣ ಗದ್ದರ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಶ್ಮಿಕಾ ಮಂದಣ್ಣ ಅವಾರ್ಡ್ ಸ್ವೀಕರಿಸಿದರು. ಅಂದರೆ ಅವರಿಗೆ ರಾಜ್ಯ ಪ್ರಶಸ್ತಿ ಸಿಕ್ಕಿದ್ದು, ಅದನ್ನು ಸಿಎಂ ಕೈಯಿಂದ ಪಡೆದರು.


BHARATHA SARATHI
KANNADA DAILY NEWS PAPER

CALL 9740160669

# ಭಾರತ ಸಾರಥಿ

RNI KARKAN2011/44806

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ




ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಮೇಟಿ ಕುಟುಂಬದ ಮಕ್ಕಳಾದ ಮಲ್ಲಿಕಾರ್ಜುನ ಮೇಟಿ ಮತ್ತು ಉಮೇಶ್ ಮೇಟಿ ನಡುವೆ ತೀವ್ರ ಪೈಪೋಟಿ ಇದೆ. ಇವರಿಬ್ಬರಲ್ಲಿ ಯಾರಿಗೆ ಟಿಕೆಟ್ ನೀಡಿದರೂ ಒಗ್ಗಟ್ಟಿನಿಂದ ಕೆಲಸ ಮಾಡುವುದಾಗಿ ಸಹೋದರರು ಹೇಳಿಕೊಂಡಿದ್ದಾರೆ. ಆದರೆ ಕೊನೆಯ ಪುತ್ರಿ ಮಹಾದೇವಿ ಮೇಟಿ ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದು, ಮಲ್ಲಿಕಾರ್ಜುನ ಮೇಟಿಗೆ ಟಿಕೆಟ್ ನೀಡಿದರೆ ಬಂಡಾಯಕ್ಕೆ ಇಳಿಯುವ ಸೂಚನೆ ನೀಡಿದ್ದಾರೆ. ಮಹಾದೇವಿ ಮೇಟಿ ತಾವು ನಾಮಪತ್ರ ಸಲ್ಲಿಸುವುದಾಗಿ ಹೇಳಿದ್ದು, ಇಂದೇ ನಾಮಪತ್ರ ಸಲ್ಲಿಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

# ಅಭ್ಯರ್ಥಿ ಆಯ್ಕೆ: ಮುಗಿಯದ ಗೊಂದಲ

ಬಾಗಲಕೋಟೆ: ಬಾಗಲಕೋಟೆ ಉಪಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಟಿಕೆಟ್ ಬಿಕ್ಕಟ್ಟು ತೀವ್ರಗೊಂಡಿದೆ. ಮಾಜಿ ಸಚಿವ, ಶಾಸಕ ದಿ. ಎಚ್‌ವೈ ಮೇಟಿ ಅವರ ಕ್ಷೇತ್ರದಲ್ಲಿ ಅಭ್ಯರ್ಥಿ ಆಯ್ಕೆ ವಿಚಾರ ಇನ್ನೂ ಗೊಂದಲದಲ್ಲೇ ಉಳಿದಿದೆ. ಈ ಬಿಕ್ಕಟ್ಟನ್ನು ಬಗೆಹರಿಸಲು ಖುದ್ದು ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಮುಂದಾಗಿ ಬೆಂಗಳೂರಿನಲ್ಲಿ ಸಭೆ ನಡೆಸಿದ್ದಾರೆ. ಮೇಟಿ ಕುಟುಂಬದ ಸದಸ್ಯರೊಂದಿಗೆ ಚರ್ಚಿಸಿ ಒಮ್ಮತ ಸಾಧಿಸಲು ಸೂಚನೆ ನೀಡಿದರೂ, ಅಂತಿಮ ನಿರ್ಧಾರಕ್ಕೆ ಬರಲಾಗಿಲ್ಲ.

ಮೇಟಿ ಕುಟುಂಬದ ಮಕ್ಕಳಾದ ಮಲ್ಲಿಕಾರ್ಜುನ ಮೇಟಿ ಮತ್ತು ಉಮೇಶ್ ಮೇಟಿ ನಡುವೆ ತೀವ್ರ ಪೈಪೋಟಿ ಇದೆ. ಇವರಿಬ್ಬರಲ್ಲಿ ಯಾರಿಗೆ ಟಿಕೆಟ್ ನೀಡಿದರೂ ಒಗ್ಗಟ್ಟಿನಿಂದ ಕೆಲಸ ಮಾಡುವುದಾಗಿ ಸಹೋದರರು ಹೇಳಿಕೊಂಡಿದ್ದಾರೆ. ಆದರೆ ಕೊನೆಯ ಪುತ್ರಿ ಮಹಾದೇವಿ ಮೇಟಿ ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದು, ಮಲ್ಲಿಕಾರ್ಜುನ ಮೇಟಿಗೆ ಟಿಕೆಟ್ ನೀಡಿದರೆ ಬಂಡಾಯಕ್ಕೆ ಇಳಿಯುವ ಸೂಚನೆ



ನೀಡಿದ್ದಾರೆ.

ಮಹಾದೇವಿ ಮೇಟಿ ತಾವು ನಾಮಪತ್ರ ಸಲ್ಲಿಸುವುದಾಗಿ ಹೇಳಿದ್ದು, ಇಂದೇ ನಾಮಪತ್ರ ಸಲ್ಲಿಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ. ಅವರ ಇಚ್ಛೆಯಂತೆ ಉಮೇಶ್ ಮೇಟಿಗೆ ಟಿಕೆಟ್ ನೀಡಿದರೆ ಮಾತ್ರ ಒಮ್ಮತ ಸಾಧ್ಯ ಎಂಬ ಮಾತು ಕೇಳಿಬರುತ್ತಿದೆ.

ಇನ್ನೊಂದೆಡೆ, ಯಾರಿಗೆ ಟಿಕೆಟ್ ನೀಡಿದರೂ ಪಕ್ಷದ ಗೆಲುವಿಗಾಗಿ ಶ್ರಮಿಸುವುದಾಗಿ ಮತ್ತೊಬ್ಬ ಪುತ್ರಿ ಬಾಯಕ್ಕ ಮೇಟಿ ಹೇಳಿದ್ದಾರೆ. ಆದರೂ ಕುಟುಂಬದ ಒಳಜಗಳ ಕಾಂಗ್ರೆಸ್‌ಗೆ ತಲೆನೋವಾಗಿ ಪರಿಣಮಿಸಿದ್ದು, ಇದು ಬಿಜೆಪಿ ಪಾಲಿಗೆ ಲಾಭವಾಗುವ ಸಾಧ್ಯತೆಯೂ ಇದೆ.

ಒಟ್ಟಿನಲ್ಲಿ, ಮಲ್ಲಿಕಾರ್ಜುನ ಮೇಟಿಗೆ ಟಿಕೆಟ್ ನೀಡಿದರೆ ಬಂಡಾಯದ ಬಿಸಿ ಎದುರಾಗುವ ಸಾಧ್ಯತೆ ಇದ್ದು, ಉಮೇಶ್ ಮೇಟಿಗೆ ಟಿಕೆಟ್ ನೀಡಿದರೆ ಒಗ್ಗಟ್ಟು ಸಾಧಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

ಅಂತಿಮವಾಗಿ ಕಾಂಗ್ರೆಸ್ ನಾಯಕತ್ವ ಯಾವ ನಿರ್ಧಾರ ಕೈಗೊಳ್ಳುತ್ತದೆ ಎಂಬುದು ಕುತೂಹಲ ಮೂಡಿಸಿದೆ.

# ವರ್ಗಾವಣೆಯಲ್ಲಿ ಸಿಎಂ ಹಸ್ತಕ್ಷೇಪ: ಹೈಕೋರ್ಟ್ ಗಂಭೀರವಾಗಿ ಪ್ರಶ್ನೆ

ಬೆಂಗಳೂರು: ರಾಜ್ಯ ಸರ್ಕಾರಿ ನೌಕರರ ವರ್ಗಾವಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಸ್ತಕ್ಷೇಪ ಮಾಡುತ್ತಿರುವುದನ್ನು ಹೈಕೋರ್ಟ್ ಗಂಭೀರವಾಗಿ ಪ್ರಶ್ನಿಸಿದೆ.

ಬೆಸ್ಕಾಂ ಎಇ ಎಸ್. ಚೇತನ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಡಿ.ಕೆ. ಸಿಂಗ್ ಮತ್ತು ಟಿ.ಎಂ. ನದಾಫ್ ಅವರಿದ್ದ ಹೈಕೋರ್ಟ್ ಪೀಠ, ವರ್ಗಾವಣೆ ಪ್ರಕ್ರಿಯೆಯಲ್ಲಿ ಮುಖ್ಯಮಂತ್ರಿಗಳ ನೇರ ಹಸ್ತಕ್ಷೇಪದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದೆ.

ಸರ್ಕಾರಿ ನೌಕರರ ವರ್ಗಾವಣೆ ವಿಚಾರವನ್ನು ಸಂಬಂಧಿಸಿದ ಇಲಾಖೆಗಳೇ ನಿರ್ವಹಿಸಬೇಕು. ಮುಖ್ಯಮಂತ್ರಿಗಳ ಕಚೇರಿ ಇಂತಹ ಮನವಿಗಳನ್ನು ಸ್ವೀಕರಿಸುವುದು ಸರಿಯಲ್ಲ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ಮಾಡಲು ಮುಖ್ಯಮಂತ್ರಿಗಳಿಗೆ ಇನ್ನಷ್ಟು ಮಹತ್ವದ ಕೆಲಸಗಳಿದ್ದು, ಇಂತಹ ವಿಷಯಗಳಿಗೆ ಸಮಯ ವ್ಯಯಿಸಬಾರದು ಎಂದು ಸೂಚಿಸಿದೆ. ಈ ಸಂಬಂಧ ಹೈಕೋರ್ಟ್ ತನ್ನ ಆದೇಶದ ಪ್ರತಿಯನ್ನು ಮುಖ್ಯಮಂತ್ರಿಗಳಿಗೆ ಕಳುಹಿಸಲು ಸೂಚನೆ ನೀಡಿದೆ.

ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯ ಕಾರ್ಯದರ್ಶಿ, ಸಿಎಂ ಕಚೇರಿಯಿಂದ ನೀಡುವ ಟಿಪ್ಪಣಿಗಳು ಕೇವಲ ಶಿಫಾರಸುಗಳಾಗಿದ್ದು, ಅಂತಿಮ ಆದೇಶವನ್ನು ಸಂಬಂಧಪಟ್ಟ ಇಲಾಖೆ ನೀಡುತ್ತದೆ ಎಂದು ಸ್ಪಷ್ಟಪಡಿಸಿದ್ದರು.

ಮತ್ತೊಂದೆಡೆ, ಇಂಧನ ಇಲಾಖೆಯ ಅಧಿಕಾರಿಗಳ ವರ್ಗಾವಣೆ ವಿಚಾರದಲ್ಲಿಯೂ ಸಿಎಂ ಕಚೇರಿ ಪಾತ್ರ ವಹಿಸಿದ್ದ ಕುರಿತು ರಾಜಕೀಯ ವಲಯದಲ್ಲಿ ಚರ್ಚೆಗಳು ನಡೆದಿವೆ.

ಸಿಎಂ ಪುತ್ರ ಯತೀಂದ್ರ ಸಿದ್ದರಾಮಯ್ಯ ಇಲಾಖೆಗಳ ಕಾರ್ಯಚಟುವಟಿಕೆಯಲ್ಲಿ ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂಬ ಆರೋಪಗಳೂ ಕೇಳಿಬಂದಿವೆ. ಈ ಎಲ್ಲಾ ಬೆಳವಣಿಗೆಗಳ ನಡುವೆ ಹೈಕೋರ್ಟ್ ನೀಡಿದ ಈ ತೀಕ್ಷ್ಣ ಸೂಚನೆ ರಾಜ್ಯ ರಾಜಕೀಯದಲ್ಲಿ ಮತ್ತಷ್ಟು ಚರ್ಚೆಗೆ ಕಾರಣವಾಗಿದೆ.



ಮಧ್ಯಪ್ರಾಚ್ಯದಲ್ಲಿ ಯುದ್ಧ ಉದ್ವಿಗ್ನತೆ ಹೆಚ್ಚುತ್ತಿರುವ ನಡುವೆಯೇ, ಕುವೈತ್‌ನ ಪ್ರಮುಖ ತೈಲ ಶುದ್ಧೀಕರಣ ಘಟಕವಾದ ಮಿನಾ ಅಲ್-ಅಹ್ಮದಿ ಘಟಕದ ಮೇಲೆ ಇರಾನ್ ಮತ್ತೆ ಡ್ರೋನ್ ದಾಳಿ ನಡೆಸಿದ್ದು, ಭಾರೀ ಬೆಂಕಿ ಕಾಣಿಸಿಕೊಂಡಿದೆ ಎಂದು ತಿಳಿದುಬಂದಿದೆ. ಕುವೈತ್ ಸರ್ಕಾರದ ಮಾಹಿತಿ ಪ್ರಕಾರ, ಇದೇ ಘಟಕದ ಮೇಲೆ ಗುರುವಾರವೂ ದಾಳಿ ನಡೆದಿದ್ದು, ಅದರಿಂದಲೂ ಬೆಂಕಿ ಕಾಣಿಸಿಕೊಂಡಿತ್ತು.

# ರೀಲ್ಸ್ ಹುಚ್ಚಿಗೆ ಬಿಜೆಪಿ ಮುಖಂಡನ ಮಗ ಬಲಿ

ಹುಬ್ಬಳ್ಳಿ: ವೈರಲ್ ರೀಲ್ ಮಾಡಲು ಅತಿ ವೇಗದಲ್ಲಿ ಬೈಕ್ ಮತ್ತು ಐಷಾರಾಮಿ ಕಾರು ಚಲಾಯಿಸುವಾಗ ಅಪಘಾತ ಸಂಭವಿಸಿದ್ದು ಬಿಜೆಪಿ ಮುಖಂಡನ ಪುತ್ರ ದುರಂತ ಸಾವು ಕಂಡಿದ್ದಾನೆ. ಹುಬ್ಬಳ್ಳಿಯಲ್ಲಿ ಬಿಜೆಪಿ ನಾಯಕ ವೀರೇಶ್ ಸಂಗಳದ ಅವರ ಪುತ್ರ ನಮೀಶ್ ಸಂಗಲದ್ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. 15 ವರ್ಷದ ನಮೀಶ್ ಸಂಗಳದ ಬೈಕ್ ಮತ್ತು ಆಡಿ ಕಾರು ಸವಾರಿ ಮಾಡುತ್ತಿರುವ ವಿಡಿಯೋ ಚಿತ್ರೀಕರಣ ಮಾಡುತ್ತಿದ್ದಾಗ ಅಪಘಾತ ಸಂಭವಿಸಿತ್ತು.

ಮೈಸೂರಿನಲ್ಲಿ 9ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದ ನಮೀಶ್ ಯುಗಾದಿ ರಜೆಗಾಗಿ ಹುಬ್ಬಳ್ಳಿಯ ಮನೆಗೆ ಮರಳಿದ್ದರು. ಗುರುವಾರ 15 ವರ್ಷದ ಬಾಲಕ ರೀಲ್ಸ್ ಚಿತ್ರೀಕರಣಕ್ಕಾಗಿ ತನ್ನ ಸ್ನೇಹಿತರೊಂದಿಗೆ ಶೇಜಾವಾಡಕರ್‌ಗೆ ಹೋದಾಗ ಈ ಅಪಘಾತ ಸಂಭವಿಸಿದೆ. ಸ್ಟಂಟ್ ಚಿತ್ರೀಕರಣ ಮಾಡಿ ಹೈಸ್ಪೀಡ್ ಬೈಕ್ ಮತ್ತು ಆಡಿ ಕಾರನ್ನು ಬಳಸಿ ಅಪಘಾತಕ್ಕೀಡು ಮಾಡುವುದು ಯೋಜನೆಯಾಗಿತ್ತು. ಇದು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿತ್ತು. ಅಪಘಾತಕ್ಕೆ ಕಾರಣವಾದ ಆಡಿ ಕಾರನ್ನು ಮತ್ತೊಬ್ಬ 15 ವರ್ಷದ ಬಾಲಕ ಚಲಾಯಿಸುತ್ತಿದ್ದನು.

ರೀಲ್‌ಗಳನ್ನು ಚಿತ್ರೀಕರಿಸುತ್ತಿರುವಾಗ, ವೇಗವಾಗಿ ಬಂದ ಕಾರು ನಮೀಶ್ ಸವಾರಿ ಮಾಡುತ್ತಿದ್ದ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ಪರಿಣಾಮವಾಗಿ ನಮೀಶ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮಾಹಿತಿ ಪಡೆದ ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ವಿದ್ಯಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅಪಘಾತಕ್ಕೆ ಕಾರಣರಾದ ಅಪ್ರಾಪ್ತ ಬಾಲಕನನ್ನು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಲೈಸೆನ್ಸ್ ಇಲ್ಲದ ಮಗುವಿಗೆ ಐಷಾರಾಮಿ ಕಾರು ನೀಡಿದ ಪ್ರಕರಣದ ಬಗ್ಗೆಯೂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.



ದಾವಣಗೆರೆ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಗೆ ಪಕ್ಷದ ಅಭ್ಯರ್ಥಿ ಆಯ್ಕೆ ಸಂಬಂಧ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರುಬೆಂಗಳೂರಿನ ಖಾಸಗಿ ಹೊಟೇಲ್ ನಲ್ಲಿ ಸಿಎಂ ಸಿದ್ಧರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಜತೆ ಶುಕ್ರವಾರ ಚರ್ಚೆ ನಡೆಸಿದರು. ಎಐಸಿಸಿ ಕಾರ್ಯದರ್ಶಿ ಅಭಿಷೇಕ್ ದತ್ ಅವರು ಇದ್ದರು.

# 15 ದಿನದ ಮಗುವನ್ನು ಕೊಂದ ತಂದೆ

ಬೆಳಗಾವಿ: ಜಿಲ್ಲೆಯ ಉಕ್ಕಡ ಗ್ರಾಮದಲ್ಲಿ 15 ದಿನಗಳ ಶಿಶುವಿಗೆ ತಂದೆ ವಿಷ ನೀಡಿ ಕೊಂದಿರುವ ಆಘಾತಕಾರಿ ಘಟನೆ ನಡೆದಿದೆ. ತಾಯಿ ತನ್ನ ಪತಿ ಭೀಮರಾಯ ತಮ್ಮ ನವಜಾತ ಶಿಶುವಿಗೆ ವಿಷ ನೀಡಿದ್ದಾನೆ ಎಂದು ಆರೋಪಿಸಿದ್ದಾರೆ. ಶಿಶು ಕೇವಲ ಎರಡು ವಾರಗಳ ಹಿಂದೆ ಜನಿಸಿತ್ತು.

ಹೆರಿಗೆ ಹಿನ್ನೆಲೆ ತಾಯಿ ಶೀಲಾ ತವರು ಮನೆಯಲ್ಲಿ ವಾಸವಾಗಿದ್ದರು. ಮಾ.17ರಂದು ಮಧ್ಯಾಹ್ನ ಪತ್ನಿ ಹಾಗೂ ಮಗುವನ್ನು ಭೇಟಿ ಮಾಡಲು ಬಂದ ತಂದೆ ಭೀಮರಾಯ ಕೆಲಕಾಲ ಅವರೊಂದಿಗೆ ಕಾಲ ಕಳೆದ ಬಳಿಕ ತನ್ನ ಊರಿಗೆ ಮರಳಿದ್ದಾನೆ. ಆದರೆ ಆತ ಹೋದ ಕೆಲವೇ ಹೊತ್ತಿನಲ್ಲಿ ಮಗು ಏಕಾಏಕಿ ಸಾವನ್ನಪ್ಪಿರುವುದು ಕುಟುಂಬಸ್ಥರಲ್ಲಿ ಆತಂಕ ಮೂಡಿಸಿದೆ.

ಮಗು ಆರೋಗ್ಯವಾಗಿದ್ದರೂ ದಿಢೀರ್ ಸಾವಿಗೆ ಕಾರಣ ಏನು ಎಂಬ ಪ್ರಶ್ನೆ ಎದ್ದಿದೆ. ಇದೇ ವೇಳೆ ಭೀಮರಾಯ ಸಣ್ಣ ಮಾತ್ರೆ ತಂದು ಮಗುವಿಗೆ ಏನೋ ಕುಡಿಸಿದ್ದಾನೆ.

# ಕಾಂಗ್ರೆಸ್ ಟಿಕೆಟ್ ಘೋಷಣೆ?

ದಾವಣಗೆರೆ: ನಾಳೆ ಬೆಂಗಳೂರಿನಲ್ಲಿ ಉಸ್ತುವಾರಿ ಸಮಿತಿ ಮೀಟಿಂಗ್ ಇದೆ. ಶನಿವಾರ ಟಿಕೆಟ್ ಘೋಷಣೆ ಆಗುವ ನಿರೀಕ್ಷೆ ಇದೆ. ಅದರಲ್ಲೂ ನಿನ್ನೆ ಬಿಜೆಪಿ ಅಭ್ಯರ್ಥಿಯ ಟಿಕೆಟ್ ಘೋಷಣೆಯಾಗಿದೆ. ಶ್ರೀನಿವಾಸ್ ಕೂಡ ಒಳ್ಳೆಯ ಸ್ನೇಹಿತ. ನಗುನಗುತ್ತಾ ಚುನಾವಣೆ ಮಾಡೋಣ ಎಂದು ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಹೇಳಿದರು.

ದಾವಣಗೆರೆ ನಿವಾಸದಲ್ಲಿ ಮಾತನಾಡಿದ ಅವರು, ದಾವಣಗೆರೆ ಜನತೆಗೆ ಅಭಿವೃದ್ಧಿ ಕಾರ್ಯಕ್ರಮ ನೀಡೋಣ. ನಮ್ಮ ಅಭ್ಯರ್ಥಿ ಯಾರೇ ಆದರೂ ಗೆಲ್ಲಿಸುವ ಕೆಲಸ ಮಾಡುತ್ತೇವೆ. ನಿನ್ನೆ ದಾವಣಗೆರೆಯಲ್ಲಿ ಮೀಟಿಂಗ್ ಕರೆದಿದ್ದರು. ಆದರೆ ನನ್ನನ್ನು ಬಿಟ್ಟಿದ್ದರು. ಅಭ್ಯರ್ಥಿ ಪರವಾಗಿ ಮಾತನಾಡಿದಂತೆ ಆಗುತ್ತೆ ಎಂದು ಬೇಡ ಅಂದ್ರು ಸುಮ್ಮನಾದೆ. ನಿಮ್ಮ ಯಾವುದೇ ನಿರ್ಣಯಕ್ಕೆ ನಾನು ಬದ್ದ ಎಂದು ಉಸ್ತುವಾರಿ ಸಮಿತಿಗೆ ಹೇಳಿದ್ದೇನೆ ಎಂದರು.

ಉಸ್ತುವಾರಿ ಸಮಿತಿ ಸಭೆ ವೇಳೆ ಗಲಾಟೆ ಗೊಂದಲ ವಿಚಾರವಾಗಿ ಮಾತನಾಡಿ, ಅಲ್ಲಿಗೆ ಬಂದು ಗಲಾಟೆ ಕಾರ್ಯಕರ್ತರಲ್ಲ. ಅವರನ್ನು ನಾವು ಪಕ್ಷದಲ್ಲಿ ಯಾವತ್ತೂ ನೋಡಿಲ್ಲ. ಹೊಸ ಮುಖಗಳು ಇವೆ. ದಳದಿಂದ ಬಂದವರು ಸಾಕಷ್ಟು ಜನರಿದ್ದರು. ಮೊದಲು ಹಿಂದೆ ನಿಂತುಕೊಂಡು ಮಾಡ್ತಾ ಇದ್ರು, ಈಗ ಮುಂದೆ ಬಂದಿದ್ದಾರೆ ಎಂದರು.

ಯತ್ನಾಳ್ ಹೇಳಿಕೆಗೆ ನಗುನಗುತ್ತಾ ಉತ್ತರ ಕೊಟ್ಟ ಸಚಿವ ಎಸ್ .ಎಸ್.ಮಲ್ಲಿಕಾರ್ಜುನ್, ಅವರ ಹೇಳಿಕೆಗೆ ಅವರನ್ನೇ ಕೇಳಿ, ಅವರ ಮದುವೆಯಾಗಿಲ್ವಲ್ಲ ಅದಕ್ಕೆ ಹಂಗೆ ಹೇಳಿರಬಹುದು. ಅವರು ಹೊಂದಾಣಿಕೆ ರಾಜಕೀಯದ ಬಗ್ಗೆ ನಾನೇನು ಹೇಳೋದಿಲ್ಲ.

# ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಪ್ರಕಟ

ಬೆಂಗಳೂರು: ರಾಜ್ಯದ ಕುತೂಹಲ ಕೆರಳಿಸಿರುವ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರಗಳ ಉಪಚುನಾವಣೆಗೆ ಬಿಜೆಪಿ ಹೈಕಮಾಂಡ್ ಅಭ್ಯರ್ಥಿಗಳ ಹೆಸರನ್ನು ಅಧಿಕೃತವಾಗಿ ಪ್ರಕಟಿಸಿದೆ.

ಬಾಗಲಕೋಟೆಯಿಂದ ನಿರೀಕ್ಷೆಯಂತೆ ಮಾಜಿ ಶಾಸಕ ವೀರಭದ್ರಯ್ಯ ಚರಂತಿಮಠ ಅವರಿಗೆ ಟಿಕೆಟ್ ನೀಡಲಾಗಿದ್ದರೆ, ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಶ್ರೀನಿವಾಸ ಟಿ.ದಾಸಕರಿಯಪ್ಪ ಅವರಿಗೆ ಅವಕಾಶ ನೀಡುವ ಮೂಲಕ ಪಕ್ಷವು ಅಚ್ಚರಿಯ ನಡೆ ಪ್ರದರ್ಶಿಸಿದೆ. ದಾವಣಗೆರೆ ದಕ್ಷಿಣದಲ್ಲಿ ಬಿಜೆಪಿ ತನ್ನ ಅಭ್ಯರ್ಥಿಯಾಗಿ ಶ್ರೀನಿವಾಸ್ ದಾಸ ಕರಿಯಪ್ಪ ಅವರನ್ನು ಕಣಕ್ಕಿಳಿಸಿದೆ.

ಬಿ.ಜೆ.ಅಜಯ್ ಕುಮಾರ್ ಅವರಿಗೆ ಟಿಕೆಟ್ ನೀಡಬೇಕು ಎಂದು ಬಿಎಸ್ ಯಡಿಯೂರಪ್ಪ ಬಣ ಪಟ್ಟು ಹಿಡಿದಿತ್ತು. ಆದರೆ ಹೈಕಮಾಂಡ್ ಅಚ್ಚರಿಯ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಇದು ಬಿಎಸ್‌ವೈ ಬಣಕ್ಕೆ ಆದ ಹಿನ್ನಡೆ ಎಂದೇ ವ್ಯಾಖ್ಯಾನಿಸಲಾಗುತ್ತಿದೆ.

ದಾವಣಗೆರೆ ದಕ್ಷಿಣದಲ್ಲಿ ಜಾತಿ ಲೆಕ್ಕಾಚಾರದ ತಂತ್ರವನ್ನು ಬಿಜೆಪಿ ಹೆಣೆದಿದೆ. ಎಸ್‌ಟಿ ಸಮುದಾಯದ ಟಿ.ಶ್ರೀನಿವಾಸದಾಸ ಕರಿಯಪ್ಪಗೆ ಟಿಕೆಟ್ ನೀಡಿದೆ. ಈ ಮೂಲಕ ಅಹಿಂದ ಮತ್ತು ಲಿಂಗಾಯತ ವರ್ಗದ ಮತಗಳ ಮೇಲೆ ಪಕ್ಷ ಕಣ್ಣಿಟ್ಟಿದೆ.ಲಿಂಗಾಯತ ಸಮುದಾಯದ ಪ್ರಭಾವಿ ನಾಯಕ ವೀರಣ್ಣ ಚರಂತಿಮಠ್ ಅವರಿಗೆ ಬಿಜೆಪಿ ಮತ್ತೆ ಮಣೆ ಹಾಕಿದೆ. ಬಾಗಲಕೋಟೆಯಿಂದ ನಿರೀಕ್ಷೆಯಂತೆ ಮಾಜಿ ಶಾಸಕ ವೀರಭದ್ರಯ್ಯ ಚರಂತಿಮಠ ಅವರಿಗೆ ಟಿಕೆಟ್ ನೀಡಲಾಗಿದ್ದರೆ, ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಶ್ರೀನಿವಾಸ ಟಿ.ದಾಸಕರಿಯಪ್ಪ ಅವರಿಗೆ ಅವಕಾಶ ನೀಡುವ ಮೂಲಕ ಪಕ್ಷವು ಅಚ್ಚರಿಯ ನಡೆ ಪ್ರದರ್ಶಿಸಿದೆ. ದಾವಣಗೆರೆ ದಕ್ಷಿಣದಲ್ಲಿ ಬಿಜೆಪಿ ತನ್ನ ಅಭ್ಯರ್ಥಿಯಾಗಿ ಶ್ರೀನಿವಾಸ್ ದಾಸ ಕರಿಯಪ್ಪ ಅವರನ್ನು ಕಣಕ್ಕಿಳಿಸಿದೆ.

ಬಿ.ಜೆ.ಅಜಯ್ ಕುಮಾರ್ ಅವರಿಗೆ ಟಿಕೆಟ್ ನೀಡಬೇಕು ಎಂದು ಬಿಎಸ್ ಯಡಿಯೂರಪ್ಪ ಬಣ ಪಟ್ಟು ಹಿಡಿದಿತ್ತು. ಆದರೆ ಹೈಕಮಾಂಡ್ ಅಚ್ಚರಿಯ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಇದು ಬಿಎಸ್‌ವೈ ಬಣಕ್ಕೆ ಆದ ಹಿನ್ನಡೆ ಎಂದೇ ವ್ಯಾಖ್ಯಾನಿಸಲಾಗುತ್ತಿದೆ.

ದಾವಣಗೆರೆ ದಕ್ಷಿಣದಲ್ಲಿ ಜಾತಿ ಲೆಕ್ಕಾಚಾರದ ತಂತ್ರವನ್ನು ಬಿಜೆಪಿ ಹೆಣೆದಿದೆ. ಎಸ್‌ಟಿ ಸಮುದಾಯದ ಟಿ.ಶ್ರೀನಿವಾಸದಾಸ ಕರಿಯಪ್ಪಗೆ ಟಿಕೆಟ್ ನೀಡಿದೆ. ಈ ಮೂಲಕ ಅಹಿಂದ ಮತ್ತು ಲಿಂಗಾಯತ ವರ್ಗದ ಮತಗಳ ಮೇಲೆ ಪಕ್ಷ ಕಣ್ಣಿಟ್ಟಿದೆ.ಲಿಂಗಾಯತ ಸಮುದಾಯದ ಪ್ರಭಾವಿ ನಾಯಕ ವೀರಣ್ಣ ಚರಂತಿಮಠ್ ಅವರಿಗೆ ಬಿಜೆಪಿ ಮತ್ತೆ ಮಣೆ ಹಾಕಿದೆ. ಕ್ಷೇತ್ರದಲ್ಲಿ ಲಿಂಗಾಯತ ಮತಗಳ ಪ್ರಾಬಲ್ಯ ಹೆಚ್ಚಿರುವು ದರಿಂದ ಬಿಜೆಪಿ ಈ ನಿರ್ಧಾರ ತೆಗೆದುಕೊಂಡಿದೆ.ಕುರುಬ ಸಮುದಾಯದ ಜಿ.ಬಿ.ವಿನಯ್ ಕುಮಾರ್ ಅವರನ್ನು ಕಣಕ್ಕಿಳಿಸುವ ಬಗ್ಗೆ ಬಲವಾದ ಮಾತುಗಳು ಕೇಳಿ ಬರುತ್ತಿದ್ದವು.

2024 ರ ಲೋಕಸಭಾ ಚುನಾವಣೆಯಲ್ಲಿ ದಾವಣಗೆರೆ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಲು ಪ್ರಯತ್ನಿಸಿ ವಿಫಲರಾದ ವಿನಯ್, ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ 42,907 ಮತಗಳನ್ನು ಗಳಿಸಿದ್ದರು.

ದಾವಣಗೆರೆಗೆ ಅಚ್ಚರಿ ಅಭ್ಯರ್ಥಿ ಆದರೆ, ಅಚ್ಚರಿ ಎಂಬಂತೆ ಬಿಜೆಪಿ ಹೈ ಕಮಾಂಡ್ ಸ್ಥಳೀಯ ಬಣ ರಾಜಕೀಯ ಮಧ್ಯೆ ಎಸ್‌ಟಿ ಸಮುದಾಯದ ಶ್ರೀನಿವಾಸ ದಾಸ ಕರಿಯಪ್ಪರಿಗೆ ಮಣೆ ಹಾಕಿದೆ.

ಕ್ಷೇತ್ರದಲ್ಲಿ ಲಿಂಗಾಯತ ಮತಗಳ ಪ್ರಾಬಲ್ಯ ಹೆಚ್ಚಿರುವು ದರಿಂದ ಬಿಜೆಪಿ ಈ ನಿರ್ಧಾರ ತೆಗೆದುಕೊಂಡಿದೆ.ಕುರುಬ ಸಮುದಾಯದ ಜಿ.ಬಿ.ವಿನಯ್ ಕುಮಾರ್ ಅವರನ್ನು ಕಣಕ್ಕಿಳಿಸುವ ಬಗ್ಗೆ ಬಲವಾದ ಮಾತುಗಳು ಕೇಳಿ ಬರುತ್ತಿದ್ದವು.

2024 ರ ಲೋಕಸಭಾ ಚುನಾವಣೆಯಲ್ಲಿ ದಾವಣಗೆರೆ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಲು ಪ್ರಯತ್ನಿಸಿ ವಿಫಲರಾದ ವಿನಯ್, ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ 42,907 ಮತಗಳನ್ನು ಗಳಿಸಿದ್ದರು. ದಾವಣಗೆರೆಗೆ ಅಚ್ಚರಿ ಅಭ್ಯರ್ಥಿ ಆದರೆ, ಅಚ್ಚರಿ ಎಂಬಂತೆ ಬಿಜೆಪಿ ಹೈ ಕಮಾಂಡ್ ಸ್ಥಳೀಯ ಬಣ ರಾಜಕೀಯ ಮಧ್ಯೆ ಎಸ್‌ಟಿ ಸಮುದಾಯದ ಶ್ರೀನಿವಾಸ ದಾಸ ಕರಿಯಪ್ಪರಿಗೆ ಮಣೆ ಹಾಕಿದೆ.

# ಆನ್‌ಲೈನ್ ಆಪ್‌ಗಳ ಬ್ಯಾನ್

ನವದೆಹಲಿ: ಭಾರತದಲ್ಲಿ ಒಟ್ಟು 8,400 ಅಕ್ರಮ ವೆಬ್‌ಸೈಟ್‌ಗಳನ್ನು ನಿರ್ಬಂಧಿಸಿರುವ ಕೇಂದ್ರ ಸರ್ಕಾರ ಆನ್‌ಲೈನ್ ಗೇಮಿಂಗ್ ಕಾಯ್ದೆ ಜಾರಿಗೆ ಬಂದ ನಂತರ ಸುಮಾರು 4,900 ಸೈಟ್‌ಗಳ ಮೇಲೆ ಕ್ರಮ ತೆಗೆದುಕೊಂಡಿದೆ. ಕೇಂದ್ರ ಸರ್ಕಾರ ಅಕ್ರಮ ಬೆಟ್ಟಿಂಗ್ ಮೇಲೆ ಕಠಿಣ ಕ್ರಮ ಕೈಗೊಂಡಿದೆ. ಹಾಗೇ, 300 ವೆಬ್‌ಸೈಟ್‌ಗಳು ಮತ್ತು ಆನ್‌ಲೈನ್ ಬೆಟ್ಟಿಂಗ್ ಅಪ್ಲಿಕೇಶನ್‌ಗಳನ್ನು ನಿರ್ಬಂಧಿಸಿದೆ.

ಕೇಂದ್ರ ಸರ್ಕಾರವು ಅಕ್ರಮ ಆನ್‌ಲೈನ್ ಜೂಜು ಮತ್ತು ಬೆಟ್ಟಿಂಗ್ ಪ್ಲಾಟ್‌ಫಾರ್ಮ್‌ಗಳ ಮೇಲಿನ ಕಠಿಣ ಕ್ರಮವನ್ನು ತೀವ್ರಗೊಳಿಸಿದೆ. ಆನ್‌ಲೈನ್ ಕ್ರೀಡಾ ಬೆಟ್ಟಿಂಗ್, ಕ್ಯಾಸಿನೊ-ಶೈಲಿಯ ಗೇಮಿಂಗ್ ಮತ್ತು ಪೀರ್-ಟು-ಪೀರ್ ಬೆಟ್ಟಿಂಗ್, ಓಲ್ಡ್ ಸ್ಕೂಲ್ ಸತ್ತಾ ಆಂಡ್ ಮಟ್ಕಾ ನೆಟ್‌ವರ್ಕ್, ಕ್ಯಾಸಿನೋ ಆಪ್ ಸೇರಿದಂತೆ ವಿವಿಧ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವ ಬೆಟ್ಟಿಂಗ್ ಪ್ಲಾಟ್‌ಫಾರ್ಮ್‌ಗಳ ಮೇಲೆ ಮೋದಿ ಸರ್ಕಾರ ಕಠಿಣ ಕ್ರಮ ಕೈಗೊಂಡಿದೆ.

ಸರ್ಕಾರದ ಈ ಕ್ರಮವು ಆನ್‌ಲೈನ್ ಕ್ರೀಡಾ ಬೆಟ್ಟಿಂಗ್ ವೆಬ್‌ಸೈಟ್‌ಗಳು, ಸ್ಲಾಟ್‌ಗಳು, ರೂಲೆಟ್ ಮತ್ತು ಲೈವ್ ಡೀಲರ್ ಟೇಬಲ್‌ಗಳಂತಹ ಆಟಗಳನ್ನು ನೀಡುವ ವರ್ಚುವಲ್ ಕ್ಯಾಸಿನೊಗಳು ಮತ್ತು ಪೀರ್-ಟು-ಪೀರ್ ಇರಲಿವೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
21/03/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ರೂ.440 ಕೋಟಿ ಮೊತ್ತದ 'ಐಪಿಒ' ಮಾರ್ಚ್ 24ಕ್ಕೆ ಬಿಡುಗಡೆ

ಬೆಂಗಳೂರು

ಅಮೀರ್ ಚಂದ್ ಜಗದೀಶ್ ಕುಮಾರ್ (ಎಕ್ಸ್ ಪೋರ್ಟ್ಸ್) ಲಿಮಿಟೆಡ್ (ಕಂಪನಿ), ಪ್ರಾಥಮಿಕ ಮಾರುಕಟ್ಟೆಯಿಂದ ಬಂಡವಾಳ ಸಂಗ್ರಹಿಸಲು ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಯನ್ನು (ಐಪಿಒ) ಇದೇ 24 ರಿಂದ ಆರಂಭಿಸಲಿದೆ.

'ಐಪಿಒ'ಗೆ ಸಂಬಂಧಿಸಿದ ಬಿಡ್/ನೀಡಿಕೆಯು 2026ರ ಮಾರ್ಚ್ 24 (ಮಂಗಳವಾರ) ಆರಂಭವಾಗಲಿದ್ದು, 2026ರ ಮಾರ್ಚ್ 27ರಂದು (ಶುಕ್ರವಾರ) ಕೊನೆಗೊಳ್ಳಲಿದೆ.

ಈ 'ಐಪಿಒ' ಸಂಪೂರ್ಣವಾಗಿ ರೂ.4,400 ದಶಲಕ್ಷ ಮೊತ್ತದ (ರೂ. 440 ಕೋಟಿ ) ಹೊಸ ಬಿಡುಗಡೆಯಾಗಿದೆ. ರೂ. 10 ಮುಖಬೆಲೆಯ 82,796,840 ಈಕ್ವಿಟಿ ಷೇರುಗಳು ಇಲ್ಲಿಯವರೆಗೆ ಬಾಕಿ ಉಳಿದಿವೆ. ಕಂಪನಿಯು ರೂ.4,400 ದಶಲಕ್ಷ ಎಂದು ಅಂದಾಜಿಸಲಾಗಿರುವ ಈಕ್ವಿಟಿ ಷೇರುಗಳ ಹೊಸ ವಿತರಣೆಯಿಂದ ಬರುವ ನಿವ್ವಳ ಆದಾಯವನ್ನು ತನ್ನ ದುಡಿಯುವ ಬಂಡವಾಳದ ಅವಶ್ಯಕತೆಗಳು ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗೆ ಬಳಸಿಕೊಳ್ಳಲು ಉದ್ದೇಶಿಸಿದೆ.

ಎಮ್ ಕೆ ಗ್ಲೋಬಲ್ ಫೈನಾನ್ಶಿಯಲ್ ಸರ್ವೀಸಸ್ ಲಿಮಿಟೆಡ್ ಮತ್ತು ಕೀನೋಟ್ ಫೈನಾನ್ಶಿಯಲ್ ಸರ್ವೀಸಸ್ ಲಿಮಿಟೆಡ್, ಆರಂಭಿಕ ಸಾರ್ವಜನಿಕ ನೀಡಿಕೆ (ಐಪಿಒ) ಪ್ರಕ್ರಿಯೆ ನಿರ್ವಹಿಸುವ ಹಣಕಾಸು (ಬಿ ಆರ್ ಎಲ್ ಎಂ) ಸಂಸ್ಥೆಗಳಾಗಿವೆ.

## ಅರ್ಥಪೂರ್ಣವಾಗಿ ಬಿ.ಗುಣರಂಜನ್ ಶೆಟ್ಟಿಯವರ ಜನ್ಮದಿನಾಚರಣೆ



ಬೆಂಗಳೂರು

ಜಯಕರ್ನಾಟಕ ಜನಪರ ವೇದಿಕೆಯ ನಾಯಕರಾದ ಶ್ರೀ ಬೆಳ್ಳಿಪ್ಪಾಡಿ ಗುಣರಂಜನ್ ಶೆಟ್ಟಿ ಅವರ ಜನ್ಮದಿನವನ್ನು ರಾಜ್ಯಾದ್ಯಂತ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಬೆಂಗಳೂರಿನ ಬ್ಯಾಟರಾಯಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪುರಸಭೆ ಸಿಬ್ಬಂದಿ ಹಾಗೂ ಗ್ರಾಮಸ್ಥರಿಗೆ ಕೋಳಿ ಮತ್ತು ಸಿಹಿತಿಂಡಿ ವಿತರಿಸಿ ಮಾತನಾಡಿದ ವೇದಿಕೆಯ ರಾಜ್ಯಾಧ್ಯಕ್ಷರಾದ ಜೆ. ಶ್ರೀನಿವಾಸ್, "ಬೆಳ್ಳಿಪ್ಪಾಡಿ ಗುಣರಂಜನ್ ಶೆಟ್ಟಿ ಅವರು ಕೇವಲ ನಾಯಕರಲ್ಲ, ಅವರು ಜನಪರ ಕಾಳಜಿಯುಳ್ಳ, ಕ್ರೀಡಾ ಪ್ರೇಮಿ ಹಾಗೂ ಪರಿಸರ ಸ್ನೇಹಿ ವ್ಯಕ್ತಿತ್ವದವರು. ಅವರು ಜಯಕರ್ನಾಟಕ ಜನಪರ ವೇದಿಕೆಯ ಜವಾಬ್ದಾರಿ ವಹಿಸಿಕೊಂಡಿರುವುದು ನಮ್ಮೆಲ್ಲರಿಗೂ ತೀವ್ರ ಹರ್ಷ ತಂದಿದೆ," ಎಂದು ಬಣ್ಣಿಸಿದರು.

ಜನ್ಮದಿನದ ಅಂಗವಾಗಿ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆ, ತಾಲೂಕು, ವಿಧಾನಸಭಾ ಕ್ಷೇತ್ರ ಹಾಗೂ ಗ್ರಾಮ ಘಟಕಗಳ ಜಯಕರ್ನಾಟಕ ಜನಪರ ವೇದಿಕೆಯ ಕಾರ್ಯಕರ್ತರು ಸಾಮಾಜಿಕ ಕಳಕಳಿಯೊಂದಿಗೆ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡರು. ಸರ್ಕಾರಿ ಆಸ್ಪತ್ರೆಗಳು, ಅನಾಥಾಲಯಗಳು, ವೃದ್ಧಾಶ್ರಮಗಳು ಹಾಗೂ ಪುರಸಭೆ ಕಚೇರಿಗಳಿಗೆ ಭೇಟಿ ನೀಡಿದ ಕಾರ್ಯಕರ್ತರು, ಬಡವರಿಗೆ ಮತ್ತು ನಿರ್ಗತಿಕರಿಗೆ ಸಮವಸ್ತ್ರ, ಆಹಾರ ಮತ್ತು ದೈನಂದಿನ ಅಗತ್ಯ ವಸ್ತುಗಳನ್ನು ವಿತರಿಸುವ ಮೂಲಕ ಮಾದರಿಯಾದರು.

ವಿಶೇಷವೆಂದರೆ, ಜನ್ಮದಿನದ ಪ್ರಯುಕ್ತ ರಾಜ್ಯಾಧ್ಯಕ್ಷರಾದ ಜೆ. ಶ್ರೀನಿವಾಸ್ ಅವರು ಹುಣಸಮಾರನಹಳ್ಳಿಯ ವೃದ್ಧಾಶ್ರಮದಲ್ಲಿ ಆಶ್ರಮವಾಸಿಗಳಿಗೆ ವಿಶೇಷ ಮಾಂಸಾಹಾರಿ ಭೋಜನವನ್ನು (ಹೊಸತೊಡಕು) ಏರ್ಪಡಿಸಿದ್ದರು. ಅಲ್ಲದೆ, ಬಡವರು ಹಾಗೂ ಪುರಸಭೆ ಸಿಬ್ಬಂದಿಗಳಿಗೆ ಕೋಳಿ ವಿತರಿಸುವ ಮೂಲಕ ವಿಭಿನ್ನವಾಗಿ ಜನ್ಮದಿನ ಆಚರಿಸಿ ಸಾರ್ವಜನಿಕರ ಗಮನ ಸೆಳೆದರು.

ಈ ಅರ್ಥಪೂರ್ಣ ಕಾರ್ಯಕ್ರಮದಲ್ಲಿ ಪ್ರಮುಖರಾದ ವಿನಯ್, ಹರೀಶ್, ಮುನಿರಾಜು, ರಾಮಾಂಜಿನಪ್ಪ, ಸುದರ್ಶನ್, ಸೌಂದರ್ಯ, ಕಿರಣ್, ನಾರಾಯಣಸ್ವಾಮಿ ಸೇರಿದಂತೆ ವೇದಿಕೆಯ ಅನೇಕ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## 23ರಂದು ನೆಗಳೂರಿನಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ

ಹಾವೇರಿ

ಹಾವೇರಿ ಜಿಲ್ಲೆ ನೆಗಳೂರಿನಲ್ಲಿ ಮಾರ್ಚ 23ರಂದು ಬೆಳಿಗ್ಗೆ 11 ಗಂಟೆಗೆ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಜರುಗುವುದು. ಶ್ರೀಮದ್ ರಂಭಾಪುರಿ ವೀರಸಿಂಹಾಸನಾಧೀಶ್ವರ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಬಾಳೆಹೊನ್ನೂರು, ಶ್ರೀಮದ್ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಉಜ್ಜಯಿನಿ, ಶ್ರೀಮದ್ ಶ್ರೀಶೈಲ ಸೂರ್ಯಸಿಂಹಾಸನಾಧೀಶ್ವರ ಜಗದ್ಗುರು ಡಾ. ಚೆನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರು ಶ್ರೀಶೈಲ, ಶ್ರೀಮದ್ ಕಾಶಿ ಜ್ಞಾನಸಿಂಹಾಸನಾಧೀಶ್ವರ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ವಾರಣಾಸಿ, ಶ್ರೀಮದ್ ಕಾಶಿ ಜ್ಞಾನಸಿಂಹಾಸನಾಧೀಶ್ವರ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದರು ವಾರಣಾಸಿ ಇವರು ದಿವ್ಯ ಸಾನ್ನಿಧ್ಯ ವಹಿಸುವರು.

ಸಮ್ಮೇಳನಾಧ್ಯಕ್ಷರನ್ನಾಗಿ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ ಅಧ್ಯಕ್ಷರಾದ ಡಾ॥ ಪ್ರಭು ಸಾರಂಗದೇವ ಶಿವಾಚಾರ್ಯ ಸ್ವಾಮಿಗಳು ಗಚ್ಚಿನ ಸಾರಂಗಮಠ ಸಿಂದಗಿ ಇವರನ್ನು ಆಯ್ಕೆ ಮಾಡಲಾಗಿದೆ.

ವಿಧಾನಸಭೆ ಉಪಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ ಸಮಾರಂಭವನ್ನು ಉದ್ಘಾಟಿಸುವರು. ಶ್ರೀಮತ್ಕಾಶಿ ಜಗದ್ಗುರು ಡಾ.ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ರಚಿಸಿರುವ 'ವೀರಶೈವ ಪಂಚ ಸೂತ್ರ ಪ್ರವಚನ ಗ್ರಂಥ'ವನ್ನು ಅಮೇರಿಕಾ ಶಿಕ್ಯಾಗೋದ ನವ್ಯ ಸಾಹಿತಿ ರವಿ ಹಂಜ್ ಬಿಡುಗಡೆ ಮಾಡುವರು. ನಿವೃತ್ತ ಪ್ರಾಂಶುಪಾಲ ಡಾ.ಸಿ.ಶಿವಕುಮಾರಸ್ವಾಮಿ ಗ್ರಂಥ ಪರಿಚಯ ಮಾಡುವರು. ವೀರಶೈವ ಪಂಚ ಸೂತ್ರಗಳು ವಿಷಯವಾಗಿ ಯುವ ಸಾಹಿತಿ ಪ್ರಶಾಂತ ರಿಪ್ಪನ್‌ಪೇಟೆ ಉಪನ್ಯಾಸ ನೀಡಲಿರುವರು.

ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ನುಡಿಯಲಿದ್ದು ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು, ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು, ಬಂಕಾಪುರದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸುವರು. ನಾಡಿನ ಮಠಾಧೀಶರು ಉಪಸ್ಥಿತರಿರುವರು.

## ಮಣಿಪಾಲ ಆಸ್ಪತ್ರೆಯ ತಜ್ಞ ವೈದ್ಯರಿಂದ ಮಹತ್ವದ ಮಾರ್ಗಸೂಚಿ



ಮೈಸೂರು

ಭಾರತ ಸೇರಿದಂತೆ ವಿಶ್ವದಾದ್ಯಂತ ಮೂತ್ರಪಿಂಡ ಕಾಯಿಲೆಗಳು ಪ್ರಮುಖ ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿ ಹೊರಹೊಮ್ಮುತ್ತಿವೆ. ದೀರ್ಘಕಾಲದ ಮೂತ್ರ ಪಿಂಡ ಸಮಸ್ಯೆಗಳು ಲಕ್ಷಾಂತರ ಭಾರತೀಯರನ್ನು ಬಾಧಿಸುತ್ತಿದ್ದು, ರೋಗ ಪತ್ತೆಯಾಗುವ ಮುನ್ನವೇ ಇದು ಸದ್ದಿಲ್ಲದೆ ಗಂಭೀರ ಹಂತ ತಲುಪುತ್ತಿರುವ ಪ್ರಕರಣಗಳು ಹೆಚ್ಚಾಗಿವೆ. ಕರ್ನಾಟಕದಲ್ಲೂ ಈ ಕಾಯಿಲೆಯ ಹೊರೆ ಹೆಚ್ಚಾಗುತ್ತಿದ್ದು, ದೀರ್ಘಕಾಲದ ಮೂತ್ರಪಿಂಡ ಕಾಯಿಲೆ ಮತ್ತು ಅಂತಿಮ ಹಂತದ ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿರುವವರು ಹಾಗೂ ದೀರ್ಘಕಾಲೀನ ಡಯಾಲಿಸಿಸ್ ಮೇಲೆ ಅವಲಂಬಿತರಾಗಿರುವವರ ಸಂಖ್ಯೆ ಗಣನೀಯವಾಗಿ ಏರಿಕೆಯಾಗುತ್ತಿದೆ.

ಮೈಸೂರು ಮತ್ತು ಸುತ್ತಮುತ್ತಲಿನ ಜಿಲ್ಲೆಗಳು ಇದಕ್ಕೆ ಹೊರತಾಗಿಲ್ಲ. ತಿಳುವಳಿಕೆಯ ಕೊರತೆ, ವಿಳಂಬವಾದ ತಪಾಸಣೆ ಮತ್ತು ತಡವಾದ ರೋಗನಿರ್ಣಯವು ಪರಿಣಾಮಕಾರಿ ಮೂತ್ರಪಿಂಡ ಆರೈಕೆಗೆ ದೊಡ್ಡ ಅಡೆತಡೆಗಳಾಗಿವೆ ಎಂದು ತಜ್ಞರು ಅಭಿಪ್ರಾಯಪಡುತ್ತಾರೆ.

ಈ ಹಿನ್ನೆಲೆಯಲ್ಲಿ, ವಿಶ್ವ ಕಿಡ್ನಿ ದಿನಾಚರಣೆ ಅಂಗವಾಗಿ ಜನರಲ್ಲಿ ಅರಿವು ಮೂಡಿಸಲು ಮೈಸೂರಿನ ಮಣಿಪಾಲ್ ಆಸ್ಪತ್ರೆಯು ಭಾನುವಾರ (ಮಾ.15) 'ಮಣಿಪಾಲ್ ಆರೋಗ್ಯ ಸಭೆ' ಅನ್ನು ಆಯೋಜಿಸಿತ್ತು. ಆರಂಭಿಕ ಲಕ್ಷಣಗಳು ಮತ್ತು ಲಭ್ಯವಿರುವ ಸುಧಾರಿತ ಚಿಕಿತ್ಸೆಗಳ ಬಗ್ಗೆ ಸಮಗ್ರ ಮಾಹಿತಿ ನೀಡಿದರು.

## ಮಹಿಳೆಯರಿಗೆ ಸಮಗ್ರ ಆರೋಗ್ಯ ಶಿಬಿರ




ಬೆಂಗಳೂರು

ಪ್ರಾಕ್ಟರ್ ಎಂಡ್ ಗ್ಯಾಂಬಲ್ ಹೆಲ್ತ್ ಲಿಮಿಟೆಡ್ (ನ್ಯೂರೋಬಿಯಾನ್, ಲಿವೋಜೆನ್, ಇವಿಯನ್ ಮೊದಲಾದ ಬ್ರ್ಯಾಂಡ್‌ಗಳ ನಿರ್ಮಾಪಕ) ಇದರ ಆರೋಗ್ಯ ಕೇಂದ್ರೀಕೃತ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ ಉಪಕ್ರಮವಾಗಿದ್ದು, ಓಲುಔ ಹೆಲ್ಪಏಜ್ ಇಂಡಿಯಾ ಜೊತೆಗಿನ ಭಾಗಸಹಕಾರದಲ್ಲಿ ಇತ್ತೀಚೆಗೆ ತನ್ನ ವಿಶೇಷ 'ವಿಮೆನ್ ಕೇರ್ ವೀಕ್' ಅನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಈ ಕಾರ್ಯಕ್ರಮದಡಿ, 10 ಸೇವೆಯಿಂದ ವಂಚಿತ ಸಮುದಾಯಗಳಲ್ಲಿ 10,000 ಕ್ಕೂ ಹೆಚ್ಚು ವೃದ್ಧ ಮಹಿಳೆಯರು, ಗರ್ಭಿಣಿ ಹಾಗೂ ಹಾಲುಣಿಸುವ ತಾಯಂದಿರು ಮತ್ತು ಕಿಶೋರಿಯರಿಗೆ ಉಚಿತ ಹಾಗೂ ಸಮಗ್ರ ಪ್ರಾಥಮಿಕ ಆರೋಗ್ಯ ಸೇವೆಗಳನ್ನು ಒದಗಿಸಲಾಯಿತು. ಈ ಕಾರ್ಯಕ್ರಮಗಳು ಪಾಲ್ಘರ್, ಗೋವಾ, ಚೆನ್ನೈ, ಪುರಿ, ಗುವಾಹಟಿ, ಪಾಟ್ನಾ, ಫತೇಪುರ, ಮಥುರಾ, ರುದ್ರಪ್ರಯಾಗ ಮತ್ತು ಜೈಪುರ ಸೇರಿದಂತೆ ವಿವಿಧ ನಗರಗಳಲ್ಲಿ ನಡೆಸಲಾಯಿತು.

ಈ ಶಿಬಿರಗಳ ಸಮಯದಲ್ಲಿ ಲಾಭಾರ್ಥಿಗಳಿಗೆ ಸ್ಥಳದಲ್ಲಿಯೇ ಉಚಿತವಾಗಿ ಸ್ತ್ರೀರೋಗ ತಜ್ಞರು, ಶಿಶುರೋಗ ತಜ್ಞರು, ಪೋಷಣಾ ತಜ್ಞರು ಮತ್ತು ವೈದ್ಯರಿಂದ ಸಲಹೆಗಳನ್ನು ನೀಡಲಾಗಿದ್ದು, ಗರ್ಭಪೂರ್ವ ಆರೈಕೆ ಸಹಾಯವೂ ಒದಗಿಸಲಾಯಿತು. ಇದಲ್ಲದೆ, ಅನಿಮಿಯಾ ಪತ್ತೆಗಾಗಿ ಹಿಮೋಗ್ಲೋಬಿನ್ ಮಟ್ಟಗಳನ್ನು ಪರಿಶೀಲಿಸಲು, ರಕ್ತದೊತ್ತಡ ಮತ್ತು ರಕ್ತದ ಸಕ್ಕರೆ ಮಟ್ಟಗಳನ್ನು ಅಳೆಯಲು ಉಚಿತ ಆರೋಗ್ಯ ತಪಾಸಣೆಗಳನ್ನು ನಡೆಸಲಾಯಿತು.

ಅವಶ್ಯಕತೆಯಿದ್ದಲ್ಲಿ ಲಾಭಾರ್ಥಿಗಳಿಗೆ ಉಚಿತ ಔಷಧಿಗಳನ್ನು ನೀಡಲಾಗಿದ್ದು, ಶಿಬಿರದ ನಂತರವೂ ನಿರಂತರ ಆರೈಕೆ ಖಚಿತಪಡಿಸಲು ಮುಂದಿನ ವೈದ್ಯಕೀಯ ಚಿಕಿತ್ಸೆಗೆ ರೆಫರಲ್ ಮೂಲಕ ಮಾರ್ಗದರ್ಶನ ನೀಡಲಾಯಿತು. ಮಹಿಳೆಯರು ಮತ್ತು ಕಿಶೋರಿಯರಿಗಾಗಿ ಸಮತೋಲನ ಆಹಾರ ಹಾಗೂ ಪೂರಕ ಪೌಷ್ಟಿಕಾಂಶದ ಮಹತ್ವವನ್ನು ಒತ್ತಿಹೇಳುವ ಮೂಲಕ ಪೋಷಣೆಯ ಬಗ್ಗೆ ಜಾಗೃತಿಗೆ ವಿಶೇಷ ಒತ್ತು ನೀಡಲಾಯಿತು.

ಇದಲ್ಲದೆ, ಆರೋಗ್ಯ ಸೇವೆಗಳ ಪ್ರವೇಶವನ್ನು ಸುಲಭಗೊಳಿಸಲು, ಈ ಶಿಬಿರಗಳಲ್ಲಿ ಆಯುಷ್ಮಾನ್ ಭಾರತ ಹೆಲ್ತ್ ಅಕೌಂಟ್ ಕುರಿತು ಸ್ಥಳದಲ್ಲಿಯೇ ಸೌಲಭ್ಯ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಕೂಡ ಒಳಗೊಂಡಿದ್ದು, ಲಾಭಾರ್ಥಿಗಳಿಗೆ ನೋಂದಣಿ ಪ್ರಕ್ರಿಯೆ ಮತ್ತು ಸರ್ಕಾರಿ ಆರೋಗ್ಯ ಪ್ರಯೋಜನಗಳನ್ನು ಪಡೆಯುವ ವಿಧಾನವನ್ನು ತಿಳಿಯಲು ಸಹಾಯ ಮಾಡಲಾಯಿತು.

## ಆಕ್ಷನ್ ಟೇಸಾ 'ಟೇಸಾ ಇನ್‌ಸೈಡ್' ಸೆಕ್ಯುರಿಟಿ ಫೀಚರ್ ಅನಾವರಣ




ಬೆಂಗಳೂರು

ದೇಶದ ಅತಿದೊಡ್ಡ ಎಂಜಿನಿಯರ್ಡ್ ವುಡ್ ಪ್ಯಾನೆಲ್ ಉತ್ಪನ್ನಗಳ ತಯಾರಕ ಸಂಸ್ಥೆಯಾದ ಆಕ್ಷನ್ ಟೇಸಾ 'ಟೇಸಾ ಇನ್‌ಸೈಡ್' ಎಂಬ ಉದ್ಯಮದ ಮೊದಲ ಅದೃಶ್ಯ ಭದ್ರತಾ ಗುರುತನ್ನು ಅನಾವರಣಗೊಳಿಸಿದೆ. ಯುವಿ ಬೆಳಕಿನಡಿ ಮಾತ್ರ ಗೋಚರಿಸುವ ಈ ವೈಶಿಷ್ಟ್ಯವು ಉತ್ಪನ್ನದ ಪ್ರಾಮಾಣಿಕತೆಯನ್ನು ಸುಲಭವಾಗಿ ಪರಿಶೀಲಿಸಲು ನೆರವಾಗುತ್ತದೆ. ಪ್ರಸ್ತುತ ಪ್ರಿ-ಲ್ಯಾಮ್ ಸರಣಿಯಲ್ಲಿ ಪರಿಚಯಿಸಲಾದ 'ಟೇಸಾ ಇನ್‌ಸೈಡ್' ಶೀಘ್ರದಲ್ಲೇ ಪ್ಲೇನ್ ಸರಣಿಗೂ ವಿಸ್ತರಿಸಲಾಗುವುದು.

ಇದರ ಜೊತೆಗೆ, ದಕ್ಷಿಣ ಭಾರತ ಮಾರುಕಟ್ಟೆಯ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸುವ ಉದ್ದೇಶದಿಂದ ವಿಶಾಖಪಟ್ಟಣಂ ಜಿಲ್ಲೆಯ ರಂಬಿಲ್ಲಿ ಮಂಡಲದಲ್ಲಿ ಹೊಸ ಉತ್ಪಾದನಾ ಘಟಕವನ್ನು ಸ್ಥಾಪಿಸುವ ಯೋಜನೆಯನ್ನು ಕಂಪನಿ ಘೋಷಿಸಿದೆ. ಈ ಘಟಕವು ಮಾರುಕಟ್ಟೆ ವ್ಯಾಪ್ತಿಯನ್ನು ವಿಸ್ತರಿಸುವುದರೊಂದಿಗೆ ಸ್ಥಳೀಯ ಮಟ್ಟದಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ವ್ಯವಸ್ಥಾಪಕ ನಿರ್ದೇಶಕ ಶ್ರೀ ಅಜಯ್ ಅಗರ್ವಾಲ್, "'ಟೇಸಾ ಇನ್‌ಸೈಡ್' ಕೇವಲ ಒಂದು ಗುರುತಲ್ಲ, ಅದು ಗ್ರಾಹಕರಿಗೆ ನಿಜವಾದ ಉತ್ಪನ್ನದ ಭರವಸೆ ನೀಡುವ ವಿಶ್ವಾಸದ ಚಿಹ್ನೆ. ಗುಣಮಟ್ಟ ಮತ್ತು ಪಾರದರ್ಶಕತೆಯತ್ತ ನಮ್ಮ ಬದ್ಧತೆಯನ್ನು ಇದು ಮತ್ತಷ್ಟು ಬಲಪಡಿಸುತ್ತದೆ," ಎಂದು ಹೇಳಿದರು.

ಕಂಪನಿಯ ಕಾರ್ಯತಂತ್ರ ಐದು ಪ್ರಮುಖ ಸ್ತಂಭಗಳಾದ ಐಐಟಿಸಿಎಸ್ ಮೇಲೆ ಆಧಾರಿತವಾಗಿದ್ದು, ನಾವೀನ್ಯತೆ, ಗುಣಮಟ್ಟ, ಪಾರದರ್ಶಕತೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಉತ್ತೇಜಿಸುವುದಕ್ಕೆ ಒತ್ತು ನೀಡುತ್ತದೆ. ಕಳೆದ ವರ್ಷ ಪರಿಚಯಿಸಲಾದ 'ಸ್ಟುಡಿಯೋ ಆನ್ ವೀಲ್ಸ್ 3.0' ಮೊಬೈಲ್ ಅನುಭವ ಕೇಂದ್ರವನ್ನು ಇಂಡಿಯಾವುಡ್ 2026 ನಲ್ಲಿ ಪ್ರದರ್ಶಿಸಲಾಗಿದ್ದು, ಸಾವಿರಾರು ಮಂದಿಗೆ ಸಂಸ್ಥೆಯ ಉತ್ಪನ್ನಗಳ ಗುಣಮಟ್ಟ ಮತ್ತು ನವೀನತೆಯನ್ನು ನೇರವಾಗಿ ಅನುಭವಿಸುವ ಅವಕಾಶ ಲಭಿಸಿತು.

## ಕರ್ನಾಟಕದಲ್ಲಿ ತನ್ನ ಅಸ್ತಿತ್ವ ಬಲಪಡಿಸಿದ ಇಂದ್ರಿಯ, ಆದಿತ್ಯ ಬಿರ್ಲಾ ಜ್ಯುವೆಲ್ಲರಿ




ಬೆಂಗಳೂರು

ಬೆಂಗಳೂರಿನ ಡಿಕನ್ಸನ್ ರಸ್ತೆಯಲ್ಲಿ ತನ್ನ ಹೊಸ ಮಳಿಗೆಯ ಪ್ರಾರಂಭದೊಂದಿಗೆ ಇಂದ್ರಿಯ, ಆದಿತ್ಯ ಬಿರ್ಲಾ ಜ್ಯುವೆಲ್ಲರಿ ತನ್ನ ನಿರಂತರ ರಾಷ್ಟ್ರೀಯ ಬೆಳವಣಿಗೆಯನ್ನು ಮುಂದುವರಿಸಿದೆ. ನಗರದಲ್ಲಿ ಬ್ರ್ಯಾಂಡ್‌ನ ನಾಲ್ಕನೆ ಮಳಿಗೆಯಾಗಿರುವ ಈ ತೆರೆಯುವಿಕೆಯು ಕರ್ನಾಟಕದಲ್ಲಿ ಇಂದ್ರಿಯಾದ ಅಸ್ತಿತ್ವವನ್ನು ಇನ್ನಷ್ಟು ಬಲಪಡಿಸಿ ಭಾರತದ ಪ್ರಮುಖ ಮೆಟ್ರೋಪಾಲಿಟನ್ ಮಾರುಕಟ್ಟೆಗಳಾದ್ಯಂತ ಬ್ರ್ಯಾಂಡ್‌ನ ಮುಂದುವರಿಯುತ್ತಿರುವ ವಿಸ್ತರಣೆಯನ್ನು ಪ್ರತಿಫಲಿಸುತ್ತದೆ.

ತನ್ನ ಉಜ್ವಲವಾದ ರೀಟೇಲ್ ಚಿತ್ರಣ ಮತ್ತು ತತ್ಕಾಲೀನ ಹಾಗೂ ಸಾಂಪ್ರದಾಯಿಕ ಆಭರಣಗಳಿಗಾಗಿ ಪ್ರಬಲ ಬೇಡಿಕೆಗಾಗಿ ಬೆಂಗಳೂರು ಹೆಸರುವಾಸಿಯಾಗಿದೆ. ನಗರದ ಪ್ರಧಾನ ರೀಟೇಲ್ ಜಿಲ್ಲೆಯಲ್ಲಿರುವ ಡಿಕನ್ಸನ್ ರಸ್ತೆಯು, ತನ್ನ ಸದಾ ಚುರುಕಾದ ವಾಣಿಜ್ಯ ಚಟುವಟಿಕೆ ಮತ್ತು ಸುಲಭ ಪ್ರವೇಶಕ್ಕೆ ಹೆಸರುವಾಸಿಯಾಗಿರುವುದರಿಂದ, ವಿಶಿಷ್ಟವಾದ ಹಾಗೂ ಆಲೋಚನಾಪೂರ್ವಕವಾಗಿ ವಿನ್ಯಾಸಗೊಳಿಸಲಾಗಿದೆ.

ಆಭರಣಗಳನ್ನು ಬಯಸುತ್ತಿರುವ ಗ್ರಾಹಕರಿಗೆ ಹತ್ತಿರವಾಗಿ ತನ್ನ ಸಿಗ್ನೇಚರ್ ಆಭರಣ ಅನುಭವವನ್ನು ತರಲು ಅದು ಇಂದ್ರಿಯಾಕ್ಕೆ ಸೂಕ್ತವಾದ ಪ್ರದೇಶವಾಗಿದೆ.

ಮಳಿಗೆಯು, ಅತ್ಯಂತ ಆಲೋಚನಾಪೂರ್ವಕವಾಗಿ ರಚಿಸಲಾದ ವಿನ್ಯಾಸಗಳನ್ನು ಬಂಗಾರ, ಪೋಲ್ಕಿ ಮತ್ತು ವಜ್ರದ ವಿವಾಹ, ಹಬ್ಬ, ತತ್ಕಾಲೀನ ಮತ್ತು ಪ್ರತಿನಿತ್ಯದ ಆಭರಣ ಸಂಗ್ರಹಗಳಾದ್ಯಂತ 32,000ಕ್ಕಿಂತ ಹೆಚ್ಚು ಆಭರಣಗಳನ್ನು ಪ್ರದರ್ಶಿಸುತ್ತದೆ. ಇನ್-ಸ್ಟೋರ್ ಅನುಭವವನ್ನು ವರ್ಧಿಸುವುದಕ್ಕಾಗಿ, ವಿಶಿಷ್ಟವಾದ ಬ್ರೈಡಲ್ ಲೌಂಜ್ ಮತ್ತು ವಿಶೇಷವಾದ ಕಾರಿಗರಿ ಕೋಣೆ ಮುಂತಾದ ನಿಬದ್ಧ ಪ್ರದೇಶಗಳಿದ್ದು ಇವು ಪ್ರತಿಯೊಂದು ಸೃಷ್ಟಿಯ ಹಿಂದಿರುವ ಕಲಾವಂತಿಕೆ ಮತ್ತು ಕಲಾನೈಪುಣ್ಯವನ್ನು ಹತ್ತಿರದಿಂದ ನೋಡಲು ಗ್ರಾಹಕರಿಗೆ ಅವಕಾಶ ನೀಡುತ್ತವೆ.

ಇಂದ್ರಿಯದ ವಿನ್ಯಾಸ-ನಿರ್ದೇಶಿತ ಸಿದ್ಧಾಂತವನ್ನು ಪ್ರತಿಫಲಿಸುವ ಮಳಿಗೆಯು, ಅಡಚಣೆರಹಿತ ಮತ್ತು ತಲ್ಲೀನ ಆಭರಣ ರೀಟೇಲ್ ಅನುಭವ ಮತ್ತು ಸೂಕ್ಷ್ಮ ಒಳಾಂಗಣಗಳನ್ನು ಒಟ್ಟಿಗೆ ತಂದಿದೆ.

## ಎಐ ಪ್ಲಸ್ ಸ್ಮಾರ್ಟ್‌ಫೋನ್ ಅಧಿಕೃತ ಭಾಗಸಹಭಾಗಿತ್ವ




ಬೆಂಗಳೂರು: ಮುಂದಿನ ಟಿ20 ಸೀಸನ್‌ಗೆ ಮುನ್ನ ಪ್ರಮುಖ ಕ್ರಿಕೆಟ್ ತಂಡಗಳಾದ ಮುಂಬೈ ಇಂಡಿಯನ್ಸ್ ಮತ್ತು ಕೊಲ್ಕತ್ತಾ ನೈಟ್ ರೈಡರ್ಸ್‌ಗೆ ಎಐ ಪ್ಲಸ್ ಸ್ಮಾರ್ಟ್‌ಫೋನ್ ಅನ್ನು ಅಧಿಕೃತ ಸ್ಮಾರ್ಟ್‌ಫೋನ್ ಭಾಗಸಹಭಾಗಿಯಾಗಿ ಘೋಷಿಸಲಾಗಿದೆ.

ಈ ಸಹಭಾಗಿತ್ವದ ಮೂಲಕ ಎಐ ಪ್ಲಸ್ ಸ್ಮಾರ್ಟ್‌ಫೋನ್ ಭಾರತದಲ್ಲಿ ಅತ್ಯಂತ ಜನಪ್ರಿಯ ಕ್ರೀಡೆಗಳಲ್ಲಿ ಒಂದಾದ ಕ್ರಿಕೆಟ್ ಕ್ಷೇತ್ರದಲ್ಲಿ ತನ್ನ ಪ್ರಭಾವವನ್ನು ಮತ್ತಷ್ಟು ವಿಸ್ತರಿಸಿಕೊಳ್ಳಲಿದೆ. ದೇಶದಾದ್ಯಂತ ಇರುವ ಲಕ್ಷಾಂತರ ಅಭಿಮಾನಿಗಳೊಂದಿಗೆ ನೇರ ಸಂಪರ್ಕ ಸಾಧಿಸುವ ಉದ್ದೇಶದಿಂದ ಹಲವು ವಿಶೇಷ ಅಭಿಮಾನಿ ಅನುಭವಗಳನ್ನು ನೀಡಲು ಯೋಜಿಸಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಎಐ ಪ್ಲಸ್ ಸ್ಮಾರ್ಟ್‌ಫೋನ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ನೆಕ್ಸ್ಟ್ ಕ್ವಾಂಟಮ್ ಶಿಫ್ಟ್ ಟೆಕ್ನಾಲಜೀಸ್ ಸಂಸ್ಥಾಪಕರಾದ ಮಾಧವ್ ಶೇತ್ ಅವರು, "ಕ್ರೀಡೆಗಳು ಜನರನ್ನು ಒಂದೇ ಉತ್ಸಾಹದಲ್ಲಿ ಒಗ್ಗೂಡಿಸುವ ಅಪಾರ ಶಕ್ತಿಯನ್ನು ಹೊಂದಿವೆ. ಮುಂಬೈ ಇಂಡಿಯನ್ಸ್ ಮತ್ತು ಕೊಲ್ಕತ್ತಾ ನೈಟ್ ರೈಡರ್ಸ್ ಜೊತೆಗಿನ ನಮ್ಮ ಸಹಭಾಗಿತ್ವವಿದೆ.

ಲಕ್ಷಾಂತರ ಅಭಿಮಾನಿಗಳೊಂದಿಗೆ ನೇರ ಸಂಪರ್ಕ ಸಾಧಿಸಲು ನೆರವಾಗಲಿದೆ. ತಂತ್ರಜ್ಞಾನವು ಜನರ ಆಶಯ ಮತ್ತು ಆಸಕ್ತಿಗಳಿಗೆ ಹೊಂದಿಕೊಂಡಿರಬೇಕು" ಎಂದು ಹೇಳಿದರು.

## ಟಾಟಾ ಹಿಟಾಚಿ ಇಎಕ್ಸ್1200ವಿ ಯಂತ್ರ ನಿಯೋಜನೆ

ಬೆಂಗಳೂರು

ಹರಿಯಾಣದಲ್ಲಿ ನಡೆಯುತ್ತಿರುವ ಪ್ರಮುಖ ಎತ್ತರದ ಕಟ್ಟಡ ಉರುಳಿಸುವಿಕೆ ಯೋಜನೆಗೆ ಎಡಿಫೈಸ್ ಎಂಜಿನಿಯರಿಂಗ್ ಸಂಸ್ಥೆಯು ಟಾಟಾ ಹಿಟಾಚಿ ಕನ್ಸ್ಟ್ರಕ್ಷನ್ ಮೆಷಿನರಿ ಕಂಪನಿ ಪ್ರೈವೇಟ್ ಲಿಮಿಟೆಡ್‌ನ ಅತ್ಯಾಧುನಿಕ ಇಎಕ್ಸ್1200ವಿ ಅಗೆಯುವ ಯಂತ್ರವನ್ನು ನಿಯೋಜಿಸಿದೆ. ಈ ಬೆಳವಣಿಗೆ ಭಾರತದಲ್ಲಿ ವಿಶೇಷ ಉರುಳಿಸುವಿಕೆ ಸಾಮರ್ಥ್ಯಗಳ ಕ್ಷೇತ್ರದಲ್ಲಿ ಮಹತ್ವದ ಮೈಲಿಗಲ್ಲಾಗಿ ಪರಿಗಣಿಸಲಾಗಿದೆ.



ಟಾಟಾ ಹಿಟಾಚಿ ಪೂರೈಸಿದ ಈ ಇಎಕ್ಸ್1200ವಿ ಯಂತ್ರವನ್ನು ಎಡಿಫೈಸ್ ಎಂಜಿನಿಯರಿಂಗ್ ಸಂಸ್ಥೆ ವಿಶೇಷ ಹೈ-ರೀಚ್ ಉರುಳಿಸುವಿಕೆ ಲಗತ್ತಿನೊಂದಿಗೆ ಸಂಯೋಜಿಸಿದ್ದು, ಇದು ಏಷ್ಯಾದಲ್ಲೇ ಅತಿ ಎತ್ತರದಲ್ಲಿ ಕಾರ್ಯನಿರ್ವಹಿಸುವ ಉರುಳಿಸುವಿಕೆ ಯಂತ್ರಗಳಲ್ಲಿ ಒಂದಾಗಿದೆ. ಟೆಲಿಸ್ಕೋಪಿಕ್ ಬೂಮ್ ವಿನ್ಯಾಸ ಹೊಂದಿರುವ ಈ ಯಂತ್ರವು 51 ಮೀಟರ್‌ಗಳವರೆಗೆ ಸುರಕ್ಷಿತ ಕಾರ್ಯಾಚರಣೆಯ ಎತ್ತರವನ್ನು ತಲುಪಬಲ್ಲದು. ಇದರಿಂದ ಸುಮಾರು 17 ಮಹಡಿಗಳವರೆಗೆ ಇರುವ ಕಟ್ಟಡಗಳನ್ನು ಪರಿಣಾಮಕಾರಿಯಾಗಿ ಕೆಡವಲು ಸಾಧ್ಯವಾಗುತ್ತದೆ.

ಸುಮಾರು 3 ಟನ್ ತೂಕದ ಉರುಳಿಸುವಿಕೆ ಲಗತ್ತು ಯಂತ್ರದ ಸ್ಥಿರತೆ ಮತ್ತು ನಿಖರತೆಯನ್ನು ಹೆಚ್ಚಿಸುವುದರೊಂದಿಗೆ ಕಾರ್ಯಾಚರಣೆಯ ನಮ್ಯತೆಯನ್ನೂ ವೃದ್ಧಿಸುತ್ತದೆ. ಟೆಲಿಸ್ಕೋಪಿಕ್ ಬೂಮ್ ವ್ಯವಸ್ಥೆಯು ಆಪರೇಟರ್‌ಗಳಿಗೆ ಅಗತ್ಯವಿದ್ದಂತೆ ಹಂತ ಹಂತವಾಗಿ ವ್ಯಾಪ್ತಿಯನ್ನು ವಿಸ್ತರಿಸಲು ಅವಕಾಶ ಮಾಡಿಕೊಡುತ್ತದೆ. ಇದರಿಂದ ಸುರಕ್ಷತಾ ಮಾನದಂಡಗಳನ್ನು ಕಾಪಾಡುತ್ತಾ ನಿಯಂತ್ರಿತ ಉರುಳಿಸುವಿಕೆ ಸಾಧ್ಯವಾಗುತ್ತದೆ.

ಇಎಕ್ಸ್1200ವಿ ಯಂತ್ರದ ದೃಢ ನಿರ್ಮಾಣ, ಶಕ್ತಿಶಾಲಿ ಹೈಡ್ರಾಲಿಕ್ ವ್ಯವಸ್ಥೆ ಮತ್ತು ಉತ್ತಮ ಕಾರ್ಯಾಚರಣಾ ಸ್ಥಿರತೆ ಇದನ್ನು ಕಠಿಣ ಉರುಳಿಸುವಿಕೆ ಕಾರ್ಯಗಳಿಗೆ ಅತ್ಯಂತ ವಿಶ್ವಾಸಾರ್ಹವಾಗಿಸುತ್ತದೆ. ಸುಧಾರಿತ ಲಗತ್ತುಗಳು ಮತ್ತು ಎಂಜಿನಿಯರಿಂಗ್ ಪರಿಹಾರಗಳ ಮೂಲಕ ದೊಡ್ಡ ಸಾಮರ್ಥ್ಯದ ಯಂತ್ರಗಳನ್ನು ವಿಶೇಷ ಉರುಳಿಸುವಿಕೆ ಕಾರ್ಯಗಳಿಗೆ ಹೇಗೆ ಹೊಂದಿಸಬಹುದು ಎಂಬುದನ್ನು ಈ ಯೋಜನೆ ಸ್ಪಷ್ಟವಾಗಿ ತೋರಿಸಿದೆ.

## ಅಭಿವೃದ್ಧಿ ಕಾಮಗಾರಿ ಸ್ಥಳಗಳಲ್ಲಿ ಫಲಕವನ್ನು ಅಳವಡಿಸಿ: ರಮೇಶ್

ಬೆಂಗಳೂರು

ನಗರ ಪಾಲಿಕೆಯ ಹೊರಮಾವು ಅಗರ, ಬಂಜಾರ ಬಡಾವಣೆ, ಕಲ್ಕೆರೆ ಬಡಾವಣೆ, ಬಾಬುಸಾಪಾಳ್ಯ ಹಾಗೂ ಚಳ್ಳಕೆರೆ ಸುತ್ತಮುತ್ತಲಿನ ಪ್ರದೇಶದ ರಸ್ತೆ ಮತ್ತು ಮೂಲಸೌಕರ್ಯ ಅಭಿವೃದ್ಧಿ, ರೈಲ್ವೆ ಅಂಡರ್ ಪಾಸ್ ಕಾಮಗಾರಿ, ಕೆರೆಗಳ ಅಭಿವೃದ್ಧಿ, ಕಸ ವಿಲೇವಾರಿ ಹಾಗೂ ಪಾದಚಾರಿ ಮಾರ್ಗ ಒತ್ತುವರಿ ವಿಷಯಗಳಿಗೆ ಸಂಬಂಧಿಸಿದಂತೆ ಪೂರ್ವ ನಗರ ಪಾಲಿಕೆ ಆಯುಕ್ತ ಡಿ.ಎಸ್.ರಮೇಶ್ ಸ್ಥಳ ಪರಿಶೀಲನೆ ನಡೆಸಿದರು.

ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಪ್ರತಿನಿಧಿಗಳು ಹಾಗೂ ನಿವಾಸಿಗಳೊಂದಿಗೆ ಚರ್ಚೆ ನಡೆಸಿದ ಆಯುಕ್ತರು, ಸಮಸ್ಯೆಗಳ ತ್ವರಿತ ಪರಿಹಾರಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಿದರು .

ಬಾಬುಸಾಪಾಳ್ಯ ರೈಲ್ವೆ ಅಂಡರ್‌ಪಾಸ್ ಕಾಮಗಾರಿಯು ಖಾಸಗಿ ಹಾಗೂ ರೈಲ್ವೆ ಇಲಾಖೆಯ ನಡುವಿನ ಭೂ ವಿವಾದ ಕಾರಣದಿಂದ ವಿಳಂಬವಾಗಿದ್ದು, ಕಾಮಗಾರಿಗೆ ಯಾವುದೇ ತಡೆಯಾಜ್ಞೆ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಕೂಡಲೇ ಕಾಮಗಾರಿಯನ್ನು ಆರಂಭಿಸಿ ಬಾಕಿ ಇರುವ ಕೆಲಸಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ರೈಲ್ವೆ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಹೊರಮಾವು ಅಗರ ಕೆರೆಯಲ್ಲಿ ನಿರ್ವಹಣೆ ಕಾಮಗಾರಿಗಳಿಗಾಗಿ ಈಗಾಗಲೇ ಟೆಂಡರ್ ಆಹ್ವಾನಿಸಲಾಗಿದ್ದು, ಕೆರೆಯ ಸ್ವಚ್ಛತೆ ಮತ್ತು ನಿರ್ವಹಣೆ ಕಾರ್ಯಗಳನ್ನು ಶೀಘ್ರದಲ್ಲಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸ್ಥಳೀಯ ನಿವಾಸಿಗಳು ಶೌಚಾಲಯ, ಬೆಂಚ್‌ಗಳು, ವಾಕ್‌ವೇ, ಲಾನ್ ಹಾಗೂ ಇತರೆ ಸೌಲಭ್ಯಗಳ ಅಭಿವೃದ್ಧಿಗೆ ಬೇಡಿಕೆ ಇಟ್ಟಿದ್ದು, ಸಂಬಂಧಿತ ಕಾಮಗಾರಿಗಳನ್ನು ಕೈಗೊಳ್ಳಲು ಅಂದಾಜು ಪಟ್ಟಿ ತಯಾರಿಸಲು ಹಾಗೂ ಮುಂದಿನ ಬಜೆಟ್‌ನಲ್ಲಿ ಅವಶ್ಯಕ ಅನುದಾನ ಮೀಸಲಿಡಲು ಅಧಿಕಾರಿಗಳಿಗೆ ಸೂಚಿಸಿದರು.

ಅಗರ ಕೆರೆ ರಸ್ತೆಯು ತಗ್ಗು ಪ್ರದೇಶದಲ್ಲಿದ್ದು, ಪ್ರತಿ ವರ್ಷವೂ ಮಳೆಯಿಂದಾಗಿ ನೀರು ನಿಂತು ಸಮಸ್ಯೆಯಾಗುತ್ತಿದ್ದು, ಈ ಸಮಸ್ಯೆಯನ್ನು ನಿವಾರಿಸಲು ರಸ್ತೆ ಮಟ್ಟವನ್ನು ಏರಿಸುವ ಸುಧಾರಣೆ ಕಾರ್ಯಗಳನ್ನು ಕೈಗೊಳ್ಳಲಾಗಿದೆ. ಬಿಟುಮನ್ ಕೊರತೆಯಿಂದ ಡಾಂಬರೀಕರಣ ಕಾಮಗಾರಿ ವಿಳಂಬವಾಗಿದ್ದು, ಹಾಟ್ ಮಿಕ್ಸ್ ಪೂರೈಕೆಯಾದ ಕೂಡಲೇ ಡಾಂಬರೀಕರಣ ಕಾಮಗಾರಿಯನ್ನು ಪೂರ್ಣಗೊಳಿಸಲು ಸೂಚಿಸಲಾಗಿದೆ ಎಂದು ಆಯುಕ್ತರು ತಿಳಿಸಿದರು.

ಬಂಜಾರ ಲೇಔಟ್ ಮುಖ್ಯರಸ್ತೆ ಅಸಮತೋಲನದಿಂದಾಗಿ ಮತ್ತು ಚರಂಡಿಗಳಲ್ಲಿ ಮಣ್ಣು ತುಂಬಿಕೊಂಡಿರುವುದರಿಂದ ಮಳೆಗಾಲದಲ್ಲಿ ನೀರು ಸರಿಯಾಗಿ ಚರಂಡಿಗೆ ಹೋಗದೆ ರಸ್ತೆಯಲ್ಲಿ ನಿಲ್ಲುವಂತಾಗಿದ್ದು, ಕೂಡಲೇ ಸೈಡ್ ಡ್ರೈನ್ ಡಿಸಿಲ್ಟ್ ಕಾರ್ಯವನ್ನು ಕೈಗೊಳ್ಳುವಂತೆ ತಿಳಿಸಿದರು. ಇದಲ್ಲದೆ, ಸುಮಾರು 500 ಮೀಟರ್ ಉದ್ದದ ಚರಂಡಿ ನಿರ್ಮಾಣ ಕಾಮಗಾರಿಯನ್ನು ಯೋಜಿಸಲಾಗಿದ್ದು, ರಸ್ತೆಯ ಇನ್ನೊಂದು ಬದಿಯಲ್ಲಿ ಚರಂಡಿ ನಿರ್ಮಿಸಲು ತಿಳಿಸಿದರು. ಬಂಜಾರಾ ಲೇಔಟ್ ಮುಖ್ಯ ರಸ್ತೆಯಲ್ಲಿ ಪಾದಚಾರಿ ಮಾರ್ಗದ ಮೇಲಿನ ಅಕ್ರಮ ಒತ್ತುವರಿ ತೆರವು ಕಾರ್ಯಾಚರಣೆಯನ್ನು ತಕ್ಷಣ ಕೈಗೊಳ್ಳಲು ಸೂಚಿಸಿದರು.

ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಾರ್ವಜನಿಕರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಯೋಜಿತ ಹಾಗೂ ಶಾಶ್ವತ ಮೂಲಸೌಕರ್ಯ ಅಭಿವೃದ್ಧಿಯ ಮೂಲಕ ಕೆರೆಗಳ ಅಭಿವೃದ್ಧಿ, ರಸ್ತೆ ಮೂಲಸೌಕರ್ಯ ಸುಧಾರಣೆ, ಚರಂಡಿ ವ್ಯವಸ್ಥೆಯ ಬಲಪಡಿಸುವುದು ಹಾಗೂ ಸಾರ್ವಜನಿಕ ಸೌಲಭ್ಯಗಳ ಸುಧಾರಣೆಗೆ ಆದ್ಯತೆ ನೀಡಲಾಗುತ್ತಿದೆ ಎಂದು ಆಯುಕ್ತರು ಈ ಸಂದರ್ಭದಲ್ಲಿ ತಿಳಿಸಿದರು.ಪರಿಶೀಲನೆ ವೇಳೆಯಲ್ಲಿ ಮುಖ್ಯ ಅಭಿಯಂತರ ಕೃಷ್ಣಮೂರ್ತಿ, ಕಾರ್ಯಪಾಲಕ ಅಭಿಯಂತರರು, ಡಿಜಿಎಂ ಮತ್ತು ಎಜಿಎಂ ಘನತ್ಯಾಜ್ಯ ನಿರ್ವಹಣೆ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ರೈಲ್ವೆ ಇಲಾಖೆ ಹಾಗೂ ಇನ್ನಿತರೆ ಅಧಿಕಾರಿಗಳು ಹಾಜರಿದ್ದರು.

# ಜಿಲ್ಲಾದ್ಯಂತ ಎಸ್ಸೆಸ್ಸೆಲ್ಸಿ ಮೊದಲ ದಿನದ ಪರೀಕ್ಷೆ ಸುಗಮ-ಕೇಂದ್ರಗಳಿಗೆ ಡಿಸಿ, ಡಿಡಿಪಿಐ ಭೇಟಿ

ಕೋಲಾರ

ಜಿಲ್ಲೆಯ 65 ಕೇಂದ್ರಗಳಲ್ಲಿ ಎಸ್ಸೆಸ್ಸೆಲ್ಸಿ ಪ್ರಥಮ ಭಾಷೆ ಪರೀಕ್ಷೆ ಯಾವುದೇ ಗೊಂದಲಗಳಿಗೆ ಅವಕಾಶವಿಲ್ಲದಂತೆ ಅತ್ಯಂತ ಯಶಸ್ವಿಯಾಗಿ ನಡೆದಿದ್ದು, ಕೆಲವು ಕೇಂದ್ರಗಳಿಗೆ ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ, ಶಾಲಾ ಶಿಕ್ಷಣ ಡಿಡಿಪಿಐ ಅಲ್ಮಾಸ್ ಫರ್ವೀನ್ ತಾಜ್, ಬಿಇಒ ಮಧುಮಾಲತಿ ಪಡುವಣೆ ಮತ್ತಿತರ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು.

ಡಿಡಿಪಿಐ ಅಲ್ಮಾಸ್ ಫರ್ವೀನ್ ತಾಜ್ ಪರೀಕ್ಷೆ ಹಾಜರಾತಿ ಮಾಹಿತಿ ನೀಡಿ, ಮೊದಲ ದಿನ 202 ಮಂದಿ ಗೈರಾಗಿದ್ದು, ಜಿಲ್ಲೆಯಲ್ಲಿ ಯಾವುದೇ ಪರೀಕ್ಷಾ ಅವ್ಯವಹಾರ ನಡೆದಿಲ್ಲ, ಎಲ್ಲೂ ಗೊಂದಲಕ್ಕೆ ಅವಕಾಶ ನೀಡಿಲ್ಲ ಎಂದು ಸ್ಪಷ್ಟಪಡಿಸಿದರು.

ಪರೀಕ್ಷೆಗೆ ಹೆಸರು ನೊಂದಾಯಿಸಿದ್ದ 19098 ವಿದ್ಯಾರ್ಥಿಗಳ ಪೈಕಿ 18896 ಮಂದಿ ಹಾಜರಾಗಿದ್ದು, 202 ಮಂದಿ ಮಂದಿ ಗೈರಾಗಿದ್ದರು.



**ತಾಲ್ಲೂಕುವಾರು ಹಾಜರಿ ವಿವರ:**
ಬಂಗಾರಪೇಟೆ ತಾಲ್ಲೂಕಿನ 8 ಕೇಂದ್ರಗಳಲ್ಲಿ ಪ್ರಥಮ ಭಾಷೆಗೆ 2547 ಮಂದಿ ನೊಂದಾಯಿಸಿದ್ದು, 2526 ಮಂದಿ ಹಾಜರಾಗಿ 21 ಮಂದಿ ಗೈರಾಗಿದ್ದಾರೆ, ಕೆಜಿಎಫ್ ತಾಲ್ಲೂಕಿನ 9 ಕೇಂದ್ರಗಳಲ್ಲಿ 3316 ಮಕ್ಕಳು ಹೆಸರು ನೊಂದಾಯಿಸಿದ್ದು, 3280 ಮಂದಿ ಹಾಜರಾಗಿ 36 ಮಂದಿ ಗೈರಾಗಿದ್ದಾರೆ.

ಕೋಲಾರ ತಾಲ್ಲೂಕಿನ 18 ಕೇಂದ್ರಗಳಲ್ಲಿ 4811 ಮಂದಿ ಹೆಸರು ನೊಂದಾಯಿಸಿದ್ದು, 4774 ಮಂದಿ ಹಾಜರಾಗಿ ಕೇವಲ 37 ಮಂದಿ ಗೈರಾಗಿದ್ದಾರೆ. ಮಾಲೂರು ತಾಲ್ಲೂಕಿನ 8 ಕೇಂದ್ರಗಳಲ್ಲಿ 3005 ಮಂದಿ ಹೆಸರು ನೊಂದಾಯಿಸಿದ್ದು, 2972 ಮಂದಿ ಹಾಜರಾಗಿದ್ದು, 33 ಮಂದಿ ಗೈರಾಗಿದ್ದಾರೆ.

ಮುಳಬಾಗಿಲು ತಾಲ್ಲೂಕಿನ 12 ಕೇಂದ್ರಗಳಲ್ಲಿ 2865 ಮಂದಿ ನೊಂದಾಯಿಸಿದ್ದು, 2811 ಮಂದಿ ಹಾಜರಾಗಿದ್ದು, 54 ಮಂದಿ ಗೈರಾಗಿದ್ದಾರೆ, ಶ್ರೀನಿವಾಸಪುರ ತಾಲ್ಲೂಕಿನ 10 ಕೇಂದ್ರಗಳಲ್ಲಿ 2554 ಮಂದಿ ಹೆಸರು ನೊಂದಾಯಿಸಿದ್ದು, 2533 ಮಂದಿ ಹಾಜರಾಗಿದ್ದು, 21 ಮಂದಿ ಗೈರಾಗಿದ್ದಾರೆ.

ಮೊದಲ ದಿನದ ಪರೀಕ್ಷೆಯಲ್ಲಿ ಜಿಲ್ಲಾದ್ಯಂತ ಯಾವುದೇ ಕೇಂದ್ರದಲ್ಲಿ ಯಾವುದೇ ಅವ್ಯವಹಾರಗಳು ನಡೆದ ಬಗ್ಗೆ ವರದಿಯಾಗಿಲ್ಲ, ಪರೀಕ್ಷೆ ಸುಗಮವಾಗಿ ನಡೆಸುವಲ್ಲಿ ಜಿಲ್ಲಾಧಿಕಾರಿಗಳು,ಜಿಪಂ ಸಿಇಒ, ಎಸ್ಪಿ ಅವರ ಮಾರ್ಗದರ್ಶನದಲ್ಲಿ ಜಿಲ್ಲಾಡಳಿತ, ಶಿಕ್ಷಣ ಇಲಾಖೆ, ಶಿಕ್ಷಕರು,ಪೋಷಕರು, ವಿದ್ಯಾರ್ಥಿಗಳು ಸಹಕಾರ ನೀಡಿದ್ದಾರೆ ಎಂದರು.

**ಮಕ್ಕಳಿಗೆ ಹೂ ನೀಡಿ ಡಿಡಿಪಿಐ ಸ್ವಾಗತ:**
ಬೆಳಗ್ಗೆ 9-40ರಿಂದಲೇ ಪರೀಕ್ಷಾ ಕೇಂದ್ರಗಳಿಗೆ ಪ್ರವೇಶ ನೀಡಲಾಗಿದ್ದು, ಕೋಲಾರ ನಗರದ ಅಲಮಿನ್ ಪ್ರೌಢಶಾಲೆ ಕೇಂದ್ರದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಡಿಡಿಪಿಐ ಅಲ್ಮಾಸ್ ಫರ್ವೀನ್‌ತಾಜ್ ಅವರು ಮಕ್ಕಳಿಗೆ ಹೂ ನೀಡುವ ಮೂಲಕ ಸ್ವಾಗತಿಸಿ ಆತ್ಮಸ್ಥೈರ್ಯ ತುಂಬಿದರು.

ಮೊದಲ ದಿನದ ಪರೀಕ್ಷೆ ಬರೆಯುವ ಆತಂಕ ಮತ್ತು ಇಲಾಖೆ ಸಿಸಿ ಕ್ಯಾಮರಾ, ವೆಬ್ ಕಾಸ್ಟಿಂಗ್ ಮಾಡುತ್ತಿರುವ ಹಿನ್ನಲೆಯಲ್ಲಿ ಮಕ್ಕಳು ಭಯ ಕಾಡಿದ್ದರೂ ಮಕ್ಕಳು ಆತ್ಮಸ್ಥೈರ್ಯದಿಂದಲೇ ಕೇಂದ್ರದತ್ತ ಬಂದಿದ್ದು ಕಂಡು ಬಂತು.

ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಮಟ್ಟದ ಅಧಿಕಾರಿಗಳು, ರಾಜ್ಯ ಜಾಗೃತದಳ ತಂಡ ಸೇರಿದಂತೆ ಮತ್ತಿತರರು ಭೇಟಿ ನೀಡಿ ಪರಿಶೀಲಿಸಿದರು.

ಡಿಡಿಪಿಐ ಅಲ್ಮಾಸ್ ಫರ್ವೀನ್ ತಾಜ್, ಜಿಲ್ಲಾ ಪರೀಕ್ಷಾ ನೋಡಲ್ ಅಧಿಕಾರಿ ಶಂಕರೇಗೌಡ, ಶಿಕ್ಷಣಾಧಿಕಾರಿ ವೀಣಾ, ಡಿವೈಪಿಸಿಗಳಾದ ರಾಜೇಶ್ವರಿ, ಕೋಲಾರ ತಾಲ್ಲೂಕು ಬಿಇಒ ಮಧುಮಾಲತಿ ಪಡುವಣೆ, ವಿವಿಧ ತಾಲ್ಲೂಕುಗಳ ಬಿಇಒಗಳಾದ ಮಧುಮಾಲತಿ ಪಡುವಣೆ, ಶಶಿಕಲಾ, ನಾರಾಯಣಸ್ವಾಮಿ, ಕೆಂಪಯ್ಯ, ರಾಮಚಂದ್ರ, ಮುನಿಲಕ್ಷ್ಮಯ್ಯ ವಿಷಯ ಪರಿವೀಕ್ಷಕರಾದ ಸಮೀವುಲ್ಲಾ, ಕ್ರಿಸ್ಟಿನಾಬಬಿತಾ, ತಾಲ್ಲೂಕು ನೋಡಲ್ ಅಧಿಕಾರಿ ಇಸಿಒ ರಾಧಾ ಮತ್ತಿತರರು ಕೇಂದ್ರಗಳಿಗೆ ಭೇಟಿ ನೀಡಿದ್ದರು.

ಒಟ್ಟಾರೆ ಮೊದಲದಿನದ ಎಸ್ಸೆಸ್ಸೆಲ್ಸಿ ಪರೀಕ್ಷೆ ಯಾವುದೇ ಗೊಂದಲಗಳಿಗೆ ಅವಕಾಶ ನೀಡದೆ ಅತ್ಯಂತ ಯಶಸ್ವಿಯಾಗಿ ನಡೆದಿದ್ದು, ಮುಂದಿನ ಐದು ವಿಷಯಗಳ ಪರೀಕ್ಷೆಯನ್ನು ಧೈರ್ಯದಿಂದ ಎದುರಿಸುವ ಆತ್ಮಸ್ಥೈರ್ಯ ತಂದುಕೊಟ್ಟಿದೆ ಎಂದು ಡಿಡಿಪಿಐ ಅಲ್ಮಾಸ್ ಫರ್ವೀನ್ ತಾಜ್ ತಿಳಿಸಿದ್ದಾರೆ. ಅಲಮಿನ್ ಪ್ರೌಢಶಾಲೆ ಪರೀಕ್ಷಾ ಕೇಂದ್ರದಲ್ಲಿ ಡಿಡಿಪಿಐ ಅಲ್ಮಾಸ್ ಫರ್ವೀನ್‌ತಾಜ್ ಅವರೊಂದಿಗೆ ಎಸ್ಸೆಸ್ಸೆಲ್ಸಿ ನೋಡಲ್ ಅಧಿಕಾರಿ ಶಂಕರೇಗೌಡ ಕೇಂದ್ರದ ಮುಖ್ಯ ಅಧೀಕ್ಷಕ ವೇಣುಗೋಪಾಲ್, ಪ್ರಶ್ನೆಪತ್ರಿಕೆ ಅಭಿರಕ್ಷಕಿ ಮಂಜುಳಾ, ಸ್ಥಾನಿಕ ಜಾಗೃತದಳದ ವಿ.ಎಂ. ರಮೇಶ್, ಮೊಬೈಲ್ ಸ್ವಾಧೀನಾಧಿಕಾರಿ ಸಿಆರ್‌ಪಿ ಮೀನಾ, ಶಿಕ್ಷಕರಾದ ಎಂ.ಆರ್. ಗೋಪಾಲಕೃಷ್ಣ, ಭವಾನಿ, ಕೆ.ಬಿ.ಶಿವಶಂಕರರೆಡ್ಡಿ, ತಯಿಬಖಾನಂ, ಉಷಾರಾಣಿ, ಶ್ರೀನಿವಾಸಲು, ವಾಣಿಶ್ರೀ, ಶಿಲ್ಪಶ್ರೀ,ರೇಣುಕಾಲಕ್ಷ್ಮಿ, ಸವಿತ, ಫರೀದಾ ವಖಾನಂ, ಪುಷ್ಪ ಬಿ, ಯಾಸ್ಮೀನ್, ನಂಜುಂಡಪ್ಪ, ರಮೇಶ್, ಮಂಜುನಾಥ್, ಜರೀನ್ ತಾಜ್, ಹರಿನಾಥ್ ಮತ್ತಿತರರಿದ್ದರು.

# ಕಾರ್ಯಕರ್ತರ ಗೌರವ ಕಾಪಾಡುವುದು ನಾಯಕರ ಹೊಣೆ



ಕೋಲಾರ

ನಗರದ ಜಿಲ್ಲಾ ಭಾರತೀಯ ಜನತಾ ಪಾರ್ಟಿ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಜಿಲ್ಲಾ ಪ್ರಶಿಕ್ಷಣ ಆಯೋಜನ ಬೈಠಕ್' ಯಶಸ್ವಿಯಾಗಿ ನೆರವೇರಿತು. ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಜಿಲ್ಲಾಧ್ಯಕ್ಷ ಓಂ ಶಕ್ತಿ ಚಲಪತಿ ಅವರು, ಪಕ್ಷದ ಶಕ್ತಿ ಮೂಲವಾಗಿರುವ ಕಾರ್ಯಕರ್ತರ ಹಿತರಕ್ಷಣೆ ಮತ್ತು ಸಿದ್ಧಾಂತಕ್ಕೆ ಹೆಚ್ಚಿನ ಒತ್ತು ನೀಡಿದರು.

**ವ್ಯಕ್ತಿಗಿಂತ ಸಿದ್ಧಾಂತ ಮುಖ್ಯ:** ಬೈಠಕ್ ಉದ್ದೇಶಿಸಿ ಮಾತನಾಡಿದ ಜಿಲ್ಲಾಧ್ಯಕ್ಷ ಓಂ ಶಕ್ತಿ ಚಲಪತಿ, "ಬಿಜೆಪಿಯ ಬೆಳವಣಿಗೆಯು ಕಾರ್ಯಕರ್ತರ ನಿರಂತರ ಪರಿಶ್ರಮದ ಫಲವಾಗಿದೆ. ಕಾರ್ಯಕರ್ತರು ಯಾವುದೇ ಒಬ್ಬ ನಾಯಕನಿಗಾಗಿ ದುಡಿಯುವುದಿಲ್ಲ, ಬದಲಾಗಿ ಪಕ್ಷದ ಸಿದ್ಧಾಂತ ಮತ್ತು ನಿಷ್ಠೆಗೆ ಬದ್ಧರಾಗಿರುತ್ತಾರೆ. ಅಂತಹ ಸಮರ್ಪಿತ ಕಾರ್ಯಕರ್ತರ ಗೌರವವನ್ನು ಕಾಪಾಡುವುದು ಪ್ರತಿಯೊಬ್ಬ ನಾಯಕನ ಆದ್ಯ ಕರ್ತವ್ಯ," ಎಂದು ಮಾರ್ಮಿಕವಾಗಿ ನುಡಿದರು.

**ಕಾರ್ಯಕರ್ತರ ಋಣ ತೀರಿಸಲಾಗದು:** ಪಕ್ಷದ ಪ್ರಭಾರಿ ಬೋಜೇಗೌಡ ಮಾತನಾಡಿ, "ಸಾವಿರಾರು ಕಾರ್ಯಕರ್ತರ ತ್ಯಾಗ ಮತ್ತು ಬಲಿದಾನದಿಂದಲೇ ನಾಯಕರು ರೂಪುಗೊಳ್ಳುತ್ತಾರೆ. ಕಾರ್ಯಕರ್ತರನ್ನು ಕಡೆಗಣಿಸುವುದು ಅಕ್ಷಮ್ಯ ಅಪರಾಧ. ಯಾವುದೇ ನಾಯಕನೂ ಕಾರ್ಯಕರ್ತರ ಋಣವನ್ನು ಪೂರ್ಣವಾಗಿ ತೀರಿಸಲು ಸಾಧ್ಯವಿಲ್ಲ. ಆದ್ದರಿಂದ ನಾಯಕರು ಕಾರ್ಯಕರ್ತರನ್ನು ಗೌರವದಿಂದ ನಡೆಸಿಕೊಳ್ಳಬೇಕು," ಎಂದು ಕಿವಿಮಾತು ಹೇಳಿದರು.

**ತರಬೇತಿ ವರ್ಗ ತಪ್ಪಿಸಿಕೊಳ್ಳಬೇಡಿ:** ಮಾಜಿ ಸಂಸದ ಎಸ್. ಮುನಿಸ್ವಾಮಿ ಮಾತನಾಡಿ, ಸಂಘಟನೆಯನ್ನು ಬಲಪಡಿಸುವ ದೃಷ್ಟಿಯಿಂದ ತರಬೇತಿ ವರ್ಗಗಳು ಅತ್ಯಂತ ಅವಶ್ಯಕ. ಇವು ಕಾರ್ಯಕರ್ತರನ್ನು ಭವಿಷ್ಯದ ನಾಯಕರನ್ನಾಗಿ ರೂಪಿಸುತ್ತವೆ. ಆದ್ದರಿಂದ ಪ್ರತಿಯೊಬ್ಬ ಪದಾಧಿಕಾರಿಯೂ ಇಂತಹ ಪ್ರಶಿಕ್ಷಣ ವರ್ಗಗಳಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಬೈಠಕ್‌ನಲ್ಲಿ ಮಾಜಿ ಶಾಸಕ ವೈ. ಸಂಪಂಗಿ, ಕೋಲಾರ ನಗರಾಧ್ಯಕ್ಷ ಸಾಮ್ ಅನಿಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಪ್ಪಿರಾಜು ಸೇರಿದಂತೆ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಹಾಗೂ ಪ್ರಮುಖ ನಾಯಕರು ಉಪಸ್ಥಿತರಿದ್ದರು.

# ಮಂಕುತಿಮ್ಮನ ಕಗ್ಗ ಆಧುನಿಕ ಭಗವದ್ಗೀತೆ ಸಮಾಜಕ್ಕೆ ದಾರಿದೀಪ: ರಾಧಮ್ಮ

ಕೋಲಾರ

ಡಿವಿಜಿಯವರ ಮಂಕುತಿಮ್ಮನ ಕಗ್ಗ ಆಧುನಿಕ ಭಗವದ್ಗೀತೆಯಾಗಿದ್ದು, ಅದು ಸಮಾಜದಲ್ಲಿನ ಅಶಾಂತಿ, ಅತಿಯಾಸೆ ಹೋಗಲಾಡಿಸಿ ನೆಮ್ಮದಿಯ ಬದುಕು ನೀಡುವ ದಾರಿದೀಪವಾಗಿದ್ದು, ಮಕ್ಕಳು ಅವರ ಆದರ್ಶ ಪಾಲಿಸಬೇಕು ಎಂದು ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎಂ. ರಾಧಮ್ಮ ಕರೆ ನೀಡಿದರು.

ಕರುನಾಡ ಕನ್ನಡ ಸಂಘ, ತನೀಷ್ಕ್ ಮೋಟಾರ್ಸ್ ಮುಳಬಾಗಿಲು ಅವರ ಸಹಯೋಗದಲ್ಲಿ ತಾಲ್ಲೂಕಿನ ಚದುಮನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಹಮ್ಮಿಕೊಂಡಿದ್ದ ಡಿ.ವಿ.ಗುಂಡಪ್ಪ ಅವರ 139ನೇ ಜನ್ಮದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಸಾಧಕ ಮಕ್ಕಳನ್ನು ಪುರಸ್ಕರಿಸಿ, ಪರೀಕ್ಷಾ ಸಲಕರಣೆ ವಿತರಣೆ, ಶಾಲೆಗಳಿಗೆ ಜ್ಞಾನಪೀಠ ಸಾಹಿತಿಗಳ ಫೋಟೋಗಳನ್ನು ಕೊಡುಗೆಯಾಗಿ ವಿತರಿಸಿ ಅವರು ಮಾತನಾಡುತ್ತಿದ್ದರು.



ಕನ್ನಡ ಸಾಹಿತ್ಯ ಲೋಕಕ್ಕೆ ಅಪಾರ ಕೊಡುಗೆ ನೀಡಿರುವ ಡಿವಿಜಿಯವರು ಅತ್ಯಂತ ಶ್ರೇಷ್ಠ ಕವಿಗಳು, ಸಾಹಿತಿಗಳು, ಪತ್ರಕರ್ತರಾಗಿದ್ದು, ಅವರ ಮಂಕುತಿಮ್ಮನ ಕಗ್ಗ ಕೃತಿ ಜೀವನದ ತತ್ವಜ್ಞಾನವನ್ನು ಸರಳ ಪದ್ಯಗಳಲ್ಲಿ ಹೇಳುವ ಇವರ ಮೇರು ಕೃತಿ.

**ಅಂತಃಪುರ ಗೀತೆಗಳು:**
ಪ್ರೇಮ ಮತ್ತು ಪ್ರಕೃತಿಯನ್ನು ವರ್ಣಿಸುವ ಗೀತ ಸಂಕಲನ, 'ಮರುಳ ಮುನಿಯನ ಕಗ್ಗ', 'ಜೀವನಧರ್ಮ ಯೋಗ, 'ಜ್ಞಾಪಕ ಚಿತ್ರಶಾಲೆ', 'ಮಹನೀಯರು' ಮುಂತಾದುವು ಎಂದು ತಿಳಿಸಿ ಇವರಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯೂ ಲಭಿಸಿದೆ ಎಂದರು.

ಡಿವಿಜಿ ಯವರು ಸಾಹಿತ್ಯ ಮಾತ್ರವಲ್ಲದೆ ಚರಿತ್ರೆ, ರಾಜನೀತಿ, ತತ್ವಜ್ಞಾನ, ಪ್ರಜಾಪ್ರಭುತ್ವ, ಸಮಾಜ ವಿಜ್ಞಾನ, ಸಾರ್ವಜನಿಕ ಜೀವನ, ಮುಂತಾದ ಹಲವಾರು ವಿಷಯಗಳನ್ನು ಕುರಿತು ಅವರು 66 ಕನ್ನಡ ಕೃತಿಗಳನ್ನು ರಚಿಸಿರುವುದರ ಜೊತೆಗೆ, ಇಂಗ್ಲೀಷ್, ಕನ್ನಡ ಭಾಷೆಗಳೆರಡರಲ್ಲಿಯೂ ನೂರಾರು ಉಪಯುಕ್ತ ಲೇಖನಗಳನ್ನೂ ಬರೆದಿರುತ್ತಾರೆ ಎಂದರು.

ಕರುನಾಡ ಕನ್ನಡ ಸಂಘದ ಅಧ್ಯಕ್ಷ ಇ. ಶ್ರೀನಿವಾಸಗೌಡ ಕಾರ್ಯಕ್ರಮ ಉದ್ಘಾಟಿಸಿ, ಡಿ.ವಿ.ಗುಂಡಪ್ಪ ಅವರು ಕೋಲಾರ ಜಿಲ್ಲೆಯವರು ಎಂದು ಹೇಳಲು ಹೆಮ್ಮೆಯಾಗುತ್ತದೆ. ಅವರು ಆಧುನಿಕ ಕನ್ನಡ ಸಾಹಿತ್ಯದ ಶ್ರೇಷ್ಠ ಕವಿ, ತತ್ವಜ್ಞಾನಿ ಮತ್ತು ಪತ್ರಕರ್ತರು. 'ಮಂಕುತಿಮ್ಮನ ಕಗ್ಗ'ದ ಮೂಲಕ 'ಕನ್ನಡದ ಆಧುನಿಕ ಸರ್ವಜ್ಞ' ಎಂದೇ ಜನಪ್ರಿಯರಾದ ಇವರು, ಜೀವನಧರ್ಮ ಯೋಗ, ಅಂತರಂಗದ ಗೀತೆಗಳಂತಹ ಕೃತಿಗಳನ್ನು ರಚಿಸಿದ್ದಾರೆ. ಕಾವ್ಯ, ಜೀವನಚರಿತ್ರೆ ಮತ್ತು ಪತ್ರಿಕೋದ್ಯಮದಲ್ಲಿ ಅಪಾರ ಸೇವೆ ಸಲ್ಲಿಸಿ ಪದ್ಮಭೂಷಣ ಪ್ರಶಸ್ತಿ ಪಡೆದಿದ್ದಾರೆ ಎಂದು ತಿಳಿಸಿದರು.

ಕರುನಾಡ ಕನ್ನಡ ಸಂಘದ ಪ್ರಧಾನ ಕಾರ್ಯದರ್ಶಿ ಎಂ.ವಿ.ಜಗನ್ನಾಥ್ ಪ್ರಾಸ್ತಾವಿಕವಾಗಿ ಮಾತನಾಡಿ, ಡಿವಿಜಿಯವರ ಸ್ಮರಣೆ ಒಂದು ದಿನಕ್ಕೆ ಸೀಮಿತವಲ್ಲ, ಅವರು ಸಮಾಜಕ್ಕೆ ನೀಡಿರುವ ಕೊಡುಗೆ ಅಪಾರವಾಗಿದ್ದು, ಅವರ ಪ್ರಾಮಾಣಿಕತೆ, ಬದ್ದತೆ,ಶಿಸ್ತಿನ ಜೀವನ ಇಂದಿನ ಯುವಜನತೆಗೆ ಆದರ್ಶವಾಗಿದೆ ಎಂದು ತಿಳಿಸಿದರು.

ನಿವೃತ್ತರಾದ ನವೀನ ಮಾತನಾಡಿ, ಡಿವಿಜಿ ಅವರ ಸಾಹಿತ್ಯ ಹೆಮ್ಮರದಂತಿದೆ ಎಂದ ಅವರು, ಅವರ ಹೆಸರು ಚಿರಸ್ಥಾಯಿಯಾಗಿರಲು ಕೋಲಾರ ಜಿಲ್ಲೆಯಲ್ಲಿ ಡಿವಿಜಿ ಯವರ ಪುತ್ಥಳಿಯನ್ನು ನಿರ್ಮಾಣ ಮಾಡಬೇಕು.

ಯುವ ಸಾಹಿತಿಗಳು ಅವರ ಕೃತಿಗಳನ್ನು ಅಧ್ಯಯನ ಮಾಡಬೇಕು, ಅವರಂತೆ ಸಮಾಜದ ಅಂಧಕಾರ ನಿವಾರಿಸುವ ಸಾಹಿತ್ಯ ರಚನೆಯಗಬೇಕು ಎಂದರು.

ಮುಖ್ಯಶಿಕ್ಷಕ ಮಂಜುನಾಥ್ ಅಧ್ಯಕ್ಷತೆ ವಹಿಸಿದ್ದು, ಕಾರ್ಯಕ್ರಮದಲ್ಲಿ ಶಿಕ್ಷಣ ಸಂಯೋಜಕ ನಾಗರಾಜ್, ಪ್ರೌಢಶಾಲಾ ಶಿಕ್ಷಕ ವೆಂಕಟಾಚಲಪತಿ, ಕರುನಾಡ ಕನ್ನಡ ಸಂಘದ ಖಜಾಂಚಿ ಎಂ.ಶ್ರೀರಾಮ್, ಸಹಕಾರ್ಯದರ್ಶಿ ಸಿದ್ದಲಿಂಗಯ್ಯ, ಶಿಕ್ಷಕರಾದ ಗೌರಮ್ಮ, ಜೆ.ಡಿ.ಲಕ್ಷ್ಮಿ, ಮಲ್ಲಿಕಾ ಮತ್ತಿತರರಿದ್ದರು.

# ನೂತನ ಶಾಲಾ ಕಟ್ಟಡ ಉದ್ಘಾಟನೆ

ದೊಡ್ಡಬಳ್ಳಾಪುರ

ನಗರದ 4ನೇ ವಾರ್ಡ್ ವಿನಾಯಕ ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಅಸ್ಟಿಮೋ ಫೈ ಪ್ರೈವೇಟ್ ಲಿಮಿಟೆಡ್ ಕಂಪನಿಯ ವತಿಯಿಂದ ನಿರ್ಮಿಸಲಾದ ನೂತನ ಶಾಲಾ ಕಟ್ಟಡ ಹಾಗೂ ಅಂಗನವಾಡಿ ಕೇಂದ್ರವನ್ನು ಶಾಸಕ ಧೀರಜ್ ಮುನಿರಾಜ್ ಅವರು ಬುಧವಾರ ಉದ್ಘಾಟಿಸಿದರು.

ಅಸ್ಟಿಮೋ ಫೈ ಕಂಪನಿಯ ಸುಮಾರು 54 ಲಕ್ಷ ರೂ.ಗಳ ಸಿ.ಎಸ್.ಆರ್. ಅನುದಾನದಡಿ ಈ ಸುಸಜ್ಜಿತ ಶಾಲಾ ಕಟ್ಟಡ ಮತ್ತು ಅಂಗನವಾಡಿ ಕೇಂದ್ರವನ್ನು ನಿರ್ಮಿಸಲಾಗಿದೆ. ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಖಾಸಗಿ ಕಂಪನಿಗಳು ಮುಂದೆ ಬರುತ್ತಿರುವುದು ಶ್ಲಾಘನೀಯ ಎಂದು ಶಾಸಕರು ಈ ಸಂದರ್ಭದಲ್ಲಿ ತಿಳಿಸಿದರು. ನಗರಸಭೆ ಸದಸ್ಯರಾದ ಬಂತಿ ವೆಂಕಟೇಶ್, ಪದ್ಮನಾಭ, ನವೀನ್, ಸುಧಾರಾಣಿ ಲಕ್ಷ್ಮೀನಾರಾಯಣ್, ಬಿಜೆಪಿ ಮುಖಂಡರಾದ ಗೋಪಿ, ವತ್ಸಲಾ ಜಗನ್ನಾಥ್ ಈ ವೇಳೆ ಉಪಸ್ಥಿತರಿದ್ದರು.

# 'ಗರ್ಭಿಣಿ ಮತ್ತು ವಿಕಲಚೇತನ ಶಿಕ್ಷಕರನ್ನು ಗಣತಿ ಕಾರ್ಯದಿಂದ ಮುಕ್ತಗೊಳಿಸಿ'

ಕೋಲಾರ

ರಾಜ್ಯಾದ್ಯಂತ ಆರಂಭವಾಗಲಿರುವ 2026ರ ಜನಗಣತಿ ಕಾರ್ಯದಲ್ಲಿ ಗರ್ಭಿಣಿಯರು, ವಿಕಲಚೇತನರು ಹಾಗೂ ಗಂಭೀರ ಅನಾರೋಗ್ಯದಿಂದ ಬಳಲುತ್ತಿರುವ ಶಿಕ್ಷಕರಿಗೆ ವಿನಾಯಿತಿ ನೀಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಶಾಖೆಯ ವತಿಯಿಂದ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

**ಮಾನವೀಯ ಆಧಾರದ ಮೇಲೆ ವಿನಾಯಿತಿಗೆ ಆಗ್ರಹ:**
ಸಂಘದ ತಾಲ್ಲೂಕು ಅಧ್ಯಕ್ಷ ಎಸ್. ನಾರಾಯಣಸ್ವಾಮಿ ನೇತೃತ್ವದಲ್ಲಿ ಮನವಿ ಸಲ್ಲಿಸಿದ ನಿಯೋಗವು, ಶಿಕ್ಷಕರು ಎದುರಿಸುತ್ತಿರುವ ನೈಜ ಸಮಸ್ಯೆಗಳನ್ನು ಎಡಿಸಿಯವರ ಗಮನಕ್ಕೆ ತಂದಿತು. "50 ವರ್ಷ ಮೇಲ್ಪಟ್ಟ ಶಿಕ್ಷಕಿಯರು ಹಾಗೂ 55 ವರ್ಷ ದಾಟಿದ ಪುರುಷ ಶಿಕ್ಷಕರಿಗೆ ವಯೋಸಹಜ ಆರೋಗ್ಯ ಸಮಸ್ಯೆಗಳಿರುತ್ತವೆ. ಅಂತಹವರನ್ನು ಗಣತಿ ಕಾರ್ಯದಿಂದ ಮುಕ್ತಗೊಳಿಸಬೇಕು. ಹಾಗೆಯೇ ಸಣ್ಣ ಮಕ್ಕಳಿರುವ ಶಿಕ್ಷಕಿಯರು ಮತ್ತು ಮನೆಯಲ್ಲಿ ವಿವಾಹ ಕಾರ್ಯವಿರುವ ಶಿಕ್ಷಕರಿಗೂ ವಿನಾಯಿತಿ ನೀಡಬೇಕು," ಎಂದು ಒತ್ತಾಯಿಸಿದರು.

**ತಾಂತ್ರಿಕ ಸಮಸ್ಯೆ ಹಾಗೂ ನಿಯೋಜನೆ ಕುರಿತು ಮನವಿ:** ಈ ಬಾರಿಯ ಗಣತಿಯು ಸಂಪೂರ್ಣ ಮೊಬೈಲ್ ಆಧಾರಿತವಾಗಿರುವುದರಿಂದ, ಸ್ಮಾರ್ಟ್‌ಫೋನ್ ಬಳಕೆ ಸರಿಯಾಗಿ ತಿಳಿಯದ ಹಿರಿಯ ಶಿಕ್ಷಕರಿಗೆ ತೊಂದರೆಯಾಗಲಿದೆ. ಅಂತಹವರಿಗೆ ವಿನಾಯಿತಿ ನೀಡಿ, ಆಸಕ್ತಿಯಿರುವ ಯುವ ಶಿಕ್ಷಕರನ್ನು ಬಳಸಿಕೊಳ್ಳಬೇಕು ಎಂದು ಸಂಘವು ಕೋರಿದೆ.



**ಸಂಘದ ಪ್ರಮುಖ ಬೇಡಿಕೆಗಳು:**
**ದಂಪತಿ ಶಿಕ್ಷಕರು:** ಪತಿ-ಪತ್ನಿ ಇಬ್ಬರೂ ಶಿಕ್ಷಕರಾಗಿದ್ದರೆ, ಅವರನ್ನು ಒಂದೇ ಕಾರ್ಯಕ್ಷೇತ್ರಕ್ಕೆ ನಿಯೋಜಿಸಬೇಕು.
**ಸೇವಾ ಹಿರಿತನ:** ಅನುಭವವಿರುವ ಹಿರಿಯ ಶಿಕ್ಷಕರನ್ನು ಗಣತಿ ಮೇಲ್ವಿಚಾರಕರನ್ನಾಗಿ (ಖಣಿರಿಜಡಿತುಂಥಿ) ನೇಮಿಸಬೇಕು.
**ಸ್ಥಳೀಯ ನಿಯೋಜನೆ:** ಮತಗಟ್ಟೆ ಅಧಿಕಾರಿಗಳು ಸ್ವಯಿಚ್ಛೆಯಿಂದ ಕಾರ್ಯನಿರ್ವಹಿಸಲು ಸಿದ್ಧವಿದ್ದಲ್ಲಿ, ಅವರ ಕಾರ್ಯಕ್ಷೇತ್ರದಲ್ಲೇ ಗಣತಿಗೆ ಅವಕಾಶ ನೀಡಬೇಕು.

ಸಮಸ್ಯೆಗಳಿಲ್ಲದ ಉಳಿದೆಲ್ಲಾ ಶಿಕ್ಷಕರು ಗಣತಿ ಕಾರ್ಯಕ್ಕೆ ಸಂಪೂರ್ಣ ಸಹಕಾರ ನೀಡಲು ಸಿದ್ಧರಿದ್ದು, ಕೇವಲ ಅನಿವಾರ್ಯ ಕಾರಣಗಳಿರುವ ಶಿಕ್ಷಕರ ಮನವಿಯನ್ನು ಪುರಸ್ಕರಿಸಬೇಕು ಎಂದು ಪದಾಧಿಕಾರಿಗಳು ವಿನಂತಿಸಿದರು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಪಿ. ಸೋಮಶೇಖರ್, ಖಜಾಂಚಿ ಟಿ.ಎನ್. ಅಶ್ವತಪ್ಪ, ಗೌರವಾಧ್ಯಕ್ಷ ಎನ್. ನಾಗರಾಜ್, ಜಿಲ್ಲಾ ಉಪಾಧ್ಯಕ್ಷ ಎನ್. ಕೃಷ್ಣಪ್ಪ ಹಾಗೂ ನೌಕರರ ಸಂಘದ ನಿರ್ದೇಶಕ ಬಿ.ಎಂ. ವೆಂಕಟಾಚಲಪತಿಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿಧಿಗೆ ಸವಾಲ್ ಹಾಕಿದ ಕುಸುಮಾ!



ಕೋಲಾರ

ಅಪಘಾತದಲ್ಲಿ ಕಾಲು ಕಳೆದುಕೊಂಡರೂ ಶಿಕ್ಷಣದ ಮೇಲಿನ ಅಪಾರ ಬದ್ಧತೆ ಮತ್ತು ಅಸಾಧಾರಣ ಧೈರ್ಯ ಮೆರೆದ ಕೆಜಿಎಫ್ ತಾಲ್ಲೂಕಿನ ವಿದ್ಯಾರ್ಥಿನಿ ಕುಸುಮಾ ಈಗ ನಾಡಿನಾದ್ಯಂತ ಎಲ್ಲರ ಮನಗೆದ್ದಿದ್ದಾಳೆ. ಭೀಕರ ನೋವಿನ ನಡುವೆಯೂ ಆಕೆ ಪರೀಕ್ಷಾ ಕೇಂದ್ರಕ್ಕೆ ಹಾಜರಾಗಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುವ ಮೂಲಕ 'ಛಲವಿದ್ದರೆ ಏನನ್ನೂ ಸಾಧಿಸಬಹುದು' ಎಂಬುದನ್ನು ಸಾಬೀತುಪಡಿಸಿದ್ದಾಳೆ.

**ವಿಧಿಯ ಆಟಕ್ಕೂ ಬಗ್ಗದ ವಿದ್ಯಾರ್ಥಿನಿ:** ಚಿನ್ನನಾಗನಹಳ್ಳಿ ಗ್ರಾಮದ 16 ವರ್ಷದ ಕುಸುಮಾ ಸೆಂಟ್ ಮೇರಿಸ್ ಹೈಸ್ಕೂಲ್‌ನ ವಿದ್ಯಾರ್ಥಿನಿ. ಇತ್ತೀಚೆಗೆ ನಡೆದ ಭೀಕರ ರಸ್ತೆ ಅಪಘಾತವೊಂದರಲ್ಲಿ ಈಕೆ ಒಂದು ಕಾಲನ್ನು ಕಳೆದುಕೊಂಡಿದ್ದಾಳೆ. ಗಂಭೀರ ಗಾಯಗಳಿಂದಾಗಿ ಆಸ್ಪತ್ರೆಗೆ ದಾಖಲಾಗಿರುವ ಆಕೆಗೆ ಈಗಾಗಲೇ ಒಂದು ಶಸ್ತ್ರಚಿಕಿತ್ಸೆ ನಡೆದಿದ್ದು, ಇನ್ನೂ ಎರಡು ಶಸ್ತ್ರಚಿಕಿತ್ಸೆಗಳು ಬಾಕಿ ಇವೆ ಎಂದು ವೈದ್ಯರು ತಿಳಿಸಿದ್ದಾರೆ. ಆದರೆ, ಶಸ್ತ್ರಚಿಕಿತ್ಸೆಗಿಂತಲೂ ತನಗೆ ಪರೀಕ್ಷೆಯೇ ಮುಖ್ಯ ಎಂದು ಹಠ ಹಿಡಿದ ಕುಸುಮಾ, ಆಸ್ಪತ್ರೆಯಿಂದ ನೇರವಾಗಿ ಆಂಬ್ಯುಲೆನ್ಸ್ ಮೂಲಕ ಪರೀಕ್ಷಾ ಕೇಂದ್ರಕ್ಕೆ ಆಗಮಿಸಿದ್ದಾಳೆ.

**ಸ್ಟ್ರೆಚರ್ ಮೇಲೆಯೇ ಕುಳಿತು ಪರೀಕ್ಷೆ:** ಕೆಜಿಎಫ್‌ನ ಸೆಂಟ್ ಜೋಸೆಫ್ ಸ್ಕೂಲ್‌ನಲ್ಲಿ ನಡೆದ ಪರೀಕ್ಷೆಯಲ್ಲಿ ಕುಸುಮಾ ಭಾಗವಹಿಸಿದ್ದಳು. ಆಕೆಗೆ ಕುಳಿತುಕೊಳ್ಳಲು ಸಾಧ್ಯವಾಗದ ಕಾರಣ, ಸ್ಟ್ರೆಚರ್ ಮೇಲೆಯೇ ಮಲಗಿಕೊಂಡು ಪ್ರಶ್ನೆ ಪತ್ರಿಕೆಗೆ ಉತ್ತರ ಬರೆಯುವ ಮೂಲಕ ತನ್ನ ಅಸಾಮಾನ್ಯ ಮನೋಸ್ಥೈರ್ಯ ಪ್ರದರ್ಶಿಸಿದಳು. ಆಕೆಯ ಈ ಸಾಹಸವನ್ನು ಕಂಡು ಪರೀಕ್ಷಾ ಕೇಂದ್ರದಲ್ಲಿದ್ದ ಇತರ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಭಾವುಕರಾದರು.

**ಶಿಕ್ಷಣಾಧಿಕಾರಿಗಳ ಮಾನವೀಯ ಸ್ಪಂದನೆ:** ವಿದ್ಯಾರ್ಥಿನಿಯ ಸ್ಥಿತಿಯನ್ನು ಅರಿತ ಕೆಜಿಎಫ್ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜಿ. ನಾರಾಯಣಸ್ವಾಮಿ ಅವರು ತಕ್ಷಣವೇ ಸ್ಪಂದಿಸಿದರು. ಮಾನವೀಯ ದೃಷ್ಟಿಯಿಂದ ಕುಸುಮಾಗೆ ಪರೀಕ್ಷೆ ಬರೆಯಲು ವಿಶೇಷ ಅನುಮತಿ ನೀಡಿ, ಆಕೆಗೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಿಕೊಡುವಂತೆ ಪರೀಕ್ಷಾ ಕೇಂದ್ರದ ಅಧಿಕಾರಿಗಳಿಗೆ ಸೂಚನೆ ನೀಡಿದರು.

# 26ರಿಂದ ಅಥ್ಲೆಟಿಕ್ ಹಬ್ಬ

ತಿಪಟೂರು

ನಗರದ ಕೆವಿಎಸ್ ಕ್ರೀಡಾಂಗಣದಲ್ಲಿ ಮಾರ್ಚ್ 26 ರಿಂದ 29 ರವರೆಗೆ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಹಾಗೂ ಕಲ್ಪತರು ತಾಂತ್ರಿಕ ಮಹಾವಿದ್ಯಾಲಯದ ಜಂಟಿ ಆಶ್ರಯದಲ್ಲಿ 2025-26ನೇ ಸಾಲಿನ '27ನೇ ರಾಜ್ಯ ಮಟ್ಟದ ಅಥ್ಲೆಟಿಕ್ ಕ್ರೀಡಾಕೂಟ' ಆಯೋಜಿಸಲಾಗಿದೆ ಎಂದು ಕಲ್ಪತರು ವಿದ್ಯಾಸಂಸ್ಥೆಯ ಖಜಾಂಚಿ ಟಿ.ಎಸ್. ಶಿವಪ್ರಸಾದ್ ತಿಳಿಸಿದರು.

ಸಂಸ್ಥೆಯ ಆಡಳಿತ ಮಂಡಳಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬೃಹತ್ ಕ್ರೀಡಾಕೂಟಕ್ಕೆ ಸುಮಾರು 150ಕ್ಕೂ ಹೆಚ್ಚು ಕಾಲೇಜುಗಳಿಂದ 1800ಕ್ಕೂ ಅಧಿಕ ಕ್ರೀಡಾಪಟುಗಳು ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

**ಭವ್ಯ ಮೆರವಣಿಗೆ ಹಾಗೂ ಉದ್ಘಾಟನೆ:** ಮಾರ್ಚ್ 26ರಂದು ಮಧ್ಯಾಹ್ನ 3 ಗಂಟೆಗೆ ನಗರದ ಗ್ರಾಮದೇವತೆ ಶ್ರೀ ಕೆಂಪಮ್ಮ ದೇವಸ್ಥಾನದಿಂದ ವಿವಿಧ ಜಾನಪದ ಕಲಾತಂಡಗಳೊಂದಿಗೆ ಕ್ರೀಡಾಪಟುಗಳ ಭವ್ಯ ಮೆರವಣಿಗೆ ನಡೆಯಲಿದೆ. ಸಂಜೆ 4 ಗಂಟೆಗೆ ಕೇಂದ್ರ ಸಚಿವ ವಿ. ಸೋಮಣ್ಣ ಕ್ರೀಡಾಕೂಟವನ್ನು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಪಿ.ಕೆ. ತಿಪ್ಪೇರುದ್ರಪ್ಪ ವಹಿಸಲಿದ್ದು, ಶಾಸಕ ಕೆ. ಷಡಕ್ಷರಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

**ಸಾಂಸ್ಕೃತಿಕ ಲೋಕದ ತಾರಾ ಮೆರುಗು:**
ಕ್ರೀಡಾಕೂಟದ ಅಂಗವಾಗಿ ಪ್ರತಿದಿನ ಸಂಜೆ ಸಾಂಸ್ಕೃತಿಕ ಸೌರಭ ಹರಿಯಲಿದೆ:

**ಮಾರ್ಚ್ 27:** ಕಿರುತೆರೆ ನಟ ರಕ್ಷಾ ರಾಮ್ ಭಾಗವಹಿಸಲಿದ್ದಾರೆ.
**ಮಾರ್ಚ್ 28:** ಕನ್ನಡ ಚಿತ್ರರಂಗದ ನಟ ವಿನಯ್ ರಾಜಕುಮಾರ್, ನಟಿ ಮೇಘಾ ಶೆಟ್ಟಿ ಹಾಗೂ ಕಥೆಗಾರ ನಾಗಾರ್ಜುನ ಶರ್ಮ ಕಳೆ ನೀಡಲಿದ್ದಾರೆ.
**ಮಾರ್ಚ್ 29:** ಮಧ್ಯಾಹ್ನ 1:30ಕ್ಕೆ ಸಮಾರೋಪ ಸಮಾರಂಭ ಮತ್ತು ಬಹುಮಾನ ವಿತರಣೆ ಜರುಗಲಿದೆ.

**19 ವರ್ಷಗಳ ನಂತರ ಸಿಕ್ಕ ಅವಕಾಶ:** ಸಂಸ್ಥೆಯ ಅಧ್ಯಕ್ಷ ಪಿ.ಕೆ. ತಿಪ್ಪೇರುದ್ರಪ್ಪ ಮಾತನಾಡಿ, "2007ರ ನಂತರ ಅಂದರೆ ಬರೋಬ್ಬರಿ 19 ವರ್ಷಗಳ ಬಳಿಕ ನಮ್ಮ ಸಂಸ್ಥೆಗೆ ರಾಜ್ಯ ಮಟ್ಟದ ಕ್ರೀಡಾಕೂಟ ಆಯೋಜಿಸುವ ಅವಕಾಶ ಲಭಿಸಿರುವುದು ಹೆಮ್ಮೆಯ ವಿಷಯ. ಈ ಕ್ರೀಡಾಕೂಟಕ್ಕಾಗಿ ಸುಮಾರು 60 ಲಕ್ಷ ರೂ. ವೆಚ್ಚ ಮಾಡಲಾಗುತ್ತಿದ್ದು, ಕ್ರೀಡಾಪಟುಗಳಿಗೆ ವಸತಿ ಹಾಗೂ ಊಟದ ಸಕಲ ವ್ಯವಸ್ಥೆ ಮಾಡಲಾಗಿದೆ," ಎಂದರು. ಪತ್ರಿಕಾಗೋಷ್ಠಿಯಲ್ಲಿ ಸಂಸ್ಥೆಯ ಉಪಾಧ್ಯಕ್ಷರಾದ ಬಾಗೇಪಲ್ಲಿ ನಟರಾಜು, ಕಾರ್ಯದರ್ಶಿಗಳಾದ ಜಿ.ಎಸ್. ಉಮಾಶಂಕರ್, ಕೆಐಟಿ ಪ್ರಾಂಶುಪಾಲ ಡಾ. ಎಚ್.ಸಿ. ಸತೀಶ್ ಕುಮಾರ್ ಹಾಗೂ ಆಡಳಿತ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.

# ಏ.6ಕ್ಕೆ ಬಸವಣ್ಣನ ಕಂಚಿನ ಪ್ರತಿಮೆ ಲೋಕಾರ್ಪಣೆ

ದೇವನಹಳ್ಳಿ

ಬೀರಸಂದ್ರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಗಜ್ಯೋತಿ ಬಸವೇಶ್ವರರ ಭವ್ಯ ಕಂಚಿನ ಪ್ರತಿಮೆಯು ಮುಂಬರುವ ಏಪ್ರಿಲ್ 6ರಂದು ಲೋಕಾರ್ಪಣೆಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ತಿಳಿಸಿದರು. ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ಸುಮಾರು 80 ಲಕ್ಷ ರೂ. ವೆಚ್ಚದಲ್ಲಿ ಈ ಪ್ರತಿಮೆಯನ್ನು ನಿರ್ಮಿಸಲಾಗಿದೆ. ಬಸವಣ್ಣನವರ ಮಂಟಪವು 28 ಅಡಿ ಎತ್ತರವಿದ್ದು, 5 ಅಡಿ ಉದ್ದದ ಪ್ರತಿಮೆಗೆ ಸುಮಾರು 450 ಕೆಜಿ ಕಂಚನ್ನು ಬಳಸಲಾಗಿದೆ. ಏಪ್ರಿಲ್ 6ರಂದು ಬೆಳಿಗ್ಗೆ 10 ಗಂಟೆಗೆ ಪ್ರತಿಮೆಯ ಅನಾವರಣ ನೆರವೇರಲಿದ್ದು, ಬಳಿಕ ಸಭಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದೆ.



**ಸಚಿವರು ಹಾಗೂ ಮಠಾಧೀಶರ ಆಗಮನ:** ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು, ರಾಜ್ಯದ ವಿವಿಧ ಸಚಿವರು, ಸಂಸದರು, ಗಣ್ಯರು ಹಾಗೂ ಮಠಾಧೀಶರು ಭಾಗವಹಿಸಲಿದ್ದಾರೆ. ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಜನಪ್ರತಿನಿಧಿಗಳಿಗೆ ತಲುಪಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕಾರ್ಯಕ್ರಮಕ್ಕೆ ಮೆರುಗು ನೀಡಲು ವಿವಿಧ ಜಾನಪದ ಕಲಾತಂಡಗಳ ಮೆರವಣಿಗೆ ಹಾಗೂ ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಡಿಸಿ ನಿರ್ದೇಶನ ನೀಡಿದರು.

**ಸಕಲ ಸಿದ್ಧತೆಗೆ ಅಧಿಕಾರಿಗಳಿಗೆ ಸೂಚನೆ:** ವೇದಿಕೆಯ ಅಲಂಕಾರಕ್ಕಾಗಿ ತೋಟಗಾರಿಕೆ ಇಲಾಖೆ ಹಾಗೂ ಅತಿಥಿಗಳ ಉಪಹಾರದ ಜವಾಬ್ದಾರಿಯನ್ನು ಘಾಟಿ ಸುಬ್ರಹ್ಮಣ್ಯ ದೇವಸ್ಥಾನದ ಮಂಡಳಿಗೆ ವಹಿಸಲಾಗಿದೆ. ಕಾರ್ಯಕ್ರಮದ ಸುಸೂತ್ರ ನಿರ್ವಹಣೆಗಾಗಿ ಪೊಲೀಸ್ ಇಲಾಖೆಗೆ ಬಿಗಿ ಬಂದೋಬಸ್ತ್ ಕಲ್ಪಿಸಲು ಸೂಚಿಸಲಾಗಿದೆ.

ಸಭೆಯಲ್ಲಿ ಡಿಸಿ ಕಚೇರಿ ಸಹಾಯಕ ರಾಜೀವ್ ಸುಲೋಚನ, ವಾರ್ತಾ ಇಲಾಖೆ ಉಪನಿರ್ದೇಶಕ ಅಶೋಕ್ ಕುಮಾರ್ ಡಿ., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರವಿಕುಮಾರ್, ಪ್ರತಿಮೆ ನಿರ್ಮಾಣ ಸಮಿತಿಯ ಗೌರವಾಧ್ಯಕ್ಷ ವಿ. ಮಂಜುನಾಥ್, ಅಧ್ಯಕ್ಷ ಎಸ್. ರಮೇಶ್ ಹಾಗೂ ಸಮಿತಿಯ ಸದಸ್ಯರು ಹಾಜರಿದ್ದರು.

# ಏ.3ಕ್ಕೆ ಮಧುಗಿರಿಗೆ ಸಿಎಂ ಸಿದ್ದರಾಮಯ್ಯ ಭೇಟಿ: ಅಭಿವೃದ್ಧಿ ಹಬ್ಬಕ್ಕೆ ಸಜ್ಜಾಗುತ್ತಿರುವ ಜಿಲ್ಲಾಡಳಿತ

ತುಮಕೂರು

ಜಿಲ್ಲೆಯ ಮಧುಗಿರಿಯಲ್ಲಿ ಏ. 3ರಂದು ಸಿಎಂ ಸಿದ್ದರಾಮಯ್ಯ ಅವರು ಆಗಮಿಸುವ ಕಾರ್ಯಕ್ರಮಕ್ಕೆ ಉದ್ಘಾಟನೆ, ಶಂಕುಸ್ಥಾಪನೆ ಹಾಗೂ ಘೋಷಣೆಗೆ ಸಂಬಂಧಿಸಿದ ಕಾರ್ಯಗಳನ್ನು ಇದೇ 20ರೊಳಗೆ ಅಂತಿಮಗೊಳಿಸುವಂತೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ.ಅಶ್ವಿಜ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾ ಪಂಚಾಯತಿಯಲ್ಲಿ ಬುಧವಾರ ವಿವಿಧ ಹಂತದ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು, ಈಗಾಗಲೇ ಕಾರ್ಯಕ್ರಮದ ವೇದಿಕೆಯ ಜಾಗ, ಇನ್ನಿತರೆ ಪೂರ್ವ ಸಿದ್ಧತೆಗಳ ರೂಪು-ರೇಷೆಗಳನ್ನು ಮಾಡಲಾಗಿದೆ. ಅದರಂತೆ ಮುಖ್ಯಮಂತ್ರಿಯವರು ಉದ್ಘಾಟಿಸಲಿರುವ ಹಾಗೂ ಶಂಕುಸ್ಥಾಪನೆ ನೆರವೇರಿಸಲಿರುವ ಫಲಕಗಳನ್ನು ಶಿಷ್ಟಾಚಾರದಂತೆ ಸಿದ್ಧಪಡಿಸಿ ಸಂಬಂಧಿಸಿದ ಫಲಕದ ಪ್ರತಿಯನ್ನು ಇದೇ 20ರೊಳಗೆ ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವಂತೆ ತಿಳಿಸಿದರು. ಕಾರ್ಯಕ್ರಮ ನಡೆಯಲಿರುವ ಮಧುಗಿರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 39 ಗ್ರಾಮ ಪಂಚಾಯತಿಗಳಿಂದ ಫಲಾನುಭವಿಗಳನ್ನು ಕಾರ್ಯಕ್ರಮಕ್ಕೆ ಕರೆತರಲು ವಾಹನ ವ್ಯವಸ್ಥೆ ಇತ್ಯಾದಿ ಸಿದ್ಧತೆಗಳನ್ನು ನಿಯೋಜಿತ ಅಧಿಕಾರಿಗಳು ಸಮರ್ಪಕವಾಗಿ ನಿರ್ವಹಿಸಿ ಮಾಹಿತಿಯನ್ನು ಒದಗಿಸಬೇಕು. ಅಲ್ಲದೆ, ಕಾರ್ಯಕ್ರಮದಲ್ಲಿ ಭಾಗವಹಿಸುವ ಫಲಾನುಭವಿಗಳಿಗೆ ಹಾಗೂ ಸಾರ್ವಜನಿಕರಿಗೆ ಊಟದ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಇತ್ಯಾದಿಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕೆಂದು ಅವರು ಸೂಚಿಸಿದರು.

ಏಪ್ರಿಲ್ 3ರಂದು ಮುಖ್ಯಮಂತ್ರಿಗಳು ಹೆಲಿಕಾಪ್ಟರ್ ಮೂಲಕ ಆಗಮಿಸಲಿದ್ದು, ಸೂಕ್ತ ಹೆಲಿಪ್ಯಾಡ್ ವ್ಯವಸ್ಥೆಯನ್ನು ಹಾಗೂ ವೇದಿಕೆ ನಿರ್ಮಾಣ ಇತ್ಯಾದಿ ಜವಾಬ್ದಾರಿಗಳನ್ನು ವಹಿಸಿಕೊಂಡಿರುವ ಲೋಕೋಪಯೋಗಿ ಇಲಾಖೆ ಸಂಬಂಧಿಸಿದ ಕಾಮಗಾರಿಗಳಿಗೆ ದೃಢೀಕರಣ ನೀಡಬೇಕು ಎಂದರು. ಅಲ್ಲದೆ, ವಿವಿಧ ಪ್ರಮುಖ ಇಲಾಖೆಗಳಲ್ಲಿ ಆಗಿರುವ ಪ್ರಮುಖ ಅಭಿವೃದ್ಧಿ ಯೋಜನೆಗಳ ಮಾಹಿತಿಯನ್ನು ಮುಖ್ಯಮಂತ್ರಿಯವರ ಭಾಷಣದ ಕರಡು ತಯಾರಿಸಲಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಯವರಿಗೆ ಇದೇ 23ರೊಳಗೆ ಒದಗಿಸುವಂತೆಯೂ ಅವರು ಸೂಚಿಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿಗಳಾದ ಸಂಜೀವಪ್ಪ, ಈಶ್ವರಪ್ಪ, ಯೋಜನಾಧಿಕಾರಿ ಸಣ್ಣಮಸಿಯಪ್ಪ ಸೇರಿದಂತೆ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಅಲ್ಲದೆ, ಮಧುಗಿರಿ ಕ್ಷೇತ್ರ ವ್ಯಾಪ್ತಿಯ ಇಲಾಖೆಗಳ ಅಧಿಕಾರಿಗಳು ವಿಡಿಯೋ ಸಂವಾದದ ಮೂಲಕ ಸಭೆಯಲ್ಲಿ ಪಾಲ್ಗೊಂಡಿದ್ದರು.

21/03/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಜಿಲ್ಲಾಡಳಿತದ ವೆಬ್‌ಕಾಸ್ಟಿಂಗ್ ಕಣ್ಗಾವಲು; ಡಿಸಿ ಭೇಟಿ

ತುಮಕೂರು

ರಾಜ್ಯಾದ್ಯಂತ ಬುಧವಾರದಿಂದ ಆರಂಭವಾಗಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1ರ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ನಗರದ ಎಂಪ್ರೆಸ್ ಕಾಲೇಜು ಮತ್ತು ಕಾಳಿದಾಸ ಪ್ರೌಢಶಾಲೆ ಸೇರಿದಂತೆ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪರೀಕ್ಷಾ ಕೊಠಡಿಗಳಿಗೆ ತೆರಳಿ ವಿದ್ಯಾರ್ಥಿಗಳೊಂದಿಗೆ ಸಂವಹನ ನಡೆಸಿದ ಅವರು, ಮಕ್ಕಳಿಗೆ ಆತ್ಮವಿಶ್ವಾಸ ತುಂಬಿದರು.

ಪರೀಕ್ಷೆ ಜೀವನದ ಕೊನೆಯ ಘಟ್ಟವಲ್ಲ: ಬೆಳಿಗ್ಗೆಯಿಂದಲೇ ಪರೀಕ್ಷಾ ಕೇಂದ್ರಗಳಿಗೆ ಆಗಮಿಸಿ ಉತ್ಸಾಹದಿಂದಿದ್ದ ವಿದ್ಯಾರ್ಥಿಗಳನ್ನು ಕಂಡು ಹರ್ಷ ವ್ಯಕ್ತಪಡಿಸಿದ ಜಿಲ್ಲಾಧಿಕಾರಿಗಳು, "ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ಜೀವನದ ಕೊನೆಯ ಪರೀಕ್ಷೆಯಲ್ಲ. ಶಾಲೆಯಲ್ಲಿ ಕಲಿತ ಪಾಠಗಳನ್ನು ನೆನಪಿಸಿಕೊಂಡು ಆತಂಕವಿಲ್ಲದೆ ನಿರಾಳವಾಗಿ ಪರೀಕ್ಷೆ ಬರೆಯಿರಿ. ಈ ಬಾರಿ ಪರೀಕ್ಷೆ ಬರೆಯಲು ಮೂರು ಅವಕಾಶಗಳಿರುವುದರಿಂದ ಯಾವುದೇ ಭಯ ಬೇಡ," ಎಂದು ಹಾರೈಸಿದರು.

37,130 ವಿದ್ಯಾರ್ಥಿಗಳಿಂದ ಪರೀಕ್ಷೆ; ವೆಬ್‌ಕಾಸ್ಟಿಂಗ್ ಕಣ್ಗಾವಲು: ಜಿಲ್ಲೆಯಾದ್ಯಂತ ಪರೀಕ್ಷಾ ಸಿದ್ಧತೆಗಳ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿಗಳು ಈ ಕೆಳಗಿನ ಮಾಹಿತಿ ನೀಡಿದರು.

ಒಟ್ಟು ವಿದ್ಯಾರ್ಥಿಗಳು: ತುಮಕೂರು ಮತ್ತು ಮಧುಗಿರಿ ಶೈಕ್ಷಣಿಕ ಜಿಲ್ಲೆಗಳಿಂದ ಒಟ್ಟು 37,130 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ.

ಕೇಂದ್ರಗಳ ವಿವರ: ತುಮಕೂರು ಶೈಕ್ಷಣಿಕ ಜಿಲ್ಲೆಯಲ್ಲಿ 82 ಹಾಗೂ ಮಧುಗಿರಿಯಲ್ಲಿ 49 ಸೇರಿ ಒಟ್ಟು 131 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಹೈಟೆಕ್ ಭದ್ರತೆ: ಪರೀಕ್ಷಾ ಪಾರದರ್ಶಕತೆಗಾಗಿ ಎಲ್ಲಾ ಕೊಠಡಿಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಲಾಗಿದ್ದು, ಕೇಂದ್ರ ಕಚೇರಿಯಿಂದಲೇ ವೀಕ್ಷಿಸಲು ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ.

ಮೂಲಸೌಕರ್ಯ: ಕುಡಿಯುವ ನೀರು, ವಿದ್ಯುತ್, ಶೌಚಾಲಯ ಹಾಗೂ ಆಸನಗಳ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಪರಿಶೀಲಿಸಲಾಗಿದೆ.

ನಿಷೇಧಾಜ್ಞೆ ಜಾರಿ: ಪರೀಕ್ಷಾ ಅಕ್ರಮ ತಡೆಯಲು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ 144ನೇ ಕಲಂ ಅನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.



ಕೇಂದ್ರಗಳ ಸಮೀಪವಿರುವ ಜೆರಾಕ್ಸ್ ಮತ್ತು ಸೈಬರ್ ಸೆಂಟರ್‌ಗಳನ್ನು ಕಡ್ಡಾಯವಾಗಿ ಮುಚ್ಚಲು ಆದೇಶಿಸಲಾಗಿದೆ ಎಂದು ಅವರು ತಿಳಿಸಿದರು. ಎಪ್ರಿಲ್ 2ರವರೆಗೆ ಪರೀಕ್ಷೆಗಳು ನಡೆಯಲಿದ್ದು, ಯಾವುದೇ ಲೋಪದೋಷವಿಲ್ಲದಂತೆ ಕ್ರಮ ವಹಿಸಲಾಗಿದೆ ಎಂದು ಭರವಸೆ ನೀಡಿದರು.

## ಪತ್ರಕರ್ತ ಸೀತಾರಾಮ ಶಾಸ್ತ್ರಿ ಇನ್ನಿಲ್ಲ

ಪಾವಗಡ

ತಾಲ್ಲೂಕಿನ ಹಿರಿಯ ಪತ್ರಕರ್ತ, ಮೂರು ದಶಕಗಳ ಕಾಲ ಪತ್ರಿಕಾರಂಗದಲ್ಲಿ ಸಕ್ರಿಯ ಸೇವೆ ಸಲ್ಲಿಸಿದ್ದ ಸೀತಾರಾಮ ಶಾಸ್ತ್ರಿ (60) ಅವರು ಬುಧವಾರ ಬೆಳಿಗ್ಗೆ ಹೃದಯಾಘಾತದಿಂದ ನಿಧನರಾದರು. ಮೃತರ ಆತ್ಮಕ್ಕೆ ಶಾಂತಿ ಕೋರಿ ತಾಲ್ಲೂಕಿನ ಪತ್ರಕರ್ತರ ಸಂಘದ ವತಿಯಿಂದ ಪಟ್ಟಣದ ನಿರೀಕ್ಷಣಾ ಮಂದಿರದಲ್ಲಿ ಸಂತಾಪ ಸೂಚಕ ಸಭೆ ಹಮ್ಮಿಕೊಳ್ಳಲಾಗಿತ್ತು.

ನೇರ, ನಿಷ್ಠುರ ವರದಿಗಾರಿಕೆಗೆ ಹೆಸರಾಗಿದ್ದ ಶಾಸ್ತ್ರಿ: ಸಂತಾಪ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ನಿರ್ದೇಶಕ ದೊಡ್ಡೇರಿ ಕಣಿಮಯ್ಯ, "ಸೀತಾರಾಮ ಶಾಸ್ತ್ರಿ ಅವರು ತಮ್ಮ ನೇರ ಮತ್ತು ನಿಷ್ಠುರ ವರದಿಗಳ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದುವಲ್ಲಿ ಮುಂಚೂಣಿಯಲ್ಲಿದ್ದರು. ಯುವ ಪತ್ರಕರ್ತರಿಗೆ ಸದಾ ಮಾರ್ಗದರ್ಶಕರಾಗಿದ್ದ ಅವರ ನಿಧನ ತಾಲ್ಲೂಕಿನ ಪತ್ರಿಕಾರಂಗಕ್ಕೆ ದೊಡ್ಡ ಹೊಡೆತ ನೀಡಿದೆ," ಎಂದು ವಿಷಾದಿಸಿದರು. ಇದೇ ವೇಳೆ ಪತ್ರಕರ್ತರು ತಮ್ಮ ವೃತ್ತಿ ಬದುಕಿನ ಜೊತೆಗೆ ಆರೋಗ್ಯ ಮತ್ತು ಕುಟುಂಬದ ಕಡೆಗೂ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಅವರು ಕಿವಿಮಾತು ಹೇಳಿದರು.

ಯುವ ಪತ್ರಕರ್ತರಿಗೆ ದಾರಿದೀಪವಾಗಿದ್ದ ಸ್ನೇಹಜೀವಿ: ಸಂಘದ ತಾಲ್ಲೂಕು ಮಾಜಿ ಅಧ್ಯಕ್ಷ ಹನುಮಂತರಾಯಪ್ಪ ಮಾತನಾಡಿ, "ಸೀತಾರಾಮ ಶಾಸ್ತ್ರಿ ಅವರು ಯಾರೊಬ್ಬರಿಗೂ ಭಯಪಡದೆ ವಿಶೇಷ ವರದಿಗಳನ್ನು ಮಾಡುವ ಮೂಲಕ ಖ್ಯಾತಿ ಗಳಿಸಿದ್ದರು. ಅವರೊಂದಿಗೆ ಮೂರು ದಶಕಗಳ ಕಾಲದ ಒಡನಾಟ ಮರೆಯಲಾಗದ್ದು," ಎಂದರು. ಮಾಜಿ ಪ್ರಧಾನ ಕಾರ್ಯದರ್ಶಿ ವಡ್ಡೆ ಶ್ರೀನಿವಾಸಲು ಮಾತನಾಡಿ, "ಅವರು ಕೇವಲ ವರದಿಗಾರರಲ್ಲ, ಪತ್ರಕರ್ತರ ತಪ್ಪುಗಳನ್ನು ಸೂಕ್ಷ್ಮವಾಗಿ ಮನವರಿಕೆ ಮಾಡಿಕೊಡುತ್ತಿದ್ದ ಉತ್ತಮ ಮಾರ್ಗದರ್ಶಕರಾಗಿದ್ದರು. ಜನಸಾಮಾನ್ಯರ ಸಮಸ್ಯೆಗಳಿಗೆ ತಮ್ಮ ವರದಿಗಳ ಮೂಲಕ ಪರಿಹಾರ ದೊರಕಿಸಿಕೊಡುತ್ತಿದ್ದರು," ಎಂದು ಸ್ಮರಿಸಿದರು.

ಸಭೆಯಲ್ಲಿ ಮಧುಗಿರಿ ಲಕ್ಷ್ಮಣ್, ಹಿರಿಯ ಪತ್ರಕರ್ತರಾದ ಪ್ರಗತಿ ರಾಮಾಂಜಿನಪ್ಪ, ಓ. ರಾಮಾಂಜನೇಯಲು, ಹನುಮಂತರಾಯಪ್ಪ, ನಾಗೇಶ್, ಎಸ್. ಮೈಕಲ್ ನಾಡಾರ್, ಶ್ರೀರಾಮುಲು, ನಾಗೇಂದ್ರಪ್ಪ ಎಚ್.ಕೆ., ಸಂಚಲಪ್ಪ ಸೇರಿದಂತೆ ತಾಲ್ಲೂಕಿನ ಹಲವಾರು ಪತ್ರಕರ್ತರು ಉಪಸ್ಥಿತರಿದ್ದು, ಮೃತರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದರು.



## ಎಸ್‌ಎಸ್‌ಎಲ್‌ಸಿ ಪರೀಕ್ಷೆ ಸುಸೂತ್ರ ಆರಂಭ



ಮಾಲೂರು

ವಿದ್ಯಾರ್ಥಿ ಜೀವನದ ಪ್ರಮುಖ ಘಟ್ಟವೆಂದೇ ಬಿಂಬಿಸಲಾಗಿರುವ 2026–27ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಬುಧವಾರದಿಂದ ತಾಲ್ಲೂಕಿನಾದ್ಯಂತ ಬಿಗಿ ಭದ್ರತೆಯಲ್ಲಿ ಆರಂಭಗೊಂಡವು. ಮೊದಲ ದಿನ ನಡೆದ ಪ್ರಥಮ ಭಾಷೆ ಕನ್ನಡ ವಿಷಯದ ಪರೀಕ್ಷೆಯು ಯಾವುದೇ ಗೊಂದಲವಿಲ್ಲದೆ ಶಾಂತಿಯುತವಾಗಿ ಜರುಗಿತು.

3,055 ವಿದ್ಯಾರ್ಥಿಗಳಿಂದ ಪರೀಕ್ಷೆ: ತಾಲ್ಲೂಕಿನ ನಗರ ಹಾಗೂ ಗ್ರಾಮೀಣ ಭಾಗದ ಒಟ್ಟು 8 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಒಟ್ಟು ನೋಂದಣಿಯಾಗಿದ್ದ 3,088 ವಿದ್ಯಾರ್ಥಿಗಳ ಪೈಕಿ 3,055 ವಿದ್ಯಾರ್ಥಿಗಳು ಹಾಜರಾಗಿದ್ದು, 33 ವಿದ್ಯಾರ್ಥಿಗಳು ಗೈರುಹಾಜರಾಗಿದ್ದಾರೆ ಎಂದು ಶಿಕ್ಷಣ ಇಲಾಖೆಯ ಮೂಲಗಳು ತಿಳಿಸಿವೆ. ಬೆಳಿಗ್ಗೆ 10:00 ಗಂಟೆಗೆ ಆರಂಭವಾದ ಪರೀಕ್ಷೆಯು ಮಧ್ಯಾಹ್ನ 1:15ರವರೆಗೆ ನಡೆಯಿತು.

ನಕಲು ತಡೆಗೆ ಹೈಟೆಕ್ ಕಣ್ಗಾವಲು: ಪರೀಕ್ಷಾ ಅಕ್ರಮ ಹಾಗೂ ನಕಲು ತಡೆಯಲು ಈ ಬಾರಿ ತೀವ್ರ ಕಟ್ಟೆಚ್ಚರ ವಹಿಸಲಾಗಿತ್ತು. ಪರೀಕ್ಷಾ ಕೊಠಡಿಗಳಲ್ಲಿ ಸ್ಕ್ರೀನಿಂಗ್ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ವೆಬ್‌ಕಾಸ್ಟಿಂಗ್ ಮೂಲಕ ನಿಗಾ ಇಡಲಾಗಿತ್ತು. ಪರೀಕ್ಷೆ ಆರಂಭವಾಗುವ ಒಂದು ಗಂಟೆ ಮುಂಚಿತವಾಗಿಯೇ ವಿದ್ಯಾರ್ಥಿಗಳನ್ನು ತಪಾಸಣೆ ನಡೆಸಿ ಪರೀಕ್ಷಾ ಕೇಂದ್ರದ ಒಳಗೆ ಬಿಡಲಾಯಿತು. ಕೇಂದ್ರಗಳಲ್ಲಿ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿತ್ತು.

ವಿದ್ಯಾರ್ಥಿಗಳಿಗೆ ಉಚಿತ ಬಸ್ ಪ್ರಯಾಣ: ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪರೀಕ್ಷಾ ಪ್ರವೇಶ ಪತ್ರ ತೋರಿಸಿದ ವಿದ್ಯಾರ್ಥಿಗಳಿಗೆ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿತ್ತು. ಇದರಿಂದಾಗಿ ದೂರದ ಹಳ್ಳಿಗಳಿಂದ ಬರುವ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಯಿತು.

ತಹಶೀಲ್ದಾರ್ ಎಂ.ವಿ. ರೂಪಾ, ತಾಲ್ಲೂಕು ಪಂಚಾಯಿತಿ ಇಒ ವಿ. ಕೃಷ್ಣಪ್ಪ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಪಿ. ಕೆಂಪಯ್ಯ ಅವರ ನೇತೃತ್ವದಲ್ಲಿ ಅಧಿಕಾರಿಗಳ ತಂಡ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಉಸ್ತುವಾರಿ ವಹಿಸಿದ್ದರು.

## ನೂತನ ಸಾರಿಗೆ ವಿಭಾಗ ಆರಂಭ

ಮಧುಗಿರಿ

ಆಡಳಿತಾತ್ಮಕ ಸುಧಾರಣೆ ಮತ್ತು ಸಾರಿಗೆ ಸೌಲಭ್ಯಗಳ ಉತ್ತಮ ನಿರ್ವಹಣೆಗಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ತುಮಕೂರು ವಿಭಾಗವನ್ನು ವಿಭಜಿಸಿ, ಮಧುಗಿರಿಯನ್ನು ನೂತನ ಸಾರಿಗೆ ವಿಭಾಗವನ್ನಾಗಿ ಘೋಷಿಸಿದೆ. ಫೆಬ್ರವರಿ 7ರಂದು ನಡೆದ ಮಂಡಳಿ ಸಭೆಯ ಠರಾವು ಸಂಖ್ಯೆ 10616ರ ಅನ್ವಯ ಈ ಮಹತ್ವದ ನಿರ್ಧಾರಕ್ಕೆ ಅನುಮೋದನೆ ಸಿಕ್ಕಿದೆ.

ನೂತನವಾಗಿ ಅಸ್ತಿತ್ವಕ್ಕೆ ಬರಲಿರುವ ಮಧುಗಿರಿ ವಿಭಾಗವು ಪ್ರಮುಖವಾಗಿ ಮಧುಗಿರಿ, ಶಿರಾ, ಕೊರಟಗೆರೆ ಮತ್ತು ಚಿತ್ರದುರ್ಗ ವಿಭಾಗಕ್ಕೆ ಸೇರಿದ್ದ ಪಾವಗಡ ಘಟಕಗಳನ್ನು ಒಳಗೊಂಡಿರಲಿದೆ. ತುಮಕೂರು ಜಿಲ್ಲೆಯ ವಿಶಾಲ ವ್ಯಾಪ್ತಿಯನ್ನು ಗಮನದಲ್ಲಿಟ್ಟುಕೊಂಡು ಆಡಳಿತಾತ್ಮಕ ಹೊರೆಯನ್ನು ಕಡಿಮೆ ಮಾಡಲು ಈ ಕ್ರಮ ಕೈಗೊಳ್ಳಲಾಗಿದೆ. ಈ ವಿಭಾಗದ ರಚನೆಯಿಂದ ಗಡಿ ತಾಲ್ಲೂಕುಗಳ ಸಾರಿಗೆ ಸಂಪರ್ಕಕ್ಕೆ ಹೆಚ್ಚಿನ ವೇಗ ಸಿಗುವ ನಿರೀಕ್ಷೆಯಿದೆ.

ಹೊಸ ಘಟಕಗಳನ್ನು ಸ್ಥಾಪಿಸುವ ಯೋಜನೆಯನ್ನು ನಿಗಮವು ಹೊಂದಿದೆ.

## ಗ್ಯಾಸ್ ದರ ಏರಿಕೆ ಬಿಸಿ; ಆಟೋ ಚಾಲಕರಿಂದ ಬಂಕ್ ಮುತ್ತಿಗೆ!



ಬಂಗಾರಪೇಟೆ

ನಗರದ ಗೋ ಗ್ಯಾಸ್ ಬಂಕ್‌ನಲ್ಲಿ ಗ್ಯಾಸ್ ದರ ಪ್ರಕಟಣೆಯಲ್ಲಿ ಉಂಟಾದ ಗೊಂದಲ ಹಾಗೂ ಏಕಾಏಕಿ ಬೆಲೆ ಏರಿಕೆಯನ್ನು ಖಂಡಿಸಿ ಆಟೋ ಚಾಲಕರು ಮಂಗಳವಾರ ಬಂಕ್ ಮುಂಭಾಗದಲ್ಲಿ ಭಾರಿ ಪ್ರತಿಭಟನೆ ನಡೆಸಿದರು. ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಪರಿಸ್ಥಿತಿ ತಿಳಿಗೊಂಡಿತು.

ಯುದ್ಧದ ನೆಪ; ಗಗನಕ್ಕೇರಿದ ಗ್ಯಾಸ್ ದರ!

ಆಟೋ ಚಾಲಕರ ಆರೋಪದಂತೆ, ಈ ಹಿಂದೆ 55 ರೂ. ಇದ್ದ ಪ್ರತಿ ಲೀಟರ್ ಗ್ಯಾಸ್ ದರವು ಯುದ್ಧದ ಆರಂಭದ ನಂತರ 65 ರೂ.ಗೆ ಏರಿಕೆಯಾಗಿತ್ತು. ಆದರೆ ಈಗ ಯಾವುದೇ ಮುನ್ಸೂಚನೆ ನೀಡದೆ ಬಂಕ್ ಮಾಲೀಕರು ದರವನ್ನು ಅಕ್ಷರಶಃ 80 ರೂ.ಗೆ ಏರಿಸಿದ್ದಾರೆ. ನಿಗದಿತ ದರವನ್ನು ಫಲಕದಲ್ಲಿ ಸ್ಪಷ್ಟವಾಗಿ ಪ್ರಕಟಿಸದೆ ಹಣ ವಸೂಲಿ ಮಾಡುತ್ತಿರುವುದು ಚಾಲಕರ ಅಸಮಾಧಾನಕ್ಕೆ ಕಾರಣವಾಯಿತು. ನ್ಯಾಯಕ್ಕಾಗಿ ಆಗ್ರಹಿಸಿದ ಚಾಲಕರು ಬಂಕ್ ಎದುರು ಜಮಾಯಿಸಿ ಘೋಷಣೆಗಳನ್ನು ಕೂಗಿದರು.

ಅಧಿಕಾರಿಗಳ ಭೇಟಿ ಮತ್ತು ದರ ಪರಿಶೀಲನೆ: ಪ್ರತಿಭಟನೆಯ ವಿಷಯ ತಿಳಿದ ತಕ್ಷಣ ತಹಶೀಲ್ದಾರ್ ಸುಜಾತ, ಪೌರಾಯುಕ್ತ ಸತ್ಯನಾರಾಯಣ, ಆಹಾರ ನಿರೀಕ್ಷಕ ಚೌಡಪ್ಪ ಹಾಗೂ ನೋಡಲ್ ಅಧಿಕಾರಿ ಕಿಶೋರ್ ವರ್ಮ ಸ್ಥಳಕ್ಕೆ ಭೇಟಿ ನೀಡಿದರು. "ಅಧಿಕೃತವಾಗಿ ದರ ಪ್ರಕಟಿಸುವವರೆಗೂ ಗ್ಯಾಸ್ ವಿತರಣೆ ಮಾಡಬಾರದು" ಎಂದು ಅಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು. ಇದರ ಬೆನ್ನಲ್ಲೇ ಬಂಕ್ ಮಾಲೀಕರು ಗ್ಯಾಸ್ ಖರೀದಿ ಮತ್ತು ಸಾರಿಗೆ ವೆಚ್ಚ ಸೇರಿ ಒಂದು ಲೀಟರ್ ದರ 79 ರೂ. 95 ಪೈಸೆ ಆಗುತ್ತದೆ ಎಂದು ಬಹಿರಂಗವಾಗಿ ಪ್ರಕಟಿಸಿದರು.

ದರ ವ್ಯತ್ಯಾಸದ ಬಗ್ಗೆ ಅನುಮಾನ: ಬಂಕ್ ಮಾಲೀಕರು ನೀಡಿದ ಸಮರ್ಥನೆಯ ಬಗ್ಗೆ ಚಾಲಕರಲ್ಲಿ ಅನುಮಾನಗಳು ಮೂಡಿವೆ. ಪಕ್ಕದ 'ಟೋಟಲ್ ಗ್ಯಾಸ್' ಬಂಕ್‌ನಲ್ಲಿ ಭಾನುವಾರ 70 ರೂ. ಇದ್ದ ದರವನ್ನು ಚಾಲಕರ ಪ್ರತಿಭಟನೆಯ ನಂತರ 65 ರೂ.ಗೆ ಇಳಿಸಲಾಗಿದೆ. ಆದರೆ ಗೋ ಗ್ಯಾಸ್ ಬಂಕ್‌ನಲ್ಲಿ ಮಾತ್ರ 80 ರೂ.ಗೆ ಸಮೀಪವಿರುವ ದರವನ್ನು ನಿಗದಿಪಡಿಸಿರುವುದು ಸರಿಯೇ ಎಂಬ ಪ್ರಶ್ನೆ ಎದ್ದಿದೆ. ಸದ್ಯಕ್ಕೆ ದರ ಪ್ರಕಟವಾದ ನಂತರ ಆಟೋ ಚಾಲಕರು ಶಾಂತರಾಗಿ ಗ್ಯಾಸ್ ತುಂಬಿಸಿಕೊಳ್ಳಲು ಸಾಲಿನಲ್ಲಿ ನಿಂತಿರುವುದು ಕಂಡುಬಂದಿತು.

## ಯಶಸ್ವಿಯಾಗಿ ಜರುಗಿದ ಸ್ವಯಂ ಪ್ರೇರಿತ ರಕ್ತದಾನ ಶಿಬಿರ, ಅನ್ನ ದಾಸೋಹ ಕಾರ್ಯಕ್ರಮ

ತಿಪಟೂರು

ಕನ್ನಡ ಚಿತ್ರರಂಗದ ಮಿನುಗುತಾರೆ, ಸಾಮಾಜಿಕ ಸೇವೆಗಳ ಹರಿಕಾರ ಕರ್ನಾಟಕ ರತ್ನ ಡಾ. ಪುನೀತ್ ರಾಜ್‌ಕುಮಾರ್ ಅವರ 51ನೇ ಜನ್ಮದಿನದ ಅಂಗವಾಗಿ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಅಭಿಮಾನಿ ಬಳಗ ಹಾಗೂ ಶೇಖರ್ ರಕ್ತನಿಧಿ ಕೇಂದ್ರದ ಸಹಯೋಗದೊಂದಿಗೆ ಸ್ವಯಂಪ್ರೇರಿತ ರಕ್ತದಾನ ಶಿಬಿರ ಮತ್ತು ಅನ್ನದಾಸೋಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಸಮಾಜಕ್ಕೆ ಮಾದರಿಯಾದ ಅಪ್ಪು ಸೇವೆ: ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಕುಮಾರ್ ಆಸ್ಪತ್ರೆಯ ಡಾ. ಜಿ.ಎಸ್. ಶ್ರೀಧರ್, "ಅಪ್ಪು ಅವರು ತೆರೆಯ ಮೇಲೆ ಪವರ್ ಸ್ಟಾರ್ ಆಗಿ ಮಿಂಚಿದ್ದಷ್ಟೇ ಅಲ್ಲದೆ, ನಿಜ ಜೀವನದಲ್ಲಿ ಅವರು ಮಾಡಿದ ಸಾಮಾಜಿಕ ಕಳಕಳಿಯುಳ್ಳ ಸೇವೆ ಇಡೀ ರಾಜ್ಯಕ್ಕೆ ಮಾದರಿಯಾಗಿದೆ. ಸಾಮಾನ್ಯವಾಗಿ ನಟರ ಹುಟ್ಟುಹಬ್ಬ ಎಂದರೆ ಹಾಡು–ಕುಣಿತಕ್ಕೆ ಸೀಮಿತವಾಗಿರುತ್ತದೆ. ಆದರೆ ಅಪ್ಪು ಅವರ ಅಭಿಮಾನಿಗಳು ರಕ್ತದಾನ, ಅನ್ನದಾನದಂತಹ ಸಮಾಜಮುಖಿ ಕಾರ್ಯಗಳ ಮೂಲಕ ಸಾರ್ಥಕತೆ ಮೆರೆಯುತ್ತಿರುವುದು ಸಂತೋಷದ ವಿಷಯ," ಎಂದು ಶ್ಲಾಘಿಸಿದರು.




ಯುವ ಸಮೂಹಕ್ಕೆ ಮಾರ್ಗದರ್ಶಕ: ಶೇಖರ್ ಆಸ್ಪತ್ರೆ ಮತ್ತು ರಕ್ತನಿಧಿ ಕೇಂದ್ರದ ಡಾ. ಸೋಮಶೇಖರ್ ಮಾತನಾಡಿ, "ಹಿರಿಯರನ್ನು ಗೌರವಿಸುವ ಪುನೀತ್ ಅವರ ಗುಣ ಇಂದಿನ ಯುವ ಪೀಳಿಗೆಗೆ ದೊಡ್ಡ ಮಾರ್ಗದರ್ಶನವಾಗಿದೆ. ಅವರ ಅಭಿಮಾನಿಗಳು ಅದೇ ಹಾದಿಯಲ್ಲಿ ಸಾಗಿ ರಾಜ್ಯಕ್ಕೆ ಮಾದರಿಯಾಗಿ ಕೆಲಸ ಮಾಡುತ್ತಿರುವುದು ಶ್ಲಾಘನೀಯ," ಎಂದರು.

ಗುಪ್ತದಾನದ ಮಹಾಮಾತ್ಮಕೆ ಅಪ್ಪು: ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಶಶಿಕುಮಾರ್ ಮಾತನಾಡಿ, "ಕಷ್ಟ ಎಂದು ಬಂದವರನ್ನು ಬರಿಗೈನಲ್ಲಿ ಕಳುಹಿಸಿದ ಇತಿಹಾಸವೇ ಅಪ್ಪು ಅವರಿಗಿಲ್ಲ. ತಾವು ಮಾಡಿದ ದಾನದ ಬಗ್ಗೆ ಯಾರಿಗೂ ತಿಳಿಸಬೇಡಿ ಎನ್ನುವ ಅವರ ಉದಾತ್ತ ವ್ಯಕ್ತಿತ್ವವೇ ಅವರಿಗೆ ಸಾಕ್ಷಿ. ಅವರು ಹಸಿದವರಿಗೆ ಅನ್ನ ಹಾಕಿದ ಮಹಾನುಭಾವ," ಎಂದು ಸ್ಮರಿಸಿದರು.

35ಕ್ಕೂ ಹೆಚ್ಚು ಮಂದಿಯಿಂದ ರಕ್ತದಾನ: ಶಿಬಿರದಲ್ಲಿ ಸುಮಾರು 35ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಿದರು. ಕಾರ್ಯಕ್ರಮದ ಅಂಗವಾಗಿ ಸಾವಿರಾರು ಜನರಿಗೆ ಅನ್ನದಾಸೋಹ ವ್ಯವಸ್ಥೆ ಕಲ್ಪಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಪುನೀತ್ ರಾಜ್‌ಕುಮಾರ್ ಅಭಿಮಾನಿ ಬಳಗದ ಮೋಹನ್, ದರ್ಶನ್, ಹರ್ಷವರ್ಧನ್, ಶ್ರೀಧರ್ ಸೇರಿದಂತೆ ಬಳಗದ ಪದಾಧಿಕಾರಿಗಳು, ಕಾಲೇಜು ಸಿಬ್ಬಂದಿ ಹಾಗೂ ನೂರಾರು ಅಭಿಮಾನಿಗಳು ಉಪಸ್ಥಿತರಿದ್ದರು.

## ತಂತ್ರಜ್ಞಾನ ಮತ್ತು ರೈತ ಅನುಭವ ಜೊತೆಯಾದಾಗ ಕೃಷಿ ಲಾಭದಾಯಕ: ಗಣ್ಯರ ಅಭಿಮತ



ವಿಜಯಪುರ

ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಅಡಿಯಲ್ಲಿ, ಬೆಂಗಳೂರು ತೋಟಗಾರಿಕಾ ಮಹಾವಿದ್ಯಾಲಯದ ಅಂತಿಮ ವರ್ಷದ ಬಿಎಸ್ಸಿ ವಿದ್ಯಾರ್ಥಿಗಳು ಹಮ್ಮಿಕೊಂಡಿರುವ 'ಗ್ರಾಮೀಣ ತೋಟಗಾರಿಕೆ ಕಾರ್ಯಾನುಭವ' ಕಾರ್ಯಕ್ರಮಕ್ಕೆ ಬಿಜ್ಜವಾರ ಗ್ರಾಮದಲ್ಲಿ ಚಾಲನೆ ನೀಡಲಾಯಿತು.

ಬಿಜ್ಜವಾರ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ರಾಮಸ್ವಾಮಿ ಅವರು ಶಿಬಿರವನ್ನು ಉದ್ಘಾಟಿಸಿ ಮಾತನಾಡಿ, "ರೈತರು ತಮ್ಮ ದಶಕಗಳ ಅನುಭವದ ಮೇಲೆ ಕೃಷಿ ಮಾಡುತ್ತಿದ್ದಾರೆ. ಕೆಲವೊಮ್ಮೆ ತಂತ್ರಜ್ಞಾನಕ್ಕಿಂತ ರೈತರ ಅನುಭವವೇ ಹೆಚ್ಚು ಪರಿಣಾಮಕಾರಿ. ವಿದ್ಯಾರ್ಥಿಗಳು ರೈತರೊಂದಿಗೆ ಸಮಾಲೋಚನೆ ನಡೆಸಿ, ಅವರ ಅನುಭವಗಳನ್ನು ಪಡೆದುಕೊಳ್ಳುವ ಜೊತೆಗೆ ಆಧುನಿಕ ತಂತ್ರಜ್ಞಾನದ ಬಗ್ಗೆ ಅವರಿಗೆ ಮನವರಿಕೆ ಮಾಡಿಕೊಡಬೇಕು," ಎಂದು ಕಿವಿಮಾತು ಹೇಳಿದರು.

ಸಾವಯವ ಪದ್ಧತಿ ಮತ್ತು ಮಣ್ಣಿನ ಗುಣಮಟ್ಟಕ್ಕೆ ಆದ್ಯತೆ: ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ರಾಮಚಂದ್ರ ನಾಯಕ್ ಮಾತನಾಡಿ, "ವಿದ್ಯಾರ್ಥಿಗಳು ಈ ಅವಕಾಶವನ್ನು ಬಳಸಿಕೊಂಡು ಕಲಿಕೆಗೆ ಆದ್ಯತೆ ನೀಡಬೇಕು. ಮಣ್ಣಿನ ಗುಣಮಟ್ಟ ಕಾಪಾಡುವುದು, ರಾಸಾಯನಿಕಗಳ ಬಳಕೆ ಕಡಿಮೆ ಮಾಡಿ ಸಾವಯವ ಪದ್ಧತಿಯಲ್ಲಿ ಬೆಳೆ ಬೆಳೆಯುವುದು ಹಾಗೂ ಮಾರುಕಟ್ಟೆ ವ್ಯವಸ್ಥೆಯ ಬಗ್ಗೆ ರೈತರಿಗೆ ಮಾಹಿತಿ ನೀಡಬೇಕು. ತೋಟಗಳಲ್ಲಿನ ಕೀಟ ಮತ್ತು ರೋಗಗಳನ್ನು ಗುರುತಿಸಿ ನಿಯಂತ್ರಿಸುವ ಕ್ರಮಗಳ ಬಗ್ಗೆ ರೈತರಿಗೆ ವಿವರಿಸಬೇಕು," ಎಂದು ತಿಳಿಸಿದರು.

ಗ್ರಾಮದ ನಕ್ಷೆ ಮತ್ತು ಆಧುನಿಕ ತಂತ್ರಜ್ಞಾನ ಪರಿಚಯ: ಶಿಬಿರದ ಅಂಗವಾಗಿ ವಿದ್ಯಾರ್ಥಿಗಳು ಗ್ರಾಮದ ನಕ್ಷೆಯನ್ನು ತಯಾರಿಸಿ, ರೈತರಿಗೆ ಆಧುನಿಕ ತೋಟಗಾರಿಕೆ ಉಪಕರಣಗಳ ಬಳಕೆ, ಉತ್ತಮ ಗುಣಮಟ್ಟದ ಸಸಿ ಮತ್ತು ಬೀಜಗಳ ಆಯ್ಕೆ, ನೀರಿನ ಸಮರ್ಪಕ ನಿರ್ವಹಣೆ ಹಾಗೂ ಜೈವಿಕ ಕೃಷಿ ವಿಧಾನಗಳ ಕುರಿತು ಪ್ರಾತ್ಯಕ್ಷಿಕೆ ಮೂಲಕ ವಿವರಿಸಿದರು. ಸಮಗ್ರ ಕೃಷಿ ಪದ್ಧತಿಯಿಂದ ಆಗುವ ಲಾಭಗಳ ಬಗ್ಗೆಯೂ ರೈತರಲ್ಲಿ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಡಿವೈಎಸ್ಪಿ ರಾಮಚಂದ್ರಪ್ಪ, ವೆಂಕಟಗಿರಿಕೋಟೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ವಿ. ರಾಮಚಂದ್ರಪ್ಪ ಹಾಗೂ ಅಂತಿಮ ವರ್ಷದ ಬಿ.ಎಸ್ಸಿ ತೋಟಗಾರಿಕೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## 'ಗ್ಯಾಸ್ ಸಿಲಿಂಡರ್: ವದಂತಿಗೆ ಕಿವಿಗೊಡಬೇಡಿ'

ತುಮಕೂರು

ಗೃಹ ಬಳಕೆ ಅಡುಗೆ ಅನಿಲ ಕೊರತೆಯಿದೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವದಂತಿಗಳು ಸತ್ಯಕ್ಕೆ ದೂರವಾಗಿದ್ದು, ಸಾರ್ವಜನಿಕರು ಇಂತಹ ಸುಳ್ಳು ಸುದ್ದಿಗಳಿಗೆ ಕಿವಿಗೊಟ್ಟು ಆತಂಕಕ್ಕೊಳಗಾಗಬಾರದು ಎಂದು ತುಮಕೂರು ತಾಲ್ಲೂಕು ತಹಶೀಲ್ದಾರ್ ಮನವಿ ಮಾಡಿದ್ದಾರೆ.

ದೇಶಾದ್ಯಂತ ಅನಿಲ ಉತ್ಪಾದನೆ ಮತ್ತು ಬಾಟಲಿಂಗ್ ಪ್ರಕ್ರಿಯೆ ಚುರುಕಾಗಿ ನಡೆಯುತ್ತಿದ್ದು, ದೇಶೀಯ ಬಳಕೆಗೆ ಬೇಕಾದಷ್ಟು ಸಿಲಿಂಡರ್‌ಗಳ ದಾಸ್ತಾನು ಲಭ್ಯವಿದೆ. ಹೀಗಾಗಿ ಗ್ರಾಹಕರು ಗಾಬರಿಗೊಂಡು ಅನಿಗತ್ಯವಾಗಿ ಹೆಚ್ಚುವರಿ ಸಿಲಿಂಡರ್‌ಗಳನ್ನು ದಾಸ್ತಾನು ಮಾಡಿಕೊಳ್ಳಬಾರದು ಎಂದು ಅವರು ತಿಳಿಸಿದ್ದಾರೆ.



ಬುಕ್ಕಿಂಗ್‌ಗಾಗಿ 6 ಪರ್ಯಾಯ ಮಾರ್ಗಗಳು: IVRS ಮತ್ತು ಮಿಸ್ಡ್ ಕಾಲ್, WhatsApp ಮೂಲಕ ಬುಕ್ಕಿಂಗ್, ತೈಲ ಕಂಪನಿಗಳ ಅಧಿಕೃತ ಮೊಬೈಲ್ ಆಪ್‌ಗಳು, OMC ಪೋರ್ಟಲ್. ಪಾವತಿ ಅಪ್ಲಿಕೇಶನ್‌ಗಳಾದ Paytm ಮತ್ತು PhonePe, ಇಂಟರ್–ಬುಕ್ಕಿಂಗ್ ಅವಧಿ ಕಡ್ಡಾಯ

ದಟ್ಟಣೆ ತಪ್ಪಿಸಲು ಗ್ರಾಹಕರು ಕೇವಲ ಅಥವಾ ಮಿಸ್ಡ್ ಕಾಲ್ ವ್ಯವಸ್ಥೆಯನ್ನು ಅವಲಂಬಿಸದೆ, ತೈಲ ಕಂಪನಿಗಳು ಕಲ್ಪಿಸಿರುವ ಕೆಳಗಿನ 6 ವಿಧಾನಗಳನ್ನು ಬಳಸಬಹುದಾಗಿದೆ.

ಸರ್ಕಾರದ ನಿಯಮದಂತೆ ಪ್ರತಿ ಗ್ರಾಹಕರಿಗೆ ಸಿಲಿಂಡರ್ ಪಡೆಯಲು ಇಂಟರ್–ಬುಕ್ಕಿಂಗ್ ಅವಧಿಯನ್ನು ನಿಗದಿಪಡಿಸಲಾಗಿದೆ.

ನಗರ ಪ್ರದೇಶ: 25 ದಿನಗಳಿಗೊಮ್ಮೆ.

ಗ್ರಾಮಾಂತರ ಪ್ರದೇಶ: 45 ದಿನಗಳಿಗೊಮ್ಮೆ.

ಸಾರ್ವಜನಿಕರಿಗೆ ಯಾವುದೇ ಸಮಸ್ಯೆ ಅಥವಾ ದೂರುಗಳಿದ್ದಲ್ಲಿ ಸಹಾಯವಾಣಿ ಸಂಖ್ಯೆ: 8553378925ಕ್ಕೆ ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದು ತಹಸೀಲ್ದಾರ್ ತಿಳಿಸಿದ್ದಾರೆ.

## ಮೀಸಲಾತಿಗಾಗಿ ವಿಶ್ವಕರ್ಮರ 'ಬೀದರ್ ಟು ಬೆಂಗಳೂರು' ಪಾದಯಾತ್ರೆ: ಸೆಪ್ಟೆಂಬರ್‌ನಲ್ಲಿ ಶಕ್ತಿ ಪ್ರದರ್ಶನ

ರಾಮನಗರ

ವಿಶ್ವಕರ್ಮ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕು ಎಂಬ ಪ್ರಬಲ ಬೇಡಿಕೆ ಸೇರಿದಂತೆ ವಿವಿಧ ಹಕ್ಕೊತ್ತಾಯಗಳ ಈಡೇರಿಕೆಗಾಗಿ ಸೆಪ್ಟೆಂಬರ್ ತಿಂಗಳಲ್ಲಿ ಬೀದರ್‌ನಿಂದ ಬೆಂಗಳೂರಿನವರೆಗೆ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗುವುದು ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ಅಧ್ಯಕ್ಷ ಹಾಗೂ ಮಾಜಿ ಎಂಎಲ್‌ಸಿ ಕೆ.ಪಿ. ನಂಜುಂಡಿ ಘೋಷಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಾಜಕ್ಕೆ ಆಗುತ್ತಿರುವ ರಾಜಕೀಯ ಮತ್ತು ಸಾಮಾಜಿಕ ಅನ್ಯಾಯದ ವಿರುದ್ಧ ದನಿ ಎತ್ತಲು 40 ದಿನಗಳ ಕಾಲ ಸುಮಾರು 750 ಕಿ.ಮೀ ಪಾದಯಾತ್ರೆ ನಡೆಸಲಾಗುವುದು ಎಂದು ತಿಳಿಸಿದರು.



ಪರಿಶಿಷ್ಟ ಪಂಗಡದ ಮೀಸಲಾತಿಗೆ ಆಗ್ರಹ: "ಪ್ರಸ್ತುತ ಪ್ರವರ್ಗ 2(ಎ) ಮೀಸಲಾತಿಯಲ್ಲಿರುವ 102 ಜಾತಿಗಳ ಪೈಕಿ ಪ್ರಬಲ ಜಾತಿಗಳ ಪೈಪೋಟಿ ಎದುರಿಸಿ ವಿಶ್ವಕರ್ಮರು ಸೌಲಭ್ಯ ಪಡೆಯಲು ಸಾಧ್ಯವಾಗುತ್ತಿಲ್ಲ. ನಮ್ಮ ಸಮಾಜದವರು ತಾಪಂ, ಜಿಪಂ ಸದಸ್ಯರಾಗಿಯೂ ಆಯ್ಕೆಯಾಗುತ್ತಿಲ್ಲ. ಆದ್ದರಿಂದ ಮಕ್ಕಳ ಭವಿಷ್ಯಕ್ಕಾಗಿ ಸಮಾಜವನ್ನು ಎಸ್‌ಟಿ ಪಟ್ಟಿಗೆ ಸೇರಿಸುವುದು ಅನಿವಾರ್ಯವಾಗಿದೆ. ಎಸ್‌ಟಿಗೆ ಸೇರುವುದರಿಂದ ನಮ್ಮ ಆಚಾರ–ವಿಚಾರ ಬದಲಾಗುವುದಿಲ್ಲ, ಈ ಬಗ್ಗೆ ಅಪಪ್ರಚಾರ ಬೇಡ," ಎಂದು ಅವರು ಸ್ಪಷ್ಟಪಡಿಸಿದರು.

ಜಾತಿ ಗಣತಿ ವೇಳೆ ಎಚ್ಚರವಿರಲಿ: ಜಾತಿ ಸಮೀಕ್ಷೆಯ ಕುರಿತು ಎಚ್ಚರಿಸಿದ ನಂಜುಂಡಿ ಅವರು, "ಹಿಂದಿನ ಗಣತಿಯಲ್ಲಿ 35 ಲಕ್ಷವಿದ್ದ ನಮ್ಮ ಜನಸಂಖ್ಯೆಯನ್ನು ಕೇವಲ 8 ಲಕ್ಷಕ್ಕೆ ಇಳಿಸಲಾಗಿದೆ. ರಾಜಕೀಯ ಪ್ರಜ್ಞೆ ಇಲ್ಲದಿದ್ದರೆ ಸಮಾಜ ನಿರ್ಲಕ್ಷ್ಯಕ್ಕೆ ಒಳಗಾಗುತ್ತದೆ. ಆದ್ದರಿಂದ ಜಾತಿ ಗಣತಿ ಸಂದರ್ಭದಲ್ಲಿ ಉಪಜಾತಿಗಳ ಹೆಸರನ್ನು ಬರೆಯುವ ಬದಲು ಕೇವಲ 'ವಿಶ್ವಕರ್ಮ' ಎಂದೇ ನಮೂದಿಸಬೇಕು. ವಿಶ್ವ ಬ್ರಾಹ್ಮಣ ಎಂಬುದು ನಮ್ಮ ಉಪಜಾತಿಯೇ ಹೊರತು, ನಾವ್ಯಾರೂ ಬ್ರಾಹ್ಮಣರಲ್ಲ. ನಾವೆಲ್ಲರೂ ವಿಶ್ವಕರ್ಮರು ಎಂಬ ಭರವಸೆಯಲ್ಲಿ ಒಗ್ಗಟ್ಟಾಗಬೇಕು," ಎಂದು ಕರೆ ನೀಡಿದರು.

ಕಾಯಕ ಸಮಾಜಗಳ ಒಕ್ಕೂಟಕ್ಕೆ ಕರೆ: ಐದು ಪ್ರಮುಖ ಕುಲಕಸುಬುಗಳನ್ನು ನಂಬಿರುವ ವಿಶ್ವಕರ್ಮರು ಭ್ರಮಾಲೋಕದಿಂದ ಹೊರಬಂದು ಸಂಘಟಿತರಾಗಬೇಕು. ಯಾವ ಸಮಾಜ ರಾಜಕೀಯವಾಗಿ ಬಲಿಷ್ಠವಾಗಿರುವುದಿಲ್ಲವೋ ಆ ಸಮಾಜದ ಜನಸಂಖ್ಯೆಯೂ ದಾಖಲೆಗಳಲ್ಲಿ ಕುಸಿಯುತ್ತದೆ. ಸರ್ಕಾರಗಳು ವೃತ್ತಿ ಆಧಾರಿತ ಸಮಾಜಗಳನ್ನು ನಿರ್ಲಕ್ಷಿಸುತ್ತಿವೆ. ಹೀಗಾಗಿ ಹೋರಾಟದ ಮೂಲಕವೇ ನಾವು ಅಧಿಕಾರ ಪಡೆಯಬೇಕಿದೆ ಎಂದು ಅವರು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ವಿಶ್ವಕರ್ಮ ಸಮಾಜದ ರಾಜ್ಯ ಉಪಾಧ್ಯಕ್ಷ ಬಸವರಾಜು, ಮುಖಂಡರಾದ ಕುಮಾರ್, ಜನಾರ್ಧನ್, ಲಿಂಗರಾಜು, ಸಿದ್ದರಾಜು, ರಾಮಾಚಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕೇಂದ್ರ ರೈಲ್ವೆ ಸಚಿವರು ಅಶ್ವಿನಿ ವೈಷ್ಣವ್ ಯೋಜನೆಗಳನ್ನು ಭಾರತೀಯ ರೈಲ್ವೆಯ ಸಾಧನೆಗಳು ಹಾಗೂ ಭವಿಷ್ಯದ ಯೋಜನೆಗಳನ್ನು ವಿವರಿಸಿದ್ದಾರೆ.

# ರೈಲ್ವೆ ಬಜೆಟ್: ರಾಜ್ಯಕ್ಕೆ ಬಂಪರ್ ಹಂಚಿಕೆ; ಬೆಂಗಳೂರಿಗರಿಗೆ ಸಿಗಲಿದೆ ಬುಲೆಟ್ ರೈಲು ವೇಗ!

ನವದೆಹಲಿ

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಕರ್ನಾಟಕಕ್ಕೆ ಸಂಬಂಧಿಸಿದ ಹಲವಾರು ಮಹತ್ವದ ಅಭಿವೃದ್ಧಿ ಯೋಜನೆಗಳನ್ನು ಘೋಷಿಸಿದ್ದಾರೆ.

ರಾಜ್ಯದ ಮೂಲಸೌಕರ್ಯ ಮತ್ತು ಸಂಪರ್ಕ ವ್ಯವಸ್ಥೆಯನ್ನು ಬಲಪಡಿಸುವ ದಿಸೆಯಲ್ಲಿ ಈ ಕ್ರಮಗಳು ಪ್ರಮುಖವಾಗಿವೆ.



ಕರ್ನಾಟಕಕ್ಕೆ ಪ್ರಮುಖ ಲಾಭಗಳು: 2026–27 ಹಣಕಾಸು ವರ್ಷದಲ್ಲಿ ಕರ್ನಾಟಕಕ್ಕೆ ರೈಲ್ವೆ ಅಭಿವೃದ್ಧಿಗಾಗಿ ದಾಖಲೆ ಮಟ್ಟದ ಬಜೆಟ್ ಹಂಚಿಕೆ ಮಾಡಲಾಗಿದೆ. ಹಿಂದಿನ ವರ್ಷಗಳಿಗಿಂತ ಹೆಚ್ಚಿನ ನಿಧಿ ಒದಗಿಸಿರುವುದು ಯೋಜನೆಗಳ ವೇಗ ಹೆಚ್ಚಿಸಲು ನೆರವಾಗಲಿದೆ.

ರಾಜ್ಯದಲ್ಲಿ ಪ್ರಯಾಣ ಸಮಯವನ್ನು ಕಡಿಮೆ ಮಾಡಲು ಏಳು ಹೊಸ ಬುಲೆಟ್ ರೈಲು ಮಾರ್ಗಗಳ ದೃಷ್ಟಿ ಮಂಡಿಸಲಾಗಿದೆ. ಹೈದರಾಬಾದ್–ಬೆಂಗಳೂರು ನಡುವಿನ ಪ್ರಯಾಣ ಸಮಯವನ್ನು ಕೇವಲ 2.5 ಗಂಟೆಗಳಿಗಷ್ಟೇ ಇಳಿಸುವ ಉದ್ದೇಶವಿದ್ದು, ಬೆಂಗಳೂರು–ಚೆನ್ನೈ ನಡುವಿನ ಪ್ರಯಾಣ ಸಮಯವನ್ನು ಕೇವಲ 73 ನಿಮಿಷಗಳಿಗೆ ಇಳಿಸುವ ಯೋಜನೆಯೂ ಇದೆ.

ರಾಷ್ಟ್ರ ಮಟ್ಟದ ಪ್ರಮುಖ ಸಾಧನೆಗಳು: ರೈಲ್ವೆ ಬಜೆಟ್ ಅನ್ನು ಸಾಮಾನ್ಯ ಬಜೆಟ್ ಜೊತೆ ವಿಲೀನಗೊಳಿಸಿರುವುದರಿಂದ ನಿರಂತರ ಮತ್ತು ಸಮರ್ಪಕ ನಿಧಿ ಲಭ್ಯವಾಗುತ್ತಿದೆ. 2026–27ರಲ್ಲಿ ರೂ. 78,000 ಕೋಟಿಗಳ ದಾಖಲೆ ಹಂಚಿಕೆ ಮಾಡಲಾಗಿದೆ. ಇದರಿಂದ ಯೋಜನೆಗಳ ಅನುಷ್ಠಾನ ಮತ್ತು ಪಾರದರ್ಶಕತೆ ಹೆಚ್ಚಾಗಿದೆ.

ಭದ್ರತೆಯ ದೃಷ್ಟಿಯಿಂದ 'ಕವಚ್' ಸ್ವಯಂಚಾಲಿತ ರಕ್ಷಣೆ ವ್ಯವಸ್ಥೆಯನ್ನು ವೇಗವಾಗಿ ವಿಸ್ತರಿಸಲಾಗುತ್ತಿದ್ದು, ರೈಲು ಅಪಘಾತಗಳು ಸುಮಾರು 90% ಇಳಿಕೆಯಾಗಿದೆ. ಈಗಾಗಲೇ 20,000 ಕಿಮೀ ಮಾರ್ಗ ಹಾಗೂ 8,000 ಎಂಜಿನ್‌ಗಳಲ್ಲಿ ಈ ವ್ಯವಸ್ಥೆ ಜಾರಿಯಲ್ಲಿದೆ.

ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಕಳೆದ ದಶಕದಲ್ಲಿ 35,000 ಕಿಮೀ ಹೊಸ ಹಳಿಗಳು ನಿರ್ಮಾಣಗೊಂಡಿದ್ದು, 47,000 ಕಿಮೀ ವಿದ್ಯುತೀಕರಣ ಮಾಡಲಾಗಿದೆ. ರೈಲ್ವೆ ಜಾಲವು 99% ಕ್ಕಿಂತ ಹೆಚ್ಚು ವಿದ್ಯುತೀಕರಣಗೊಂಡಿದೆ. ಜೊತೆಗೆ 14,000 ಫ್ಲೈಓವರ್‌ಗಳು ಮತ್ತು ಅಂಡರ್‌ಪಾಸ್‌ಗಳು ನಿರ್ಮಾಣಗೊಂಡಿವೆ.

ಹೊಸ ರೈಲು ಸೇವೆಗಳು: ಅಮೃತ ಭಾರತ ರೈಲುಗಳು ಕಡಿಮೆ ಆದಾಯದ ಪ್ರಯಾಣಿಕರಿಗೆ ಅನುಕೂಲವಾಗಿದ್ದು, ಈಗಾಗಲೇ 60 ಸೇವೆಗಳು ಚಾಲನೆಯಲ್ಲಿವೆ ಮತ್ತು ಇನ್ನೂ 133 ರೈಲುಗಳು ನಿರ್ಮಾಣ ಹಂತದಲ್ಲಿವೆ. ವಂದೇ ಭಾರತ ರೈಲುಗಳ 162 ಸೇವೆಗಳು ಕಾರ್ಯನಿರ್ವಹಿಸುತ್ತಿದ್ದು, ಸ್ಲೀಪರ್ ರೈಲುಗಳೂ ಆರಂಭಗೊಂಡಿವೆ.

ಹಬ್ಬಗಳ ಸಂದರ್ಭದಲ್ಲಿ ಹೆಚ್ಚುವರಿ ಪ್ರಯಾಣಿಕರ ಬೇಡಿಕೆಯನ್ನು ಪೂರೈಸಲು ಇತ್ತೀಚೆಗೆ 7,100 ಕ್ಕೂ ಹೆಚ್ಚು ವಿಶೇಷ ರೈಲುಗಳನ್ನು ಸಂಚರಿಸಲಾಗಿದೆ.

ಉದ್ಯೋಗ ಮತ್ತು ತಂತ್ರಜ್ಞಾನ: ಕಳೆದ 10 ವರ್ಷಗಳಲ್ಲಿ 5 ಲಕ್ಷ ಉದ್ಯೋಗಗಳನ್ನು ನೀಡಲಾಗಿದ್ದು, ಇನ್ನೂ 1.43 ಲಕ್ಷ ನೇಮಕಾತಿಗಳು ಪ್ರಗತಿಯಲ್ಲಿವೆ. 'ರೈಲ್ ಒನ್' ಆಪ್ ಮೂಲಕ ದಿನಕ್ಕೆ ಲಕ್ಷಾಂತರ ಟಿಕೆಟ್ ಬುಕ್ಕಿಂಗ್‌ಗಳು ನಡೆಯುತ್ತಿವೆ. ಎಐ ಮತ್ತು ಎಂಎಲ್ ತಂತ್ರಜ್ಞಾನಗಳ ಬಳಕೆಯಿಂದ ನಿರ್ವಹಣೆ ಮತ್ತು ವನ್ಯಜೀವಿ ರಕ್ಷಣೆಯಲ್ಲೂ ಸುಧಾರಣೆ ಕಂಡುಬಂದಿದೆ.



ನಿಲ್ದಾಣ ಅಭಿವೃದ್ಧಿ ಮತ್ತು ಬುಲೆಟ್ ರೈಲು: ಅಮೃತ ಭಾರತ ಸ್ಟೇಷನ್ ಯೋಜನೆಯಡಿ 1,300 ನಿಲ್ದಾಣಗಳನ್ನು ಪುನರ್ ಅಭಿವೃದ್ಧಿಪಡಿಸಲಾಗುತ್ತಿದ್ದು, 180 ನಿಲ್ದಾಣಗಳು ಪೂರ್ಣಗೊಂಡಿವೆ.

ಅಹಮದಾಬಾದ್–ಮುಂಬೈ ಬುಲೆಟ್ ರೈಲು ಯೋಜನೆಯು ವೇಗವಾಗಿ ಸಾಗುತ್ತಿದ್ದು, 21 ಕಿಮೀ ಸಮುದ್ರದೊಳಗಿನ ಸುರಂಗ ನಿರ್ಮಾಣವೂ ಇದರ ಭಾಗವಾಗಿದೆ.

ಒಟ್ಟಿನಲ್ಲಿ, ರೈಲ್ವೆಯ ಈ ಘೋಷಣೆಗಳು ಕರ್ನಾಟಕ ಸೇರಿದಂತೆ ದೇಶದ ಮೂಲಸೌಕರ್ಯ, ಸಂಪರ್ಕ ಮತ್ತು ಆರ್ಥಿಕ ಬೆಳವಣಿಗೆಗೆ ಹೊಸ ವೇಗ ನೀಡುವ ನಿರೀಕ್ಷೆಯಿದೆ.

## ಸೌರಬೇಲಿ ಸಮರ್ಪಕ ನಿರ್ವಹಣೆಗೆ ಈಶ್ವರ ಖಂಡ್ರೆ ಸೂಚನೆ

ಬೆಂಗಳೂರು

ಕೊಡಗು ಜಿಲ್ಲೆಯಲ್ಲಿ ಮಾನವ– ಆನೆ ಸಂಘರ್ಷ ನಿಯಂತ್ರಣಕ್ಕೆ ತೋಡಲಾಗಿರುವ ಆನೆ ಕಂದಕ ಮತ್ತು ಅಳವಡಿಸಿರುವ ತೂಗು ಸೌರಬೇಲಿಯ ಸಮರ್ಪಕ ನಿರ್ವಹಣೆ ಮಾಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಶಾಸಕರುಗಳಾದ ಎ.ಎಸ್. ಪೊನ್ನಣ್ಣ, ಡಾ.ಮಂಥರ ಗೌಡ ಮತ್ತು ದರ್ಶನ್ ಧ್ರುವನಾರಾಯಣ್ ಅವರೊಂದಿಗೆ ಹಿರಿಯ ಅಧಿಕಾರಿಗಳ ಸಭೆ ನಡೆಸಿದ ಅವರು, ಕೊಡಗಿನಲ್ಲಿ ವನ್ಯಜೀವಿಗಳಿಂದ ಅಮೂಲ್ಯ ಜೀವ ಹಾನಿ ಆಗುತ್ತಿರುವುದು ಆತಂಕದ ವಿಷಯವಾಗಿದ್ದು, ಹಾಲಿ ಇರುವ 422 ಕಿ.ಮೀ ಆನೆ ಕಂದಕ ಮತ್ತು 544 ಕಿ.ಮೀ. ತೂಗು ಸೌರಬೇಲಿಯ ಸಮರ್ಪಕ ದುರಸ್ತಿ ಕಾರ್ಯವನ್ನು ಒಂದು ತಿಂಗಳೊಳಗೆ ಪೂರ್ಣಗೊಳಿಸುವಂತೆ ಸೂಚಿಸಿದರು.

ರಾಜ್ಯದಲ್ಲಿ ವನ್ಯಜೀವಿ–ಮಾನವ ಸಂಘರ್ಷದಲ್ಲಿ ಸಂಭವಿಸುವ ಸಾವುಗಳ ಪೈಕಿ ಶೇ.38ರಷ್ಟು ಕೊಡಗು ಜಿಲ್ಲೆಯಲ್ಲಿ ಆಗುತ್ತಿದ್ದು, ಇದನ್ನು ನಿಯಂತ್ರಿಸಲು ಗಸ್ತು ಹೆಚ್ಚಳ ಮಾಡಬೇಕು. ಆನೆ ಕಾರ್ಯಪಡೆ, ತ್ವರಿತ ಸ್ಪಂದನಾ ಪಡೆ ಸೇರಿದಂತೆ ಮಾನವ ವನ್ಯಜೀವಿ ಸಂಘರ್ಷ ನಿಯಂತ್ರಣ ಘಟಕಗಳನ್ನು ಬಲಪಡಿಸುವಂತೆ ಸೂಚಿಸಿದರು.

4 ವಾಹನ ಖರೀದಿಗೆ ಸಮ್ಮತಿ: ಆನೆ ಸೇರಿದಂತೆ ವನ್ಯಜೀವಿಗಳು ತೋಟಗಳಿಗೆ ಬಂದಾಗ ಅವುಗಳನ್ನು ಕಾಡಿಗೆ ಮರಳಿಸಲು ಸಿಬ್ಬಂದಿ ತ್ವರಿತವಾಗಿ ಸ್ಪಂದಿಸಲು ಹಾಲಿ ಇರುವ 6 ವಾಹನಗಳ ಜೊತೆಗೆ ಈಗಾಗಲೇ 4 ವಾಹನ ಖರೀದಿಸಲಾಗಿದೆ. ಇನ್ನೂ ಹೆಚ್ಚುವರಿಯಾಗಿ 4 ವಾಹನ ಖರೀದಿಸಿ, ಸ್ಥಳೀಯ ಉತ್ಸಾಹಿ ಯುವಕರನ್ನು ಹೊರಗುತ್ತಿಗೆ ಆಧಾರದಲ್ಲಿ ಕಾರ್ಯಪಡೆಗೆ ಸೇರ್ಪಡೆ ಮಾಡಿಕೊಂಡು ಹೆಚ್ಚು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಣೆ ಮಾಡುವಂತೆ ಈಶ್ವರ ಖಂಡ್ರೆ ಸೂಚಿಸಿದರು.

ವನ್ಯಜೀವಿಗಳ ಸಂಚಾರ ಮಾಹಿತಿ ರವಾನಿಸಲು, ಅಕ್ರಮ ಮರ ಕಡಿತಲೆ ಮತ್ತು ವನ್ಯಜೀವಿ ಕಳ್ಳಬೇಟೆ ನಿಗ್ರಹಿಸಲು ಬಲಿಷ್ಠ ನಿಸ್ತಂತು ಜಾಲ (ವೈರ್ ಲೆಸ್ ನೆಟ್ ವರ್ಕ್) ಕಾರ್ಯಾರಂಭಕ್ಕೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳುವಂತೆಯೂ ಸಚಿವರು ಹಿರಿಯ ಅಧಿಕಾರಿಗಳಿಗೆ ತಿಳಿಸಿದರು.

ವನ್ಯಜೀವಿ ಸಂಚಾರದ ಮಾಹಿತಿ ನೀಡಲು ಆದೇಶ: ಕೊಡಗು ಜಿಲ್ಲೆಯಲ್ಲಿನ ಪ್ರತಿ ವಲಯದಲ್ಲಿರುವ ತೋಟಗಳಲ್ಲಿ ಎಷ್ಟು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ ಎಂಬ ಬಗ್ಗೆ ದತ್ತಾಂಶ ಕಲೆ ಹಾಕಿ, ಆಯಾ ವಲಯದಲ್ಲಿ ವನ್ಯಜೀವಿಗಳು ಅದರಲ್ಲೂ ಆನೆಗಳು ಜನ ವಸತಿ, ತೋಟಗಳ ಬಳಿ ಬಂದಾಗ ಆ ಕಾರ್ಮಿಕರಿಗೆ ತಕ್ಷಣವೇ ವಾಟ್ಸ್ ಅಪ್ ಮೂಲಕ ಮತ್ತು ಮೈಕ್ ಅಳವಡಿಸಿದ ವಾಹನಗಳ ಮೂಲಕ ಮಾಹಿತಿ ರವಾನಿಸಲು ಕ್ರಮ ವಹಿಸುವಂತೆಯೂ ಸೂಚಿಸಿದರು.



## ಗಾಂಜಾ ಮಾರಾಟ ಜಾಲ ಪತ್ತೆ: 4 ಕೆಜಿ ಗಾಂಜಾ ವಶ



ಕೆಜಿಎಫ್

ತಾಲ್ಲೂಕಿನ ದೇಶಿಹಳ್ಳಿ ರೈಲ್ವೆ ಗೇಟ್ ಬಳಿ ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ ಜಾಲವನ್ನು ಭೇದಿಸಿರುವ ಬಂಗಾರಪೇಟೆ ಪೊಲೀಸರು, ಓರ್ವ ಆರೋಪಿಯನ್ನು ಬಂಧಿಸಿ ಲಕ್ಷಾಂತರ ರೂಪಾಯಿ ಮೌಲ್ಯದ ಮಾಲನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಮಿಂಚಿನ ದಾಳಿ: ದೇಶಿಹಳ್ಳಿ ರೈಲ್ವೆ ಗೇಟ್ ಬಳಿ ವ್ಯಕ್ತಿಯೊಬ್ಬ ಗಾಂಜಾ ಮಾರಾಟ ಮಾಡುತ್ತಿದ್ದಾನೆ ಎಂಬ ಖಚಿತ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ, ಬಂಗಾರಪೇಟೆ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಪ್ರಕಾಶ್ ನರಸಿಂಗ್ ಮತ್ತು ಸಿಬ್ಬಂದಿ ತಂಡವು ತಕ್ಷಣವೇ ದಾಳಿ ನಡೆಸಿತು. ಈ ಸಂದರ್ಭದಲ್ಲಿ ಬಿಹಾರ ರಾಜ್ಯದ ಮಧುಬನಿ ಜಿಲ್ಲೆಯ ನಿವಾಸಿ ಮಹೇಶ್ ಕುಮಾರ್ ಸಿಂಗ್ @ ಅಮನ್ (24) ಎಂಬಾತನನ್ನು ವಶಕ್ಕೆ ಪಡೆಯಲಾಯಿತು.

2.05 ಲಕ್ಷ ಮೌಲ್ಯದ ಮಾಲು ವಶ: ಬಂಧಿತ ಆರೋಪಿಯಿಂದ ಸುಮಾರು 2,05,000 ರೂ. ಮೌಲ್ಯದ 4 ಕೆಜಿ 160 ಗ್ರಾಂ ಗಾಂಜಾವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಆರೋಪಿಯ ವಿರುದ್ಧ ಎನ್.ಡಿ.ಪಿ.ಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗಿದೆ.

ಪೊಲೀಸ್ ತಂಡಕ್ಕೆ ಶ್ಲಾಘನೆ: ಕೆಜಿಎಫ್ ಡಿವೈಎಸ್‌ಪಿ ವಿ. ಲಕ್ಷ್ಮಯ್ಯ ಮತ್ತು ಇನ್ಸ್‌ಪೆಕ್ಟರ್ ರವಿಕುಮಾರ್ ಸಿ. ಅವರ ಮಾರ್ಗದರ್ಶನದಲ್ಲಿ ನಡೆದ ಈ ಯಶಸ್ವಿ ಕಾರ್ಯಾಚರಣೆಯಲ್ಲಿ ಪಿಎಸ್‌ಐ ಪ್ರಕಾಶ್ ನರಸಿಂಗ್ ಹಾಗೂ ಸಿಬ್ಬಂದಿಗಳಾದ ಶ್ರೀನಿವಾಸ್, ಸಂತೋಷ್ ಸಿದ್ದಾಪುರ, ಮುನೇಂದ್ರ, ಮಧುಕುಮಾರ್ ಮತ್ತು ಪುರುಷೋತ್ತಮ್ ಪಾಲ್ಗೊಂಡಿದ್ದರು. ಈ ತಂಡದ ಸಮಯಪ್ರಜ್ಞೆ ಮತ್ತು ಸಾಹಸವನ್ನು ಕೆಜಿಎಫ್ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಅವರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

# ಕಂದಾಯ ಇಲಾಖೆಯಲ್ಲಿ ಡಿಜಿಟಲ್ ಕ್ರಾಂತಿ: ಇನ್ನು ಮುಂದೆ 'ಸ್ವಯಂ ಚಾಲಿತ' ಬದಲಾವಣೆ

ಬೆಂಗಳೂರು

ಆಸ್ತಿ ನೋಂದಣಿ ಮಾಡಿದ ನಂತರ ಖಾತೆ ಬದಲಾವಣೆಗಾಗಿ ಕಚೇರಿಗಳಿಗೆ ಅಲೆಯುವ ಕಾಲ ಇನ್ನು ಇತಿಹಾಸ. ರಾಜ್ಯದಲ್ಲಿ ಪ್ರಸ್ತುತ ಶೇ. 98 ರಷ್ಟು ಖಾತೆಗಳು ಯಾವುದೇ ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ 'ಆಟೋ ಮ್ಯುಟೇಶನ್' (ಸ್ವಯಂ ಚಾಲಿತ) ಮೂಲಕ ಬದಲಾವಣೆಯಾಗುತ್ತಿವೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ವಿಧಾನ ಪರಿಷತ್ತಿಗೆ ಮಾಹಿತಿ ನೀಡಿದರು.

ಬುಧವಾರ ಪರಿಷತ್ತಿನಲ್ಲಿ ಸದಸ್ಯ ರಾಮೋಜಿಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಂದಾಯ ಇಲಾಖೆಯಲ್ಲಿ ಕಳೆದ ಒಂದು ವರ್ಷದಿಂದ ತಂದಿರುವ ತಾಂತ್ರಿಕ ಸುಧಾರಣೆಗಳ ಬಗ್ಗೆ ವಿವರಣೆ ನೀಡಿದರು.

ಮಧ್ಯವರ್ತಿಗಳ ಹಾವಳಿಗೆ ಬ್ರೇಕ್ ಆಟೋ ಮ್ಯುಟೇಶನ್ ಜಾರಿ: "ಆಸ್ತಿ ನೋಂದಣಿ ನಂತರ ಖಾತೆ ಬದಲಾವಣೆ ವಿಳಂಬವಾಗುತ್ತಿದೆ ಎಂಬ ದೂರುಗಳಿದ್ದವು. ಇದನ್ನು ಹೋಗಲಾಡಿಸಲು ಕಳೆದ ವರ್ಷ ಶೇ. 66 ರಷ್ಟು ಖಾತೆಗಳನ್ನು ಆಟೋ ಮ್ಯುಟೇಶನ್ ವ್ಯಾಪ್ತಿಗೆ ತರಲಾಗಿತ್ತು. ಕಳೆದ ತಿಂಗಳಿನಿಂದ ಈ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಾಗಿದ್ದು, ಈಗ ಶೇ. 98 ರಷ್ಟು ಖಾತೆಗಳು ಸ್ವಯಂ ಚಾಲಿತವಾಗಿ ಬದಲಾವಣೆಯಾಗುತ್ತಿವೆ. ಇದು ದೇಶದ ಇತಿಹಾಸದಲ್ಲೇ ಅತ್ಯಂತ ಪ್ರಗತಿಪರ ಹೆಜ್ಜೆ," ಎಂದು ಸಚಿವರು ಸಂತಸ ವ್ಯಕ್ತಪಡಿಸಿದರು.

ತಕರಾರು ಅರ್ಜಿಗಳಿಗೆ 'ಆಧಾರ್ ಇ–ಕೆವೈಸಿ' ಕಡ್ಡಾಯ: ಖಾತೆ ಬದಲಾವಣೆ ಸಂದರ್ಭದಲ್ಲಿ ಕಂದಾಯ ನಿರೀಕ್ಷಕರು ಅಥವಾ ಅವರ ಕಡೆಯವರು ವಿನಾಕಾರಣ ತಕರಾರು ಅರ್ಜಿ ಸಲ್ಲಿಸಿ ವಿಳಂಬ ಮಾಡುತ್ತಿದ್ದ ವ್ಯವಸ್ಥೆಗೆ ಸಚಿವರು ಈಗ ಶಾಶ್ವತ ಪರಿಹಾರ ನೀಡಿದ್ದಾರೆ.

ಇ–ಕೆವೈಸಿ ಕಡ್ಡಾಯ: ಇನ್ನು ಮುಂದೆ ತಕರಾರು ಅರ್ಜಿ ಸಲ್ಲಿಸುವವರು ಕಡ್ಡಾಯವಾಗಿ ಆಧಾರ್ ಇ–ಕೆವೈಸಿ ಮಾಡಿಸಬೇಕು. ಇದರಿಂದ ಒಬ್ಬನೇ ವ್ಯಕ್ತಿ ಹಲವು ಅರ್ಜಿ ಸಲ್ಲಿಸುವುದನ್ನು ಪತ್ತೆ ಹಚ್ಚಲು ಸುಲಭವಾಗುತ್ತದೆ.

ಆರ್‌ಐ ಅಧಿಕಾರಕ್ಕೆ ಮಿತಿ: ಸರ್ಕಾರಿ ಹಿತಾಸಕ್ತಿ ಇದ್ದರೆ ಮಾತ್ರ ಆರ್‌ಐ ತಕರಾರು ಸಲ್ಲಿಸಬಹುದು.



ಖಾಸಗಿ ಸ್ವತ್ತಿನ ವಿವಾದವಿದ್ದರೆ ಅವರ ಸಂಬಂಧಿಕರೇ ಅರ್ಜಿ ಸಲ್ಲಿಸಬೇಕು ಹೊರತು ಅಧಿಕಾರಿಗಳಲ್ಲ.

ಸಮಯ ಮಿತಿ ನಿಗದಿ: ಅರ್ಜಿ ಸಲ್ಲಿಸಿದ ನಂತರ ಕೆಲವೊಂದು ಮೂರು ಗಂಟೆಯಲ್ಲಿ, ಕೆಲವು 8ನೇ ದಿನಕ್ಕೆ ಹಾಗೂ ಇನ್ನು ಕೆಲವು 16ನೇ ದಿನಕ್ಕೆ ಕಾನೂನುಬದ್ಧವಾಗಿ ಖಾತೆ ಬದಲಾವಣೆಯಾಗುತ್ತವೆ. ಯಾವುದೇ ತಕರಾರು ಇಲ್ಲದಿದ್ದಲ್ಲಿ ಸಾರ್ವಜನಿಕರು ಯಾರನ್ನೂ ಭೇಟಿ ಮಾಡದೆಯೇ ಈ ಸೇವೆಯನ್ನು ಆನ್‌ಲೈನ್ ಮೂಲಕ ಪಡೆಯಬಹುದಾಗಿದೆ.

## ಹಬ್ಬದ ಪ್ರಯುಕ್ತ ವಿಶೇಷ ರೈಲು ಸಂಚಾರ

ಬೆಂಗಳೂರು

ಯುಗಾದಿ ಮತ್ತು ರಂಜಾನ್ ಹಬ್ಬಗಳ ಸಂದರ್ಭದಲ್ಲಿ ಪ್ರಯಾಣಿಕರ ಅತಿಯಾದ ದಟ್ಟಣೆಯನ್ನು ನಿಯಂತ್ರಿಸಲು ನೈಋತ್ಯ ರೈಲ್ವೆಯು ಯಶವಂತಪುರ–ಮಡಗಾಂವ್–ಬೆಂಗಳೂರು ಕಂಟೋನ್ಮೆಂಟ್ ನಡುವೆ ಒಂದು ಟ್ರಿಪ್ ವಿಶೇಷ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಘೋಷಿಸಿದೆ.

ರೈಲು ಸಂಚಾರದ ವೇಳಾಪಟ್ಟಿ: ರೈಲು ಸಂಖ್ಯೆ 06271 (ಯಶವಂತಪುರ–ಮಡಗಾಂವ್): ಮಾರ್ಚ್ 20, 2026ರ ಶುಕ್ರವಾರ ಬೆಳಿಗ್ಗೆ 11:50ಕ್ಕೆ ಯಶವಂತಪುರದಿಂದ ಹೊರಟು, ಮರುದಿನ ಶನಿವಾರ ಬೆಳಿಗ್ಗೆ 06:45ಕ್ಕೆ ಮಡಗಾಂವ್ ತಲುಪಲಿದೆ.

ರೈಲು ಸಂಖ್ಯೆ 06272 (ಮಡಗಾಂವ್–ಬೆಂಗಳೂರು ಕಂಟೋನ್ಮೆಂಟ್): ಮಾರ್ಚ್ 22, 2026ರ ಭಾನುವಾರ ಬೆಳಿಗ್ಗೆ 11:00ಕ್ಕೆ ಮಡಗಾಂವ್‌ನಿಂದ ಹೊರಟು, ಮರುದಿನ ಸೋಮವಾರ ಬೆಳಿಗ್ಗೆ 05:20ಕ್ಕೆ ಬೆಂಗಳೂರು ಕಂಟೋನ್ಮೆಂಟ್ ತಲುಪಲಿದೆ.

ಈ ವಿಶೇಷ ರೈಲು ಉಭಯ ದಿಕ್ಕುಗಳಲ್ಲಿ ಕುಣಿಗಲ್, ಚನ್ನರಾಯಪಟ್ಟಣ, ಹಾಸನ, ಸಕಲೇಶಪುರ, ಸುಬ್ರಹ್ಮಣ್ಯ ರೋಡ್, ಕಬಕಪುತ್ತೂರು, ಬಂಟ್ವಾಳ, ಸುರತ್ಕಲ್, ಮುಲ್ಕಿ, ಉಡುಪಿ, ಬಾರ್ಕೂರು, ಕುಂದಾಪುರ, ಬೈಂದೂರು, ಭಟ್ಕಳ, ಮುರುಡೇಶ್ವರ, ಹೊನ್ನಾವರ, ಕುಮಟಾ, ಗೋಕರ್ಣ ರೋಡ್, ಅಂಕೋಲಾ ಮತ್ತು ಕಾರವಾರ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಿರಲಿದೆ.

ಒಟ್ಟು 20 ಬೋಗಿಗಳನ್ನು ಹೊಂದಿರುವ ಈ ರೈಲಿನಲ್ಲಿ.

ಒಂದು ಎಸಿ ಫಸ್ಟ್ ಕ್ಲಾಸ್, ಎರಡು ಎಸಿ 2–ಟೈರ್, ಎರಡು ಎಸಿ 3–ಟೈರ್ ಬೋಗಿಗಳು.


ಒಂಬತ್ತು ಸ್ಲೀಪರ್ ಕ್ಲಾಸ್ ಮತ್ತು ನಾಲ್ಕು ಸಾಮಾನ್ಯ ದ್ವಿತೀಯ ದರ್ಜೆ ಬೋಗಿಗಳು ಲಭ್ಯವಿವೆ.

ಕರಾವಳಿ ಮತ್ತು ಮಲೆನಾಡು ಭಾಗದ ಪ್ರಯಾಣಿಕರಿಗೆ ಹಬ್ಬದ ಸಮಯದಲ್ಲಿ ಸ್ವಗ್ರಾಮಗಳಿಗೆ ತೆರಳಲು ಈ ವಿಶೇಷ ರೈಲು ವ್ಯವಸ್ಥೆಯು ಹೆಚ್ಚಿನ ಅನುಕೂಲ ಕಲ್ಪಿಸಲಿದೆ.


## ಬೇವು-ಬೆಲ್ಲ ಸವಿಯದ ಕುರುಡುಮಲೆಯ 30 ಕುಟುಂಬಗಳು

● ಮಂಡಿಕಲ್ ಪುರುಷೋತ್ತಮ್

ನಾಡಿನಾದ್ಯಂತ ಯುಗಾದಿ ಹಬ್ಬವನ್ನು ಹೊಸ ಬಟ್ಟೆ ತೊಟ್ಟು, ಬೇವು–ಬೆಲ್ಲ ಸವಿದು ಸಡಗರದಿಂದ ಆಚರಿಸುವುದು ರೂಢಿ. ಆದರೆ, ಮುಳಬಾಗಲು ತಾಲ್ಲೂಕಿನ ಪ್ರಸಿದ್ಧ ಕುರುಡುಮಲೆ ಗ್ರಾಮದ ಸುಮಾರು 30ಕ್ಕೂ ಹೆಚ್ಚು ದಲಿತ ಕುಟುಂಬಗಳು ಕಳೆದ ಎರಡು ಶತಮಾನಗಳಿಂದ ಯುಗಾದಿ ಹಬ್ಬವನ್ನು ಆಚರಿಸುತ್ತಿಲ್ಲ! ಈ ವಿಭಿನ್ನ ಸಂಪ್ರದಾಯ ಇಂದಿಗೂ ಇಲ್ಲಿ ಜೀವಂತವಾಗಿದೆ.



ಘಟನೆಯ ಹಿನ್ನೆಲೆ ಗರ್ಭಿಣಿ ಸಾವು ಹಾಗೂ ಗೂಳಿಯ ದಾಳಿ: ಸುಮಾರು ಇನ್ನೂರು ವರ್ಷಗಳ ಹಿಂದೆ ನಡೆದ ಒಂದು ಘಟನೆ ಈ ಸಂಪ್ರದಾಯಕ್ಕೆ ಕಾರಣ ಎನ್ನಲಾಗುತ್ತದೆ. ಗ್ರಾಮದ ಹಿರಿಯರಾದ ವೆಂಕಟಪ್ಪ ಮತ್ತು ವೆಂಕಟೇಶಯ್ಯ ಅವರ ಪ್ರಕಾರ, ಹಿಂದೆ ಬೆಟ್ಟದ ತಪ್ಪಲಿನಲ್ಲಿ ನೀರು ತರಲು ಹೋಗಿದ್ದ ದಲಿತ ಸಮುದಾಯದ ಗರ್ಭಿಣಿಯೊಬ್ಬರ ಮೇಲೆ ಗೂಳಿಯೊಂದು ದಾಳಿ ಮಾಡಿತ್ತು. ಈ ದಾಳಿಯಲ್ಲಿ ಮಹಿಳೆ ಮೃತಪಟ್ಟ ಬೆನ್ನಲ್ಲೇ ಆ ಗೂಳಿಯೂ ಸಹ ಸಾವನ್ನಪ್ಪಿತ್ತು.



ಈ ಘಟನೆ ನಡೆದ ಮರುವರ್ಷ ಯುಗಾದಿ ಹಬ್ಬದ ಸಿದ್ಧತೆ ನಡೆಸುತ್ತಿದ್ದಾಗ, ಇದ್ದಕ್ಕಿದ್ದಂತೆ ಕೆಲವು ಮನೆಗಳಲ್ಲಿ ಬೆಂಕಿ ಕಾಣಿಸಿಕೊಂಡು ಬಟ್ಟೆ, ಧವಸ ಧಾನ್ಯಗಳು ಸುಟ್ಟು ಭಸ್ಮವಾಗಿದ್ದವು. ಇದರಿಂದ ಭಯಭೀತರಾದ ಆ ಕುಟುಂಬಗಳು ಮತ್ತು ಅವರ ಸಂಬಂಧಿಕರು ಅಂದಿನಿಂದ ಹಬ್ಬದ ಆಚರಣೆಯನ್ನೇ ಕೈಬಿಟ್ಟರು ಎಂಬ ಐತಿಹ್ಯವಿದೆ.

ಸಗಣಿ ಪಟ್ಟಿಯೇ ಹಬ್ಬವಿಲ್ಲದ ಸಂಕೇತ!

ಹಬ್ಬದ ದಿನ ಇಡೀ ಗ್ರಾಮ ಸಡಗರದಲ್ಲಿದ್ದರೆ, ಈ ಕುಟುಂಬಗಳು ಮಾತ್ರ ಶಾಂತವಾಗಿರುತ್ತವೆ. ಹಬ್ಬಕ್ಕೂ ಮುನ್ನ ತಮ್ಮ ಮನೆಗಳ ಮುಂದೆ ಸಗಣಿಯಿಂದ ಪಟ್ಟಿ ಎಳೆಯುವ ಮೂಲಕ ತಾವು ಹಬ್ಬ ಆಚರಿಸುತ್ತಿಲ್ಲ ಎಂಬುದನ್ನು ಈ ಕುಟುಂಬಗಳು ಸೂಚಿಸುತ್ತವೆ. "ಪೂರ್ವಿಕರು ಹಾಕಿಕೊಟ್ಟ ಈ ಕಟ್ಟುಪಾಡನ್ನು ನಾವು ಇಂದಿಗೂ ಗೌರವಿಸುತ್ತಿದ್ದೇವೆ.

ಕಾಲಕ್ರಮೇಣ ಕೆಲವು ಕಠಿಣ ನಿಯಮಗಳು ಬದಲಾಗಿದ್ದರೂ, ಹಬ್ಬ ಆಚರಿಸದಿರುವುದು ಮಾತ್ರ ಮುಂದುವರಿಯುತ್ತಿದೆ," ಎನ್ನುತ್ತಾರೆ ಕುಟುಂಬದ ಸದಸ್ಯ ಮುನಿಯಪ್ಪ.

ಬೇರೆ ಕಡೆಗಳಿಂದ ವಲಸೆ ಬಂದು ಇಲ್ಲಿ ನೆಲೆಸಿರುವ ದಲಿತ ಕುಟುಂಬಗಳು ಹಬ್ಬ ಆಚರಿಸುತ್ತವೆಯಾದರೂ, ಮೂಲ ನಿವಾಸಿಗಳಾದ ಈ 30 ಕುಟುಂಬಗಳು ಮಾತ್ರ ಇಂದಿಗೂ ಯುಗಾದಿಯಿಂದ ದೂರ ಉಳಿದಿವೆ.

## 'ಮಾಂಸದ ಅಂಗಡಿ ತ್ಯಾಜ್ಯಕ್ಕೂ ಬರಲಿದೆ ಆಟೋ'



ಬೆಂಗಳೂರು

ನಗರದ ನೈರ್ಮಲ್ಯ ಮತ್ತು ಸಾರ್ವಜನಿಕ ಆರೋಗ್ಯವನ್ನು ಸುಧಾರಿಸುವ ನಿಟ್ಟಿನಲ್ಲಿ ಬೆಂಗಳೂರು ದಕ್ಷಿಣ ನಗರ ಪಾಲಿಕೆಯು ಮಹತ್ವದ ಹೆಜ್ಜೆ ಇಟ್ಟಿದೆ. ಮಾಂಸದ ಅಂಗಡಿಗಳಿಂದ ಹೊರಬರುವ ಪ್ರಾಣಿತ್ಯಾಜ್ಯವನ್ನು ವೈಜ್ಞಾನಿಕವಾಗಿ ನಿರ್ವಹಿಸಲು 'ವೇದನ್' ಎಂಬ ಸ್ವಯಂಸೇವಾ ಸಂಸ್ಥೆಯೊಂದಿಗೆ ಕೈಜೋಡಿಸಿ ಹೊಸ ಯೋಜನೆಯನ್ನು ರೂಪಿಸಲಾಗಿದೆ.

ಬೆಂಗಳೂರು ದಕ್ಷಿಣ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ, ವೇದನ್ ಸಂಸ್ಥೆಯ ಪ್ರತಿನಿಧಿಗಳು ಈ ಯೋಜನೆಯ ಕಾರ್ಯರೂಪದ ಬಗ್ಗೆ ಸಮಗ್ರ ಪ್ರಾತ್ಯಕ್ಷಿಕೆ ನೀಡಿದರು.

ಯೋಜನೆಯ ಮುಖ್ಯಾಂಶಗಳು:

ವೈಜ್ಞಾನಿಕ ವಿಲೇವಾರಿ: ನಗರದಲ್ಲಿ ಮಾಂಸ ಮಾರಾಟಗಾರರಿಂದ ಆಗುತ್ತಿರುವ ಅವೈಜ್ಞಾನಿಕ ತ್ಯಾಜ್ಯ ವಿಲೇವಾರಿಗೆ ಕಡಿವಾಣ ಹಾಕುವುದು ಮತ್ತು ಆರೋಗ್ಯಕರ ಸಂಗ್ರಹಣಾ ವ್ಯವಸ್ಥೆ ನಿರ್ಮಿಸುವುದು ಈ ಯೋಜನೆಯ ಮುಖ್ಯ ಗುರಿ.

ದತ್ತಾಂಶ ಆಧಾರಿತ ನಕ್ಷೆ: ವೇದನ್ ಸಂಸ್ಥೆಯು ಈಗಾಗಲೇ ವಲಯದಾದ್ಯಂತ ಸಮೀಕ್ಷೆ ನಡೆಸಿ, ತ್ಯಾಜ್ಯ ಉತ್ಪತ್ತಿಯಾಗುವ ಕೇಂದ್ರಗಳನ್ನು ಗುರುತಿಸಿ ನಕ್ಷೆ ಮಾಡಿದೆ. ಇದರಿಂದ ಸಂಗ್ರಹಣೆಯಲ್ಲಿ ನಿಖರತೆ ಬರಲಿದೆ.

ಸ್ಮಾರ್ಟ್ ರೂಟ್ ಮ್ಯಾಪ್: ತ್ಯಾಜ್ಯ ಸಂಗ್ರಹಣೆಗಾಗಿ ಪ್ರತ್ಯೇಕ ಆಟೋ ಮಾರ್ಗಗಳನ್ನು ರೂಪಿಸಲಾಗಿದೆ. ಪ್ರತಿ ಅಂಗಡಿಗೆ ವಾಹನ ತಲುಪುವ ಸಮಯ ಮತ್ತು ಅಲ್ಲಿ ನಿಲ್ಲುವ ಅವಧಿಯನ್ನು ಮೊದಲೇ ನಿಗದಿಪಡಿಸಲಾಗಿದೆ.

ಮನೆಬಾಗಿಲಿಗೆ ಆಟೋ ಮಾದರಿ: ಮಾಂಸ ಮಾರಾಟಗಾರರು ತಮ್ಮ ತ್ಯಾಜ್ಯವನ್ನು ಸುರಕ್ಷಿತವಾಗಿ ಹಸ್ತಾಂತರಿಸಲು ಸುಸಜ್ಜಿತ ವ್ಯವಸ್ಥೆ ಕಲ್ಪಿಸಲಾಗಿದ್ದು, ಇದರಿಂದ ಬೀದಿ ಬದಿ ತ್ಯಾಜ್ಯ ಎಸೆಯುವ ಪ್ರವೃತ್ತಿಗೆ ಬ್ರೇಕ್ ಬೀಳಲಿದೆ.

ಪರಿಸರ ಮಾಲಿನ್ಯಕ್ಕೆ ಮುಕ್ತಿ: ಈ ನೂತನ ವ್ಯವಸ್ಥೆಯಿಂದ ನಗರದಲ್ಲಿ ಹರಡುತ್ತಿದ್ದ ದುರ್ಗಂಧ ಮತ್ತು ಪರಿಸರ ಮಾಲಿನ್ಯವನ್ನು ತಡೆಗಟ್ಟಲು ಸಾಧ್ಯವಾಗುತ್ತದೆ. ವಿಶೇಷವೆಂದರೆ, ಸಂಚಾರಕ್ಕೆ ಯಾವುದೇ ಅಡ್ಡಿಯಾಗದಂತೆ ತ್ಯಾಜ್ಯ ಸಂಗ್ರಹಣಾ ವಾಹನಗಳ ಸಮಯವನ್ನು ನಿಗದಿಪಡಿಸಲಾಗಿದ್ದು, ದತ್ತಾಂಶ ಆಧಾರಿತ ನಿರ್ವಹಣೆಯು ಬೆಂಗಳೂರಿನ ನೈರ್ಮಲ್ಯಕ್ಕೆ ಹೊಸ ಮಾದರಿಯಾಗಲಿದೆ ಎಂದು ಆಯುಕ್ತರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ಜಿಬಿಎ ಮತಪಟ್ಟಿ ಗೊಂದಲ: ಆಕ್ಷೇಪಣೆ ಅವಧಿ ವಿಸ್ತರಣೆಗೆ ಬಿಜೆಪಿ ಒತ್ತಾಯ

ಬೆಂಗಳೂರು

ಇಲ್ಲಿನ ಮಹಾನಗರ ಪ್ರಾಧಿಕಾರ ಚುನಾವಣೆಯ ಕರಡು ಮತಪಟ್ಟಿ ಪರಿಶೀಲನೆ ಮತ್ತು ಆಕ್ಷೇಪಣೆ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಒತ್ತಾಯಿಸಿ ಬಿಜೆಪಿ ನಿಯೋಗವು ಬುಧವಾರ ರಾಜ್ಯ ಚುನಾವಣಾ ಆಯೋಗದ ಮುಖ್ಯ ಚುನಾವಣಾಧಿಕಾರಿಗಳಿಗೆ ಮನವಿ ಸಲ್ಲಿಸಿತು.

ತಾಂತ್ರಿಕ ದೋಷ ಹಾಗೂ ರಜೆಗಳ ಅಡ್ಡಿ: ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ನೇತೃತ್ವದ ನಿಯೋಗವು ಆಯೋಗದ ಗಮನ ಸೆಳೆದ ಪ್ರಮುಖ ಅಂಶಗಳು ಇಲ್ಲಿವೆ.



ವೆಬ್‌ಸೈಟ್ ವ್ಯತ್ಯಯ: ಕಳೆದ ಮಾರ್ಚ್ 13 ರಿಂದ 18 ರವರೆಗೆ ಜಿಬಿಎ ವೆಬ್‌ಸೈಟ್ ತಾಂತ್ರಿಕ ಕಾರಣಗಳಿಂದ ಕಾರ್ಯನಿರ್ವಹಿಸದ ಕಾರಣ ನಾಗರಿಕರಿಗೆ ಮತದಾರರ ಪಟ್ಟಿ ಪರಿಶೀಲಿಸಲು ಸಾಧ್ಯವಾಗಿಲ್ಲ. ಈ ಕುರಿತು ಈಗಾಗಲೇ ಮಹಾ ಆಯುಕ್ತರಿಗೆ ಅಧಿಕೃತ ದೂರು ಸಲ್ಲಿಸಲಾಗಿದೆ.

ವಿಳಂಬವಾಗಿ ತಲುಪಿದ ಪಟ್ಟಿ: ಕರಡು ಮತದಾರರ ಪಟ್ಟಿಯು ಮಾರ್ಚ್ 16 ರಂದು ಮಾತ್ರ ಕಚೇರಿಗೆ ತಲುಪಿದ್ದು, ಇಷ್ಟು ಬೃಹತ್ ಪಟ್ಟಿಯನ್ನು ಪರಿಶೀಲಿಸಲು ಹೆಚ್ಚಿನ ಸಮಯದ ಅವಶ್ಯಕತೆಯಿದೆ.

ಹಬ್ಬದ ರಜೆಗಳು: ಮುಂದಿನ ಮೂರು ದಿನಗಳ ಕಾಲ ಯುಗಾದಿ ಹಬ್ಬದ ಪ್ರಯುಕ್ತ ಸರಣಿ ರಜೆಗಳಿದ್ದು, ಸಾವಿರಾರು ಮತದಾರರು ತಮ್ಮ ಊರುಗಳಿಗೆ ತೆರಳಲಿದ್ದಾರೆ. ಈ ಸಂದರ್ಭದಲ್ಲಿ ಆಕ್ಷೇಪಣೆ ಸಲ್ಲಿಸಲು ತೊಂದರೆಯಾಗಲಿದೆ.

ಮಾರ್ಚ್ 30 ರವರೆಗೆ ಗಡುವು ವಿಸ್ತರಣೆಗೆ ಆಗ್ರಹ: ಮತದಾರರ ಹಿತದೃಷ್ಟಿಯಿಂದ ಪ್ರಸ್ತುತ ಇರುವ ಇದೇ 20ರ ಗಡುವನ್ನು 30 ರವರೆಗೆ ವಿಸ್ತರಿಸಬೇಕು. ನಾಗರಿಕರಿಗೆ ತಮ್ಮ ಮತದಾನದ ಹಕ್ಕನ್ನು ಚಲಾಯಿಸಲು ಮತ್ತು ಪಟ್ಟಿಯಲ್ಲಿರುವ ದೋಷಗಳನ್ನು ಸರಿಪಡಿಸಲು ಇದು ಅನಿವಾರ್ಯವಾಗಿದೆ ಎಂದು ನಿಯೋಗವು ಒತ್ತಾಯಿಸಿದೆ. ಈ ಸಂದರ್ಭದಲ್ಲಿ ಶಾಸಕ ಎಸ್. ಸುರೇಶ್ ಕುಮಾರ್, ಸತೀಶ್ ರೆಡ್ಡಿ, ಎಸ್. ಮುನಿರಾಜು, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಸಿ.ಕೆ. ರಾಮಮೂರ್ತಿ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಹಾಗೂ ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ ಉಪಸ್ಥಿತರಿದ್ದರು.

# ಬೆಂಗಳೂರು 2ನೇ ಏರ್‌ಪೋರ್ಟ್ ಎಲ್ಲಿ?: ಸ್ಥಳ ಆಯ್ಕೆ ಜವಾಬ್ದಾರಿ ರಾಜ್ಯಕ್ಕೆ ವಹಿಸಿದ ಕೇಂದ್ರ ಸರ್ಕಾರ

ನವದೆಹಲಿ

ಬೆಂಗಳೂರಿನ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸ್ಥಾಪನೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ತನ್ನ ಅಭಿಪ್ರಾಯವನ್ನು ತಿಳಿಸಿದ್ದು, ಸ್ಥಳ ನಿಗದಿಪಡಿಸುವ ಜವಾಬ್ದಾರಿಯನ್ನು ರಾಜ್ಯ ಸರ್ಕಾರಕ್ಕೇ ವಹಿಸಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಬುಧವಾರ ನವದೆಹಲಿಯಲ್ಲಿ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಅವರನ್ನು ಭೇಟಿ ಮಾಡಿದ ಬಳಿಕ ಮಾತನಾಡಿದ ಅವರು,



ಬೆಂಗಳೂರಿನ ಅಭಿವೃದ್ಧಿಗೆ ಅಡ್ಡಿಯಾಗಿರುವ 'ಕಟ್ಟಡ ಎತ್ತರದ ಮಿತಿ' ಸಡಿಲಿಸುವಂತೆಯೂ ಮನವಿ ಮಾಡಿದರು.

ಎರಡನೇ ವಿಮಾನ ನಿಲ್ದಾಣ: "ಎರಡನೇ ವಿಮಾನ ನಿಲ್ದಾಣದ ವಿಚಾರವಾಗಿ ಕೇಂದ್ರ ಸರ್ಕಾರವು ತನ್ನ ಪ್ರತಿಕ್ರಿಯೆ ನೀಡಿದ್ದು, ಸೂಕ್ತ ಜಾಗವನ್ನು ನೀವೇ ಆಯ್ಕೆ ಮಾಡಿ ಎಂದು ತಿಳಿಸಿದೆ. ನಮ್ಮ ಮುಂದೆ ಸದ್ಯ ಎರಡು–ಮೂರು ಆಯ್ಕೆಗಳಿದ್ದು, ಬೆಂಗಳೂರಿಗೆ ಮರಳಿದ ನಂತರ ಸಚಿವ ಎಂ.ಬಿ. ಪಾಟೀಲ್ ಅವರೊಂದಿಗೆ ಚರ್ಚಿಸಿ, ಸಾಧಕ–ಬಾಧಕಗಳನ್ನು ಪರಿಶೀಲಿಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು," ಎಂದು ಡಿಸಿಎಂ ವಿವರಿಸಿದರು.

ಕಟ್ಟಡಗಳ ಎತ್ತರದ ಮಿತಿ ಸಡಿಲಿಕೆಗೆ ಆಗ್ರಹ: ಬೆಂಗಳೂರಿನ ಹೆಚ್‌ಎಎಲ್, ಜಕ್ಕೂರು, ಯಲಹಂಕ ವಾಯುನೆಲೆ ಹಾಗೂ ಕೆಂಪೇಗೌಡ ವಿಮಾನ ನಿಲ್ದಾಣಗಳ ಸುತ್ತಮುತ್ತ ಕಟ್ಟಡಗಳ ಎತ್ತರದ ಮಿತಿಯಿಂದಾಗಿ ಮೂಲಸೌಕರ್ಯ ಅಭಿವೃದ್ಧಿಗೆ ಹಿನ್ನಡೆಯಾಗುತ್ತಿದೆ.

ಸಮಸ್ಯೆ: ಎತ್ತರದ ಮಿತಿಯಿಂದಾಗಿ ನಾಗರಿಕರು ಪ್ರೀಮಿಯಂ ಎಫ್‌ಎಆರ್ ಪಡೆಯಲು ಹಿಂಜರಿಯುತ್ತಿದ್ದಾರೆ, ಇದರಿಂದ ಸರ್ಕಾರಕ್ಕೆ ಬರಬೇಕಾದ ಆದಾಯವೂ ಕುಂಠಿತವಾಗಿದೆ.

ಮನವಿ: ಮುಂಬೈ ಮತ್ತು ಹೈದರಾಬಾದ್ ನಗರಗಳಲ್ಲಿರುವಂತೆ ಬೆಂಗಳೂರಿನಲ್ಲೂ ಕಟ್ಟಡಗಳ ಎತ್ತರದ ಮಿತಿಯನ್ನು ಸಡಿಲಿಸಬೇಕು. ಈ ಬಗ್ಗೆ ಕೇಂದ್ರ ಸಚಿವರು ರಕ್ಷಣಾ ಸಚಿವರೊಂದಿಗೆ ಚರ್ಚಿಸುವುದಾಗಿ ಭರವಸೆ ನೀಡಿದ್ದಾರೆ.

ಸ್ಕೈಡೆಕ್ ನಿರ್ಮಾಣ ಹಾಗೂ ನೈಸ್ ಸಂಸ್ಥೆಗೆ ಎಚ್ಚರಿಕೆ: ಬೆಂಗಳೂರಿನ ಹೆಮ್ಮೆಯ ಯೋಜನೆಯಾಗಲಿರುವ 'ಸ್ಕೈಡೆಕ್' ಅನ್ನು ಕೆಂಪೇಗೌಡ ಲೇಔಟ್‌ನಲ್ಲಿ ನಿರ್ಮಿಸಲು ನಿರ್ಧರಿಸಲಾಗಿದೆ ಎಂದು ಡಿಸಿಎಂ ತಿಳಿಸಿದರು. "ಎನ್.ಜಿ.ಎಫ್ ಅಥವಾ ನೈಸ್ ರಸ್ತೆ ಬಳಿ ಸ್ಕೈಡೆಕ್ ಮಾಡಲು ಯೋಜಿಸಲಾಗಿತ್ತು. ಆದರೆ ನೈಸ್ ಸಂಸ್ಥೆಯು ನಿರಾಕ್ಷೇಪಣಾ ಪತ್ರ ನೀಡದೆ ಅಸಹಕಾರ ತೋರಿದೆ. ಸರ್ಕಾರದ ಅಭಿವೃದ್ಧಿ ಕೆಲಸಗಳಿಗೆ ಅಡ್ಡಿಪಡಿಸುವವರಿಗೆ ಮುಂದಿನ ದಿನಗಳಲ್ಲಿ ತಕ್ಕ ಉತ್ತರ ನೀಡಲಾಗುವುದು," ಎಂದು ಅವರು ಖಡಕ್ ಎಚ್ಚರಿಕೆ ನೀಡಿದರು.

21/03/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ದೊಡ್ಡಬಳ್ಳಾಪುರ ನಗರದ ಡಿ. ಕ್ರಾಸ್‌ನಲ್ಲಿರುವ ಪುನೀತ್ ರಾಜ್‌ಕುಮಾರ್ ವೃತ್ತದಲ್ಲಿ ಕರ್ನಾಟಕ ರತ್ನ, ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಅವರ 51ನೇ ಜನ್ಮದಿನಾಚರಣೆಯನ್ನು ಡಿ.ಕ್ರಾಸ್ ಅಪ್ಪು ಅಭಿಮಾನಿ ಬಳಗದ ವತಿಯಿಂದ ಅತ್ಯಂತ ಸಡಗರ-ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಆಟೋ ಚಾಲಕರ ಸಂಘದ ಮಂಜು, ಕೇಬಲ್ ಆರ್. ರಮೇಶ್, ಚೆಲುವರಾಜು, ಪ್ರವೀಣ್, ಅಖಿಲೇಶ್, ಸಂತೋಷ್, ಕಾರ್ತಿಕ್, ಮಂಜು ಸೇರಿದಂತೆ ಸ್ಥಳೀಯ ಆರಕ್ಷಕ ಸಿಬ್ಬಂದಿ, ಅಭಿಮಾನಿಗಳು ಪಾಲ್ಗೊಂಡು ಜೈಕಾರಗಳನ್ನು ಕೂಗಿದರು.

## ಮೇ ಅಂತ್ಯಕ್ಕೆ ತುಂಗಭದ್ರಾ ಡ್ಯಾಂ 33 ಕ್ರಸ್ಟ್ ಗೇಟ್‌ಗಳ ಅಳವಡಿಕೆ ಪೂರ್ಣ

ಹೊಸಪೇಟೆ

ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಅವರು ಶುಕ್ರವಾರ ತುಂಗಭದ್ರಾ ಜಲಾಶಯದ ಮೇಲ್ಭಾಗಕ್ಕೆ ತೆರಳಿ, ತಾಂತ್ರಿಕ ತಂಡವು ನಡೆಸುತ್ತಿರುವ ಜಲಾಶಯದ ಕ್ರೆಸ್ಟ್ ಗೇಟ್ ಅಳವಡಿಕೆ ಕಾರ್ಯಗಳನ್ನು ಖುದ್ದು ವೀಕ್ಷಿಸಿದರು.

ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಚಿವರು, ಈಗಾಗಲೇ ತುಂಗಭದ್ರಾ ಜಲಾಶಯದ 18 ನೂತನ ಕ್ರಸ್ಟ್ ಗೇಟ್‌ಗಳ ಅಳವಡಿಕೆ ಕಾರ್ಯ ಪೂರ್ಣಗೊಂಡಿದ್ದು, 5 ಕ್ರಸ್ಟ್ ಗೇಟ್‌ಗಳ ಅಳವಡಿಕೆ ಕಾರ್ಯ ಪ್ರಗತಿಯಲ್ಲಿದೆ. ಮಾರ್ಚ್ ಅಂತ್ಯದ ವೇಳೆಗೆ ಒಟ್ಟು 23 ಗೇಟ್‌ಗಳ ಕೆಲಸ ಮುಗಿಯುವ ನಿರೀಕ್ಷೆಯಿದೆ.

ಎಕ್ಸ್‌ಪರ್ಟ್ ಟೀಮ್ ಮತ್ತು ಚೀಫ್ ಎಂಜಿನಿಯರ್‌ಗಳ ಪ್ರಕಾರ, ಗೇಟ್ ಬದಲಾವಣೆಯ ಸಮಯದಲ್ಲಿ ಹಳೆಯ ಅಣೆಕಟ್ಟಿನ ರಚನೆಗೆ ಯಾವುದೇ ತೊಂದರೆಯಾಗಿಲ್ಲ. ಏಪ್ರಿಲ್ ತಿಂಗಳಿನಲ್ಲಿ ಉಳಿದ 10 ಗೇಟ್‌ಗಳನ್ನು ಅಳವಡಿಸಿ, ಮೇ ಅಂತ್ಯದೊಳಗೆ ಎಲ್ಲಾ 33 ನೂತನ ಕ್ರಸ್ಟ್ ಗೇಟ್‌ಗಳ ಅಳವಡಿಕೆ ಕಾಮಗಾರಿ ಪೂರ್ಣಗೊಳ್ಳುವ ಭರವಸೆ ಇದೆ. ಕಾಮಗಾರಿಯು ನಿರೀಕ್ಷಿತ ಸಮಯಕ್ಕಿಂತ ವೇಗವಾಗಿ ಸಾಗುತ್ತಿದ್ದು, ಜೂನ್‌ನಲ್ಲಿ ಆರಂಭವಾಗುವ ಮುಂಗಾರು ಮಳೆಗಾಲದ ವೇಳೆಗೆ ಜಲಾಶಯವು ಸಂಪೂರ್ಣವಾಗಿ ಸಿದ್ಧವಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ತುಂಗಭದ್ರಾ ಜಲಾಶಯದಲ್ಲಿ ತುಂಬಿರುವ ಹೂಳಿನ ಸಮಸ್ಯೆಗೆ ಪರಿಹಾರವಾಗಿ 'ನವಲಿ' ಯೋಜನೆಯ ಪ್ರಸ್ತಾವನೆಯನ್ನು ಮಂಡಳಿ ಮತ್ತು ಸಂಬಂಧಿತ ರಾಜ್ಯ ಸರ್ಕಾರಗಳಿಗೆ ಕಳುಹಿಸಲಾಗಿದೆ.

ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರೊಂದಿಗೂ ಸಹ ಪತ್ರ ವ್ಯವಹಾರ ನಡೆಸಲಾಗಿದೆ. ಸಂಬಂದಪಟ್ಟ ಅಧಿಕಾರಿಗಳ ಮಟ್ಟದಲ್ಲಿ ಮಾತುಕತೆ ನಡೆಯುತ್ತಿದೆ.

ತೆಲಂಗಾಣ ಸರ್ಕಾರದೊಂದಿಗೂ ಸಮನ್ವಯ ಸಾಧಿಸಲು ಪ್ರಯತ್ನಿಸಲಾಗುತ್ತಿದ್ದು, ವಿವಿಧ ತಾಂತ್ರಿಕ ಕಾರಣಗಳಿಂದ ವಿಳಂಬವಾಗುತ್ತಿದೆ.

ಈ ತಾಂತ್ರಿಕ ಸಮಸ್ಯೆಗಳು ಬಗೆಹರಿದ ನಂತರ ಪೂರ್ಣ ಸಹಕಾರ ಸಿಗುವ ನಿರೀಕ್ಷೆಯಿದೆ. ಈ ಬಗ್ಗೆ ನಮ್ಮ ರಾಜ್ಯದ ವಿವಿಧ ಚುನಾಯಿತ ಪ್ರತಿನಿಧಿಗಳ ನಿಯೋಗವು ನವದೆಹಲಿಯಲ್ಲಿ ಜಲಶಕ್ತಿ ಸಚಿವಾಲಯದ ಅಧಿಕಾರಿಗಳು ಮತ್ತು ವಿವಿಧ ರಾಜ್ಯಗಳ ಸಂಸದರೊಂದಿಗೆ ಮಹತ್ವದ ಚರ್ಚೆ ನಡೆಸಲಾಗಿದೆ.

ಕೇಂದ್ರ ಸಚಿವರು ಮತ್ತು ಅಧಿಕಾರಿಗಳು ಕರ್ನಾಟಕದ ನೀರಾವರಿ ಯೋಜನೆಗಳ ಬಗ್ಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಚುನಾವಣಾ ನೀತಿ ಸಂಹಿತೆಯ ಪ್ರಕ್ರಿಯೆಗಳ ನಂತರ ಮತ್ತೊಂದು ಸುತ್ತಿನ ಸಭೆ ನಡೆಸಿ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಅಧ್ಯಕ್ಷರು ಹಾಗೂ ಮಸ್ಕಿ ಶಾಸಕರಾದ ಬಸವನಗೌಡ ತುರುವಿಹಾಳ, ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಕೊಪ್ಪಳ ಹೆಚ್ಚುವರಿ ಜಿಲ್ಲಾ ಪೊಲಿಸ್ ವರಿಷ್ಠಾಧಿಕಾರಿ ಆರ್.ಹೇಮಂತ್ ಕುಮಾರ್, ಟಿಬಿ ಬೋರ್ಡ್ ಹಾಗೂ ಕೆ.ಎನ್. ಎನ್.ಎಲ್. ಅಧಿಕಾರಿಗಳಾದ ಮುಖ್ಯ ಇಂಜಿನಿಯರ್ ಶ್ರೀನಿವಾಸ ಮಲ್ಲಿಗಿವಾಡ, ಎಇಇ ಧರ್ಮರಾಜ್ ಹಾಗೂ ಜ್ಞಾನೇಶ್ವರ, ಸೆಕ್ಷನ್ ಅಧಿಕಾರಿಗಳಾದ ಜಿ. ಕಿರಣ, ಪಂಪಾಪತಿ ಡಿ.ಕೆ. ಮತ್ತು ಹುಲಿರಾಜ್ ಸೇರಿದಂತೆ ಇತರೆ ಜನಪ್ರತಿನಿಧಿಗಳು

## 'ಸಂಬಳವಿಲ್ಲದೆ ಕಂಗೆಟ್ಟ ಪೌರಕಾರ್ಮಿಕರು'



ಮಾಲೂರು

ಕಳೆದ ನಾಲ್ಕು ತಿಂಗಳಿನಿಂದ ವೇತನ ಪಾವತಿಯಾಗದ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ನಗರಸಭೆಯ ಖಾಯಂ ಹಾಗೂ ಹೊರಗುತ್ತಿಗೆ ಪೌರಕಾರ್ಮಿಕರು ಮಂಗಳವಾರ ಬೆಳಿಗ್ಗೆ ಸ್ವಚ್ಛತಾ ಕಾರ್ಯ ಸ್ಥಗಿತಗೊಳಿಸಿ ನಗರಸಭೆ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ನಗರದಾದ್ಯಂತ ಕಸ ಬಳಿಯುವ ಮತ್ತು ಸ್ವಚ್ಛತೆ ಕಾಪಾಡುವ ಪೌರಕಾರ್ಮಿಕರಿಗೆ ದೀರ್ಘಕಾಲದಿಂದ ಸಂಬಳ ನೀಡದಿರುವುದು ಅವರ ಕುಟುಂಬ ನಿರ್ವಹಣೆಗೆ ಸಂಕಷ್ಟ ತಂದೊಡ್ಡಿದೆ. "ಹಬ್ಬ ಹರಿದಿನಗಳು ಹತ್ತಿರ ಬರುತ್ತಿದ್ದರೂ ಕೈಯಲ್ಲಿ ಹಣವಿಲ್ಲದೆ ಜೀವನ ನಡೆಸುವುದು ಕಷ್ಟಕರವಾಗಿದೆ," ಎಂದು ಪ್ರತಿಭಟನಾ ನಿರತ ಕಾರ್ಮಿಕರು ತಮ್ಮ ಅಳಲು ತೋಡಿಕೊಂಡರು.

ಪೌರಾಯುಕ್ತರ ಭರವಸೆ: ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಪೌರಾಯುಕ್ತ ಎಂ.ಎಸ್. ಮಹದೇವ ಅವರು ಪೌರಕಾರ್ಮಿಕರ ಮನವಿಗೆ ಸ್ಪಂದಿಸಿದರು. "ಕೆಲವು ತಾಂತ್ರಿಕ ಕಾರಣಗಳಿಂದಾಗಿ ವೇತನ ಪಾವತಿ ವಿಳಂಬವಾಗಿದೆ. ತಾಂತ್ರಿಕ ಸಮಸ್ಯೆಗಳನ್ನು ಶೀಘ್ರವಾಗಿ ಸರಿಪಡಿಸಿ, ಸದ್ಯಕ್ಕೆ ಎರಡು ತಿಂಗಳ ವೇತನವನ್ನು ನೇರವಾಗಿ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲಾಗುವುದು," ಎಂದು ಭರವಸೆ ನೀಡಿದರು.

ಪೌರಾಯುಕ್ತರ ಭರವಸೆಯ ನಂತರ ಪೌರಕಾರ್ಮಿಕರು ತಮ್ಮ ಪ್ರತಿಭಟನೆಯನ್ನು ಕೈಬಿಟ್ಟು, ನಗರದ ಸ್ವಚ್ಛತಾ ಕಾರ್ಯಕ್ಕೆ ಮರಳಿದರು.

ಈ ಸಂದರ್ಭದಲ್ಲಿ ನಗರಸಭೆಯ ಮಾಜಿ ಅಧ್ಯಕ್ಷ ಮುರುಳಿಧರ್, ಕಚೇರಿ ವ್ಯವಸ್ಥಾಪಕಿ ಮುಕ್ತಿಯರ್ ಜಾನು, ಮಾಜಿ ಸದಸ್ಯ ಎ. ರಾಜಪ್ಪ, ಪರಿಸರ ಅಭಿಯಂತರೆ ಶಾಲಿನಿ, ಹಿರಿಯ ಆರೋಗ್ಯ ನಿರೀಕ್ಷಕ ಶ್ರೀನಿವಾಸ್, ಕಿರಿಯ ಆರೋಗ್ಯ ನಿರೀಕ್ಷಕ ರಾಜಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅಪ್ಪು ಅಭಿಮಾನಿಗಳಿಂದ ಅನ್ನದಾಸೋಹ

ಬಂಗಾರಪೇಟೆ

ಕನ್ನಡದ ಖ್ಯಾತ ನಟ, ಕರ್ನಾಟಕ ರತ್ನ ಡಾ. ಪುನೀತ್ ರಾಜ್‌ಕುಮಾರ್ ಅವರ ಜನ್ಮದಿನವನ್ನು ತಾಲ್ಲೂಕಿನಾದ್ಯಂತ ಅಭಿಮಾನಿಗಳು ಅತ್ಯಂತ ಸಡಗರ–ಸಂಭ್ರಮದಿಂದ ಆಚರಿಸಿದರು. ಟಿ.ಎ. ನಾರಾಯಣಗೌಡರ ಕನ್ನಡ ಬಳಗ ಹಾಗೂ ಅಪ್ಪು ಅಭಿಮಾನಿ ಸಂಘದ ವತಿಯಿಂದ ವಿವಿಧ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಕೋಲಾರ ರಸ್ತೆಯ ತಿಮ್ಮಾಪುರ ಗೇಟ್ ಬಳಿ ಅದ್ದೂರಿಯಾಗಿ ನಡೆದ ಕಾರ್ಯಕ್ರಮದಲ್ಲಿ ಸುಮಾರು 10 ಕೆಜಿ ತೂಕದ ಬೃಹತ್ ಕೇಕ್ ಕತ್ತರಿಸುವ ಮೂಲಕ ಅಪ್ಪು ಹುಟ್ಟುಹಬ್ಬವನ್ನು ಆಚರಿಸಲಾಯಿತು. ಅಭಿಮಾನಿಗಳು ಪುನೀತ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಅವರ ಮಾನವೀಯ ಗುಣಗಳನ್ನು ಸ್ಮರಿಸಿದರು.

ಬಳಗದ ಅಧ್ಯಕ್ಷ ಮುನಿಸ್ವಾಮಿ ಮಾತನಾಡಿ, "ಪುನೀತ್ ರಾಜ್‌ಕುಮಾರ್ ಅವರು ಕೇವಲ ನಟರಾಗಿ ಉಳಿಯದೆ, ಅನಾಥಾಶ್ರಮಗಳು ಮತ್ತು ಶಾಲೆಗಳ ಮೂಲಕ ಸಾವಿರಾರು ಜನರಿಗೆ ಬೆಳಕಾಗಿದ್ದಾರೆ. ಅವರ ಸಮಾಜಮುಖಿ ಕಾರ್ಯಗಳು ಇಂದಿನ ಯುವ ಪೀಳಿಗೆಗೆ ಮಾದರಿ," ಎಂದು ಗುಣಗಾನ ಮಾಡಿದರು. ಕಾರ್ಯಕ್ರಮದಲ್ಲಿ ಮುಖಂಡರಾದ ಕಣಿಂಬೆಲೆ ಚಿನ್ನಪ್ಪ, ಅಶೋಕ್ ತಿಮ್ಮಾಪುರ, ಶಿವಕುಮಾರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಬಸವೇಶ್ವರ ಚಾಟ್ಸ್ ವತಿಯಿಂದ ಅನ್ನಸಂತರ್ಪಣೆ: ನಗರದ ನಂದಿ ಮೆಡಿಕಲ್ಸ್ ವೃತ್ತದ ಬಳಿ ಇರುವ 'ಬಸವೇಶ್ವರ ಚಾಟ್ಸ್' ವತಿಯಿಂದ ಸಾರ್ವಜನಿಕರಿಗೆ ವಿಶೇಷ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಮಾಲೀಕ ಪಾನೀಪುರಿ ಪಮ್ಮಿ ಮತ್ತು ಸಂಗಡಿಗರು ಉಚಿತವಾಗಿ ಬೂಂದಿ, ಪಲಾವ್ ಹಾಗೂ ಮೊಸರು ಬಜ್ಜಿಯನ್ನು ವಿತರಿಸಿ ಜನಮನ ಗೆದ್ದರು. ಸ್ಥಳೀಯರು ಈ ಸೇವಾ ಕಾರ್ಯವನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

ಅಭಿಮಾನಿಗಳಾದ ಮಹೇಶ್, ಬಾಲಕೃಷ್ಣ, ನಿತೀನ್, ಅಬಿ, ಅಕ್ಷಯ್ ಸೇರಿದಂತೆ ನೂರಾರು ಅಪ್ಪು ಭಕ್ತರು ಈ ಸಂಭ್ರಮದಲ್ಲಿ ಪಾಲ್ಗೊಂಡು ಜೈಕಾರಗಳನ್ನು ಕೂಗಿದರು.


## ಸಾಧಕಿಯರ ಆದರ್ಶ ಪ್ರತಿಯೊಬ್ಬರಿಗೂ ದಾರಿದೀಪವಾಗಲಿ: ಡಿಸಿ ಜಿ. ಪ್ರಭು

ಚಿಕ್ಕಬಳ್ಳಾಪುರ

"ಸಮಾಜದ ಪ್ರತಿ ಮನೆಯನ್ನು ಬೆಳಗುತ್ತಿರುವ ಮಹಿಳೆಯರು ಇಂದು ಎಲ್ಲಾ ಕ್ಷೇತ್ರಗಳಲ್ಲೂ ಮುಂಚೂಣಿಯಲ್ಲಿದ್ದಾರೆ. ಝಾನ್ಸಿ ರಾಣಿ ಲಕ್ಷ್ಮೀಬಾಯಿ, ಕಿತ್ತೂರು ಚೆನ್ನಮ್ಮರಂತಹ ಮಹಾನ್ ಸಾಧಕಿಯರ ಆದರ್ಶಗಳನ್ನು ಅಳವಡಿಸಿಕೊಳ್ಳುವುದೇ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ನೈಜ ಉದ್ದೇಶ," ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅಭಿಪ್ರಾಯಪಟ್ಟರು.

ನಗರದ ಕನ್ನಡ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೈನುಗಾರಿಕೆಯಲ್ಲಿ ಮಹಿಳೆಯರದ್ದೇ ಮೇಲುಗೈ: ಜಿಲ್ಲೆಯ ಆರ್ಥಿಕ ಪ್ರಗತಿಯಲ್ಲಿ ಮಹಿಳೆಯರ ಪಾತ್ರವನ್ನು ಶ್ಲಾಘಿಸಿದ ಜಿಲ್ಲಾಧಿಕಾರಿಗಳು, "ಜಿಲ್ಲೆಯಲ್ಲಿ 10 ಸಾವಿರಕ್ಕೂ ಹೆಚ್ಚು ಸ್ತ್ರೀಶಕ್ತಿ ಸಂಘಗಳಿದ್ದು, 1.20 ಲಕ್ಷ ಮಹಿಳೆಯರು ಸಕ್ರಿಯರಾಗಿದ್ದಾರೆ. ವಿಶೇಷವಾಗಿ ಹಾಲು ಉತ್ಪಾದನೆಯಲ್ಲಿ ಜಿಲ್ಲೆ ಮುಂಚೂಣಿಯಲ್ಲಿರಲು ಶೇ. 90 ರಷ್ಟು ಶ್ರಮಿಸುತ್ತಿರುವ ಮಹಿಳೆಯರೇ ಕಾರಣ," ಎಂದರು. ಅಲ್ಲದೆ, ಇಂದಿನ ಕೃತಕ ಬುದ್ಧಿಮತ್ತೆಯ (AI) ಕಾಲದಲ್ಲಿ ದೈಹಿಕ ಸಾಮರ್ಥ್ಯಕ್ಕಿಂತ ಬುದ್ಧಿಮತ್ತೆಗೆ ಹೆಚ್ಚಿನ ಪ್ರಾಧಾನ್ಯತೆ



ಇರುವುದರಿಂದ, ಚತುರಮತಿಗಳಾದ ಮಹಿಳೆಯರಿಗೆ ಮುಂದಿನ ದಿನಗಳಲ್ಲಿ ವಿಪುಲ ಅವಕಾಶಗಳಿವೆ ಎಂದು ಭವಿಷ್ಯ ನುಡಿದರು.

ಗ್ಯಾರಂಟಿ ಯೋಜನೆಗಳಿಂದ ಮಹಿಳಾ ಸಬಲೀಕರಣ: ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎನ್. ರಮೇಶ್ ಮಾತನಾಡಿ, "ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಪೂರಕವಾಗಿವೆ. ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ 1,480 ಕೋಟಿ ರೂ. ಹಾಗೂ ಶಕ್ತಿ ಯೋಜನೆಯಡಿ 388 ಕೋಟಿ ರೂ. ಸೇರಿದಂತೆ ವಿವಿಧ ಯೋಜನೆಗಳಡಿ ಕೋಟ್ಯಂತರ ರೂಪಾಯಿಗಳನ್ನು ಮಹಿಳೆಯರ ಉನ್ನತಿಗಾಗಿ ವೆಚ್ಚ ಮಾಡಲಾಗುತ್ತಿದೆ," ಎಂದು ಮಾಹಿತಿ ನೀಡಿದರು. ರಾಜ್ಯ ಬೀಜ ನಿಗಮದ ಅಧ್ಯಕ್ಷ ಆಂಜಿನಪ್ಪ ಮಾತನಾಡಿ, ಮಹಿಳೆಯರು ಇಂದು ಪುರುಷರಿಗಿಂತ ಮಿಗಿಲಾದ ಸಾಧನೆ ಮಾಡುತ್ತಿದ್ದಾರೆ. ಇದಕ್ಕೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರ ದಕ್ಷ ಕಾರ್ಯವೈಖರಿಯೇ ಸಾಕ್ಷಿ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ. ಸಿಇಒ ಡಾ. ವೈ. ನವೀನ್ ಭಟ್, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್, ಉಪ ಕಾರ್ಯದರ್ಶಿ ಅತಿಕ್ ಪಾಷಾ, ಡಿಎಚ್‌ಒ ಡಾ. ಮಹೇಶ್ ಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವೆಂಕಟೇಶರೆಡ್ಡಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಕೊರಟಗೆರೆ ಕಾಲೇಜು ವಿದ್ಯಾರ್ಥಿನಿಯರ ಕ್ರೀಡಾ ಸಾಧನೆ: ಖೋ-ಖೋ ಪಂದ್ಯಾವಳಿಯಲ್ಲಿ ರನ್ನರ್ ಅಪ್!

ಕೊರಟಗೆರೆ

ತುಮಕೂರು ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಆಯೋಜಿಸಿದ್ದ ಅಂತರ ಕಾಲೇಜು ಮಹಿಳಾ ಖೋ–ಖೋ ಪಂದ್ಯಾವಳಿಯಲ್ಲಿ ಕೊರಟಗೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿಯರು ಅತ್ಯುತ್ತಮ ಪ್ರದರ್ಶನ ನೀಡಿ ದ್ವಿತೀಯ ಸ್ಥಾನವನ್ನು ಅಲಂಕರಿಸಿದ್ದಾರೆ. ಈ ಸಾಧನೆಯ ಮೂಲಕ ವಿದ್ಯಾರ್ಥಿನಿಯರು ಕಾಲೇಜು ಹಾಗೂ ತಾಲ್ಲೂಕಿಗೆ ಕೀರ್ತಿ ತಂದಿದ್ದಾರೆ.

ಪಂದ್ಯಾವಳಿಯ ಉದ್ದಕ್ಕೂ ಹಣಾಹಣಿಯಿಂದ ಆಡಿದ ಕೊರಟಗೆರೆ ತಂಡವು ಕ್ರೀಡಾ ಸ್ಫೂರ್ತಿಯನ್ನು ಮೆರೆದು ಗಮನ ಸೆಳೆಯಿತು. ಸಾಧನೆ ಮಾಡಿದ ವಿದ್ಯಾರ್ಥಿನಿಯರನ್ನು ಕಾಲೇಜಿನ ಪ್ರಾಂಶುಪಾಲರಾದ ಈರಪ್ಪನಾಯಕ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಮುಕ್ತಕಂಠದಿಂದ ಶ್ಲಾಘಿಸಿ ಅಭಿನಂದಿಸಿದ್ದಾರೆ.

ತರಬೇತುದಾರರಿಗೆ ಗೌರವ: ವಿದ್ಯಾರ್ಥಿನಿಯರಿಗೆ ಯಶಸ್ವಿ ತರಬೇತಿ ನೀಡಿ, ಪಂದ್ಯಾವಳಿಯಲ್ಲಿ ಉತ್ತಮ ಪ್ರದರ್ಶನ ನೀಡಲು ಕಾರಣರಾದ ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕಿ ಸೌಭಾಗ್ಯ ಅವರ ಶ್ರಮವನ್ನು ಪ್ರಾಂಶುಪಾಲರು ಶ್ಲಾಘಿಸಿದರು. ಕ್ರೀಡಾ ಕ್ಷೇತ್ರದಲ್ಲಿ ತಾಲ್ಲೂಕಿನ ಪ್ರತಿಭೆಗಳು ರಾಜ್ಯ ಮತ್ತು ರಾಷ್ಟ್ರ ಮಟ್ಟಕ್ಕೆ ಬೆಳೆಯಲಿ ಎಂದು ಈ ಸಂದರ್ಭದಲ್ಲಿ ಹಾರೈಸಿದರು.

## ವರುಣನ ಆರ್ಭಟಕ್ಕೆ ಬಿಡದಿ ತತ್ತರ: ಹಣ್ಣಿನ ರಾಜ ಮಾವಿಗೆ ಆಲಿಕಲ್ಲು ಹೊಡೆತ!

ರಾಮನಗರ

ಕಳೆದ ಕೆಲವು ದಿನಗಳಿಂದ ಬಿಸಿಲ ಬೇಗೆಯಿಂದ ಕಂಗೆಟ್ಟಿದ್ದ ಬಿಡದಿ ಮತ್ತು ಸುತ್ತಮುತ್ತಲ ಗ್ರಾಮಗಳ ಜನತೆಗೆ ಮಂಗಳವಾರ ಸಂಜೆ ಸುರಿದ ಭಾರಿ ಆಲಿಕಲ್ಲು ಮಳೆ ತಂಪು ನೀಡಿದರೂ, ರೈತರ ಪಾಲಿಗೆ ಕಣ್ಣೀರು ತರಿಸಿದೆ. ಗುಡುಗು, ಮಿಂಚು ಸಹಿತ ಸುರಿದ ಗಾಳಿ ಮಳೆಗೆ ತಾಲ್ಲೂಕಿನ ಹಲವೆಡೆ ಕೃಷಿ ಬೆಳೆಗಳು ನಾಶವಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ.

ಸಂಜೆ 6ಕ್ಕೆ ಆರಂಭವಾದ ವರ್ಷಧಾರೆ: ಮಂಗಳವಾರ ಸಂಜೆ 5 ಗಂಟೆಯ ಸುಮಾರಿಗೆ ಆಕಾಶದಲ್ಲಿ ಮೋಡ ಕವಿದ ವಾತಾವರಣ ನಿರ್ಮಾಣವಾಗಿತ್ತು. ನಂತರ ಬೀಸಿದ ತಂಗಾಳಿಯೊಂದಿಗೆ ಆರಂಭವಾದ ಮಳೆ, ಸಂಜೆ 6ರ ವೇಳೆಗೆ ಗುಡುಗು–ಮಿಂಚಿನ ಅಬ್ಬರದೊಂದಿಗೆ ಅಬ್ಬರಿಸಿತು.



ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಸುರಿದ ಭಾರಿ ಮಳೆಯಿಂದಾಗಿ ಬಿಡದಿ ಪಟ್ಟಣದ ರಸ್ತೆಗಳು ಜಲಾವೃತಗೊಂಡು ಹೊಳೆಯಂತಾಗಿದ್ದವು. ಮುನ್ನೆಚ್ಚರಿಕಾ ಕ್ರಮವಾಗಿ ಪಟ್ಟಣದಾದ್ಯಂತ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲಾಗಿತ್ತು.

ರೈತರಿಗೆ ಆಘಾತ ಕೈಗೆ ಬಂದ ತುತ್ತು ಬಾಯಿಗಿಲ್ಲ: ಈ ಅಕಾಲಿಕ ಮಳೆ ಮತ್ತು ಗಾಳಿಯ ರಭಸಕ್ಕೆ ಬಿಡದಿ ಭಾಗದ ಪ್ರಮುಖ ಬೆಳೆಗಳಾದ ಮಾವು ಮತ್ತು ಬಾಳೆಗೆ ತೀವ್ರ ಹಾನಿಯಾಗಿದೆ. ಆಲಿಕಲ್ಲು ಬಿದ್ದ ಪರಿಣಾಮ ಗಿಡದಲ್ಲಿದ್ದ ಮಾವಿನ ಕಾಯಿಗಳು ಉದುರಿ ನೆಲಕಚ್ಚಿವೆ. ಗಾಳಿಯ ಹೊಡೆತಕ್ಕೆ ಹಲವೆಡೆ ಬಾಳೆ ಗಿಡಗಳು ನೆಲಕ್ಕುರುಳಿವೆ. ಕೆಲವು ಕಡೆ ಪಾಲಿಹೌಸ್‌ಗಳಿಗೂ ಹಾನಿಯಾಗಿದ್ದು, ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ ಎಂದು ರೈತರು ಅಳಲು ತೋಡಿಕೊಂಡಿದ್ದಾರೆ.

ಹೆದ್ದಾರಿ ಸಂಚಾರ ಅಸ್ತವ್ಯಸ್ತ: ಮಳೆಯ ಆರ್ಭಟದಿಂದಾಗಿ ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ಸಂಚಾರಕ್ಕೆ ಅಡ್ಡಿಯಾಯಿತು. ಮಳೆಯ ರಭಸಕ್ಕೆ ದಾರಿ ಕಾಣದೆ ವಾಹನ ಸವಾರರು ಎಕ್ಸ್‌ಪ್ರೆಸ್ ಹೈವೆಯ ಅಂಡರ್‌ಪಾಸ್‌ಗಳ ಕೆಳಗೆ ಆಶ್ರಯ ಪಡೆದರು. ದ್ವಿಚಕ್ರ ವಾಹನ ಸವಾರರು ಮಳೆಯಲ್ಲೇ ನೆನೆಯುತ್ತಾ ಸಾಗುತ್ತಿದ್ದ ದೃಶ್ಯಗಳು ಕಂಡುಬಂದವು. ಮಳೆ ಕಡಿಮೆಯಾದ ನಂತರ ವಾಹನ ಸಂಚಾರ ಸುಗಮವಾಯಿತು.

## ಆಧುನಿಕ ಸರ್ವಜ್ಞ ಡಿವಿಜಿ ಬದುಕು ವಿದ್ಯಾರ್ಥಿಗಳಿಗೆ ದಾರಿದೀಪ: ಬಸವರಾಜಪ್ಪ

ತಿಪಟೂರು

"ಮೆಟ್ರಿಕ್ ಪರೀಕ್ಷೆಯಲ್ಲಿ ಅನುತ್ತೀರ್ಣರಾದರೂ ಡಿ.ವಿ. ಗುಂಡಪ್ಪನವರು ಕನ್ನಡ ಸಾಹಿತ್ಯಕ್ಕೆ ನೀಡಿದ ಅಪಾರ ಕೊಡುಗೆಯಿಂದಾಗಿ 'ಆಧುನಿಕ ಸರ್ವಜ್ಞ' ಎನಿಸಿಕೊಂಡರು. ಪತ್ರಿಕೋದ್ಯಮದಲ್ಲಿ ಅವರ ಸಾಧನೆ ಇಂದಿನ ತಲೆಮಾರಿಗೆ ಅತ್ಯಂತ ಆದರ್ಶನೀಯ," ಎಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ. ಬಸವರಾಜಪ್ಪ ಅಭಿಪ್ರಾಯಪಟ್ಟರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎಪಿಜೆ ಅಬ್ದುಲ್ ಕಲಾಂ ಸಭಾಂಗಣದಲ್ಲಿ ಮಂಗಳವಾರ ಕಾಲೇಜಿನ ಪತ್ರಿಕೋದ್ಯಮ ವಿಭಾಗ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲ್ಲೂಕು ಘಟಕದ ವತಿಯಿಂದ ಆಯೋಜಿಸಿದ್ದ ಪತ್ರಕರ್ತರ ಸಂಘದ ಸಂಸ್ಥಾಪಕ ಡಿ.ವಿ. ಗುಂಡಪ್ಪನವರ ಜನ್ಮದಿನಾಚರಣೆಯಲ್ಲಿ ಅವರು ಮಾತನಾಡಿದರು.

ಬಡತನ ಮೆಟ್ಟಿ ನಿಂತ ಸಾಹಿತ್ಯ ಭೀಷ್ಮ: ಡಿವಿಜಿ ಅವರ ಬದುಕು ಮತ್ತು ಬರಹವನ್ನು ಪರಿಚಯಿಸಿದ ಬಸವರಾಜಪ್ಪನವರು, "ಬಡತನದ ಕುಟುಂಬದಿಂದ ಬಂದ ಅವರು ಮೆಟ್ರಿಕ್ ಫೇಲ್ ಆದರೂ, ಮುಂದೆ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗುವ ಮಟ್ಟಕ್ಕೆ ಬೆಳೆದದ್ದು ಅವರ ಜ್ಞಾನದ ಹಸಿವಿಗೆ ಸಾಕ್ಷಿ. ಪತ್ರಿಕೋದ್ಯಮದ ಭೀಷ್ಮ ಎಂದೇ ಕರೆಸಿಕೊಳ್ಳುವ ಅವರ ಆದರ್ಶದ ಹಾದಿಯಲ್ಲೇ ಇಂದು ಪತ್ರಕರ್ತರ ಸಂಘ ಕಾರ್ಯನಿರ್ವಹಿಸುತ್ತಿದೆ,"



ಎಂದರು.

ವಿಶ್ವಾಸಾರ್ಹತೆ ಕಳೆದುಕೊಳ್ಳದಿರಿ: ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಯಾನಂದ್ ಟಿ.ಎಸ್ ಮಾತನಾಡಿ, "ಡಿವಿಜಿ ಅವರಿಗೆ ಪತ್ರಿಕೋದ್ಯಮ ಕೇವಲ ವೃತ್ತಿಯಾಗಿರಲಿಲ್ಲ, ಅದು ಜನಜಾಗೃತಿಯ ಮಾರ್ಗವಾಗಿತ್ತು. ಆದರೆ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪತ್ರಿಕೆಗಳು ವಾಸ್ತವ ತಿಳಿಯದೆ ಸುದ್ದಿ ಪ್ರಕಟಿಸುವ ಮೂಲಕ ವಿಶ್ವಾಸಾರ್ಹತೆ ಕಳೆದುಕೊಳ್ಳುತ್ತಿವೆ," ಎಂದು ವಿಷಾದ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳಿಗೆ ಪತ್ರಿಕೋದ್ಯಮ ಪುಸ್ತಕ ವಿತರಣೆ: ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಶಶಿಕುಮಾರ್ ಎಚ್.ಸಿ ಅವರು, ವಿದ್ಯಾರ್ಥಿಗಳು ಜ್ಞಾನ ವೃದ್ಧಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ದಿನನಿತ್ಯ ಪತ್ರಿಕೆಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಇದೇ ಸಂದರ್ಭದಲ್ಲಿ ಪತ್ರಿಕೋದ್ಯಮದ ವಿದ್ಯಾರ್ಥಿಗಳಿಗೆ ಪತ್ರಕರ್ತರ ಸಂಘದ ವತಿಯಿಂದ ಪುಸ್ತಕಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಸಿದ್ದೇಶ್ವರ ಸಿಎನ್, ಉಪಾಧ್ಯಕ್ಷ ಪ್ರಶಾಂತ್ ಕರೀಕೆರೆ, ಖಜಾಂಚಿ ಕುಮಾರಸ್ವಾಮಿ, ನಿರ್ದೇಶಕರಾದ ಟಿಸಿಎಸ್ ಮೂರ್ತಿ, ಮನೋಹರ್ ರಂಗಾಪುರ ಸೇರಿದಂತೆ ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ಶಿವಕುಮಾರ ಸಿ.ಜಿ, ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಹಣಮಂತ ಕಾಂಬಳೆ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ದಾಹ ತಣಿಸಲು ಕಂಟ್ರೋಲ್ ರೂಂ ಆರಂಭ

ದೇವನಹಳ್ಳಿ

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬೇಸಿಗೆಯ ತೀವ್ರತೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಸಾರ್ವಜನಿಕರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ತಡೆಯಲು ಜಿಲ್ಲಾಡಳಿತ ಸಮರೋಪಾದಿಯಲ್ಲಿ ಸಜ್ಜಾಗಿದೆ. ನೀರಿನ ದೂರುಗಳನ್ನು ಸ್ವೀಕರಿಸಲು ಪ್ರತ್ಯೇಕ ಸಹಾಯವಾಣಿಯನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಒ ಡಾ. ಕೆ.ಎನ್. ಅನುರಾಧ ತಿಳಿಸಿದ್ದಾರೆ.

ವಾರದ ಏಳೂ ದಿನ ಸಹಾಯವಾಣಿ ಲಭ್ಯ: ಜಿಲ್ಲಾ ಪಂಚಾಯತ್‌ನ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದಲ್ಲಿ ವಿಶೇಷ ಕಂಟ್ರೋಲ್ ರೂಂ ಸ್ಥಾಪಿಸಲಾಗಿದೆ. ಸಾರ್ವಜನಿಕರು ಕುಡಿಯುವ ನೀರಿನ ಅಭಾವ ಕಂಡುಬಂದಲ್ಲಿ ದೂರವಾಣಿ ಸಂಖ್ಯೆ: 080–22221050 ಕ್ಕೆ ಕರೆ ಮಾಡಿ ದೂರು ದಾಖಲಿಸಬಹುದು. ಈ ಕೇಂದ್ರವು ವಾರದ ಏಳೂ ದಿನಗಳ ಕಾಲ ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಕಾರ್ಯನಿರ್ವಹಿಸಲಿದೆ. ಇಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿ ತಕ್ಷಣವೇ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ರವಾನಿಸಿ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಲಿದ್ದಾರೆ.

101 ಗ್ರಾಮಗಳಲ್ಲಿ ನೀರಿನ ಆತಂಕ: ಮುಂದಿನ ಮೂರು ತಿಂಗಳಲ್ಲಿ ಜಿಲ್ಲೆಯ ಸುಮಾರು 101 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೂರುವ ಸಾಧ್ಯತೆಯಿದೆ ಎಂದು ಗುರುತಿಸಲಾಗಿದೆ. ಅಂತಹ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆಯಲು ಹಾಗೂ ಖಾಸಗಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ನೀರಿನ ಶುದ್ಧತೆಗೆ ಆದ್ಯತೆ: ಕೇವಲ ನೀರು ಪೂರೈಕೆಯಷ್ಟೇ ಅಲ್ಲದೆ, ಸರಬರಾಜು ಮಾಡುವ ನೀರಿನ ಗುಣಮಟ್ಟದ ಮೇಲೆಯೂ ನಿಗಾ ಇಡಲಾಗುತ್ತಿದೆ. ಕುಡಿಯುವ ನೀರಿನ ಮೂಲಗಳನ್ನು ಕಾಲಕಾಲಕ್ಕೆ ಪರೀಕ್ಷೆಗೆ ಒಳಪಡಿಸಿ, ನೀರಿನ ಶುದ್ಧತೆಯನ್ನು ಖಚಿತಪಡಿಸಿಕೊಳ್ಳುವಂತೆ ಆರೋಗ್ಯ ಮತ್ತು ನೈರ್ಮಲ್ಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಡಾ. ಕೆ.ಎನ್. ಅನುರಾಧ ಮಾಹಿತಿ ನೀಡಿದ್ದಾರೆ.

## ಕರಗ ಮಹೋತ್ಸವಕ್ಕೆ ಕ್ಷಣಗಣನೆ



ಚಿಕ್ಕಬಳ್ಳಾಪುರ

ನಗರದ ಅಧಿದೇವತೆ ಶ್ರೀ ಗಂಗಮಾಂಬೆ ದೇವಾಲಯದ ಆವರಣದಿಂದ ಹೊರಡುವ ಐತಿಹಾಸಿಕ ಶ್ರೀ ಧರ್ಮರಾಯರ ಕರಗ ಮಹೋತ್ಸವವನ್ನು ಈ ವರ್ಷವೂ ಅತ್ಯಂತ ಸಡಗರ–ಸಂಭ್ರಮದಿಂದ ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಏ. 11 ರಂದು ನಡೆಯಲಿರುವ ಈ ಭವ್ಯ ಹೂವಿನ ಕರಗ ಮಹೋತ್ಸವದ ಯಶಸ್ಸಿಗೆ ಭಕ್ತಾದಿಗಳು ಹಾಗೂ ವಿವಿಧ ಸಂಘಟನೆಗಳು ಕೈಜೋಡಿಸಬೇಕು ಎಂದು ಕರಗ ಮಹೋತ್ಸವ ಸಮಿತಿ ಅಧ್ಯಕ್ಷ ಗಂಗಾಧರ ಮೂರ್ತಿ ಮನವಿ ಮಾಡಿದರು.

ನಗರದ ಗಂಗಮ್ಮಗುಡಿ ರಸ್ತೆಯಲ್ಲಿರುವ ಶ್ರೀ ಗಂಗಮಾಂಬೆ ದೇವಾಲಯದ ಆವರಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ನಗರದ ನಾಡಹಬ್ಬ ಎಂದೇ ಖ್ಯಾತಿಯಾಗಿರುವ ಈ ಕರಗ ಮಹೋತ್ಸವದ ಅಂಗವಾಗಿ ಏ. 6 ರಿಂದ ಏ. 13 ರವರೆಗೆ ಸತತ ಎಂಟು ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ. ಏ. 11 ರಂದು ರಾತ್ರಿ ನಗರದ ಪ್ರಮುಖ ರಸ್ತೆಗಳಲ್ಲಿ ಶ್ರೀ ಧರ್ಮರಾಯರ ಹೂವಿನ ಕರಗ ಸಂಚರಿಸಲಿದ್ದು, ಭಕ್ತ ಸಾಗರವೇ ಹರಿದುಬರುವ ನಿರೀಕ್ಷೆಯಿದೆ. ಈ ಸಂಪ್ರದಾಯಕ್ಕೆ ಯಾವುದೇ ಅಡೆತಡೆ ಉಂಟಾಗದಂತೆ ವ್ಯವಸ್ಥಿತವಾಗಿ ತಯಾರಿ ಮಾಡಿಕೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಸೇವಾ ಸಮಿತಿ ಅಧ್ಯಕ್ಷ ಹಾಗೂ ನಗರಸಭೆ ಮಾಜಿ ಅಧ್ಯಕ್ಷ ಕೆ.ವಿ. ಮಂಜುನಾಥ್ ಮಾತನಾಡಿ, "ಉತ್ಸವದ ಅಂಗವಾಗಿ ನಗರದಾದ್ಯಂತ ಸ್ವಯಂಪ್ರೇರಿತವಾಗಿ ಅನ್ನಸಂತರ್ಪಣೆ, ಸಾಂಸ್ಕೃತಿಕ ಕಾರ್ಯಕ್ರಮಗಳು, ವಾದ್ಯಗೋಷ್ಠಿಗಳು ಹಾಗೂ ನಾಟಕ ಪ್ರದರ್ಶನಗಳು ನಡೆಯಲಿವೆ. ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಸ್ವಯಂಸೇವಕರು ನಿಗಾ ವಹಿಸಬೇಕು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy